ಸಂಪುಟ: 13 Volume ಸಂಚಿಕೆ: 259 Issue ಪುಟಗಳು 08 Pages ಸೋಮವಾರ 01 ಡಿಸೆಂಬರ್ 2025 ₹2 RNINO:KARKAN/2011/48371 BDR/054/2026-2027 mallammanudi@gmail.com www.mallammanudi.in 9448604450

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

MN ಸತ್ಯಮೇವ ಜಯತೆ ಕನ್ನಡ ಕಿರಣ

Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ

**ಬೆಳಗು**

ನಮ್ಮನ್ನು ಅತ್ಯಂತ ಕೀಳಾಗಿ ಕಾಣುವ ಹಿಂದೂ ಧರ್ಮವನ್ನು ನನ್ನ ಧರ್ಮವೆಂದು ಹೇಗೆ ಕರೆಯಲಿ ? ಹೇಗೆ ಭಾವಿಸಲಿ ?

-ಡಾ.ಬಿಆರ್.ಅಂಬೇಡ್ಕರ್

ವಿದ್ಯಾರ್ಥಿಗಳು ಜ್ಞಾನ ವೃದ್ಧಿಸಿಕೊಳ್ಳಿ 6
ಕನ್ನಡ ಭಾಷೆ ಅನ್ನದ ಭಾಷೆಯಾಗಲಿ 7
ವಿದ್ಯಾರ್ಥಿಗಳಿಗೆ ವೈಜ್ಞಾನಿಕ ಮನೋಭಾವ 8



ಹುಲಸೂರು ತಾಲೂಕಿನ ಮುಚಳಂಬ ಗ್ರಾಮದ ಶ್ರೀ ಶಿವಯೋಗಿ ಸಂಸ್ಥಾನ ಮಠದಲ್ಲಿ ಪರಮಪೂಜ್ಯ ಶ್ರೀ ನಾಗಭೂಷಣ ಶಿವಯೋಗಿಗಳ 56ನೇ ಪುಣ್ಯ ಸ್ಮರಣೋತ್ಸವ ಅಂಗವಾಗಿ ಆಯೋಜಿಸಲಾದ ಸತ್ಸಂಗ ಸಮ್ಮೇಳನದಲ್ಲಿ ಬೀದರ ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀ ಈಶ್ವರ ಖಂಡ್ರೆ ಅವರು ಭಾಗವಹಿಸಿ ಪೂಜ್ಯ ಶ್ರೀ ನಾಗಭೂಷಣ ಶಿವಯೋಗಿಗಳ ಗದ್ದುಗೆಯ ದರ್ಶನ ಪಡೆದು ಮಾತನಾಡಿದರು. ಪವಾಡಪುರುಷರಾದ ಶ್ರೀ ನಾಗಭೂಷಣ ಶಿವಯೋಗಿಗಳ ತಪಸ್ಸು, ಸೇವಾಭಾವನೆ ಮತ್ತು ಸಮಾಜೋದ್ಧಾರ ಕಾರ್ಯಗಳು ಜನರಿಗೆ ಸದಾ ಪ್ರೇರಣಾದಾಯಕ. ಸಮಾಜದಲ್ಲಿ ಶಾಂತಿ, ಸಹಾನುಭೂತಿ ಮತ್ತು ಮನುಷ್ಯತ್ವ ಬೆಳೆಸುವ ಅವರ ಸಂದೇಶಗಳು ಇಂದಿಗೂ ಮಾರ್ಗದರ್ಶಕವಾಗಿವೆ ಎಂದು ತಿಳಿಸಿದರು. ಪರಮಪೂಜ್ಯ ಶ್ರೀ ಪ್ರಣವಾನಂದ ಮಹಾಸ್ವಾಮಿಗಳು ದಿವ್ಯ ಸಾನಿಧ್ಯ ವಹಿಸಿದ್ದು, ಕ್ಷೇತ್ರದ ರಾಜಕೀಯ ಗಣ್ಯರು, ಗ್ರಾಮಸ್ಥರು ಭಕ್ತಾದಿಗಳು ಉಪಸ್ಥಿತರಿದ್ದರು.

## ಕನ್ನಡ ರಾಜ್ಯದ ಅಸ್ಮಿತೆ: ಸಿಎಂ

**ಬೆಂಗಳೂರು:** ಅರೆಭಾಷೆಯಂತಹ ಪ್ರಾದೇಶಿಕ ಭಾಷೆಗಳು ಕನ್ನಡವನ್ನು ಶ್ರೀಮಂತಗೊಳಿಸಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.



ಅವರು ಇಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಕರ್ನಾಟಕ ಅರೆ ಭಾಷೆ ಸಂಸ್ಕೃತಿ ಮತ್ತು ಸಾಹಿತ್ಯ ಅಕಾಡೆಮಿ ಮಡಿಕೇರಿ ಇವರ ವತಿಯಿಂದ ರವೀಂದ್ರ ಕಲಾಕ್ಷೇತ್ರದಲ್ಲಿ ಆಯೋಜಿಸಲಾಗಿದ್ದ 2024ನೇ ಸಾಲಿನ ಅರೆ ಭಾಷೆ ಅಕಾಡೆಮಿ ಗೌರವ ಪ್ರಶಸ್ತಿ ಪ್ರದಾನ ಜಂಬರ ಕಾರ್ಯಕ್ರಮವನ್ನು ಉದ್ಘಾಟಿಸಿ, ಮಾತನಾಡಿದ್ದಾರೆ.

## ಕೈಗೆ ದೇಶದಲ್ಲಿ ಉಳಿವಿಲ್ಲ: ಛಲವಾದಿ

**ಚಿತ್ರದುರ್ಗ:** ಸಂವಿಧಾನ ರಕ್ಷಕರೆಂದು ಹೇಳಿಕೊಳ್ಳುವ ಹಾಗೂ ಸಂವಿಧಾನವನ್ನು ಕೈಯಲ್ಲಿ ಹಿಡಿದುಕೊಂಡು ಓಡಾಡುವ ಕಾಂಗ್ರೆಸ್ ಪಕ್ಷದ ಪ್ರಧಾನಿ ಇಂದಿರಾ ಗಾಂಧಿಯವರು 1975ರಲ್ಲಿ ಮಾಡಿದ್ದೇನು? ತುರ್ತು ಪರಿಸ್ಥಿತಿ ಹೇರಿ ಎರಡರಿಂದ ಎರಡೂವರೆ ವರ್ಷಗಳ ಕಾಲ ಸಂವಿಧಾನಕ್ಕೆ ಮೂರು ಕಾಸಿನ ಬೆಲೆ ಇಲ್ಲದಂತೆ ಮಾಡಿದ್ದು ಕಾಂಗ್ರೆಸ್ ಪಕ್ಷದವರು ಎಂದು ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಅವರು ಆಕ್ಷೇಪಿಸಿದ್ದಾರೆ.



ಇಂದು ಇಲ್ಲಿ ಅವರು ಮಾಧ್ಯಮಗಳ ಜೊತೆ ಮಾತನಾಡಿ, ಇವತ್ತು ತಾವು ಸಂವಿಧಾನ ರಕ್ಷಿಸುವುದಾಗಿ ಭಾಷಣ ಹೊಡೆಯುತ್ತಾರೆ ಎಂದು ಟೀಕಿಸಿದ್ದಾರೆ.

# ಪ್ರತಿ ಅಸ್ತ್ರ, ಕೇಂದ್ರ ಶಸ್ತ್ರ

## ಶಾಸನ, ಹಣಕಾಸು ವ್ಯವಹಾರಕ್ಕೆ ವೇದಿಕೆ । ರಾಜ್ಯ ಸಭೆ, ಲೋಕ ಸಭೆಯ ಕಲಾಪ ಇಂದು

• ಮಲ್ಲಮ್ಮ ನುಡಿ ನವದೆಹಲಿ

ಆಡಿತರೂಢ ಬಿಜೆಪಿಯನ್ನು ಕಟ್ಟಿ ಹಾಕಲು ಪ್ರತಿಪಕ್ಷಗಳು ಟೀಕಾಸ್ತ್ರ ಹೂಡಲು ಸಜ್ಜಾಗಿವೆ. ಪ್ರತಿಯಾಗಿ ಬಿಜೆಪಿ ಕೂಡ ಉತ್ತರದ ಶಸ್ತ್ರ ಹಿಡಿದೆ. ಲೋಕಸಭೆಯ 6ನೇ ಅಧಿವೇಶನ ಹಾಗೂ ರಾಜ್ಯಸಭೆಯ 269ನೇ ಅಧಿವೇಶನವು ಇಂದು (ಸೋಮವಾರ) ಡಿಸೆಂಬರ್ 1 ರಿಂದ ಪ್ರಾರಂಭವಾಗಲಿದೆ. ಈ ಹಿನ್ನೆಲೆಯಲ್ಲಿ, ಸಂಸತ್ತು ಹಲವಾರು ಶಾಸನ ಮತ್ತು ಹಣಕಾಸು ವ್ಯವಹಾರಗಳನ್ನು ಕೈಗೆತ್ತಿಕೊಳ್ಳಲು ಕೇಂದ್ರ ಸಿದ್ಧತೆ ಮಾಡಿಕೊಂಡಿದೆ.

ಸಂಸತ್ತಿನ ಮುಂಬರುವ ಅಧಿವೇಶನದಲ್ಲಿ ಪ್ರಮುಖ ಶಾಸಕಾಂಗ ಮತ್ತು ಹಣಕಾಸು ವ್ಯವಹಾರಗಳನ್ನು ಕೈಗೆತ್ತಿಕೊಳ್ಳಲು ನಿರ್ಧರಿಸಿಗಿದೆ. ಈ ಕಾರ್ಯಸೂಚಿಯ ಭಾಗವಾಗಿ, ರಾಷ್ಟ್ರಪತಿಯವರು ಆರೋಗ್ಯ ಭದ್ರತೆ ಮತ್ತು ರಾಷ್ಟ್ರೀಯ ಭದ್ರತಾ ಸೆಸ್ ಮಸೂದೆ, ಮಣಿಪುರ ಸರಕು ಮತ್ತು ಸೇವಾ ತೆರಿಗೆ (ಎರಡನೇ ತಿದ್ದುಪಡಿ) ಮಸೂದೆ ಮತ್ತು ಕೇಂದ್ರೀಯ ಅಬಕಾರಿ (ತಿದ್ದುಪಡಿ) ಮಸೂದೆ ಸೇರಿದಂತೆ ಹಲವಾರು ಪ್ರಮುಖ ಮಸೂದೆಗಳನ್ನು ಮಂಡಿಸಲು ಶಿಫಾರಸು ಮಾಡಿದ್ದಾರೆ.



### ಹಣಕಾಸು ವ್ಯವಹಾರಗಳು

ಸಂಸತ್ತು 2025–26 ರ ಪೂರಕ ಬೇಡಿಕೆಗಳ ಅನುದಾನಗಳ ಮೊದಲ ಹಂತದ ಮಂಡನೆ, ಚರ್ಚೆ ಮತ್ತು ಮತದಾನವನ್ನು ನಿಭಾಯಿಸಲಿದೆ. ಅದಕ್ಕೆ ಸಂಬಂಧಿಸಿದ ವಿತರಣಾ ಮಸೂದೆಯನ್ನು ಪರಿಚಯಿಸುವುದು, ಪರಿಗಣಿಸುವುದು ಮತ್ತು ಅಂಗೀಕರಿಸುವುದು ಅಥವಾ ಹಿಂತಿರುಗಿಸುವ ಕೆಲಸ ನಡೆಯಲಿದೆ.

### ಅಧಿವೇಶನದ ಅವಧಿಯೇನು..?

ಕೇಂದ್ರ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಘೋಷಿಸಿರುವಂತೆ, ಸಂಸತ್ತಿನ ಚಳಿಗಾಲದ ಅಧಿವೇಶನವು ಡಿಸೆಂಬರ್ 1 ರಂದು ಪ್ರಾರಂಭವಾಗಿ ಡಿಸೆಂಬರ್ 19 ರವರೆಗೆ ನಡೆಯಲಿದೆ. ಈ 19 ದಿನಗಳ ಅವಧಿಯಲ್ಲಿ ಒಟ್ಟು 15 ಕಲಾಪಗಳು ನಡೆಯಲಿವೆ. ಡಿಸೆಂಬರ್ 5 ಮತ್ತು 19 ರಂದು ಖಾಸಗಿ ಸದಸ್ಯರ ಮಸೂದೆಗಳನ್ನು ಮತ್ತು ಡಿಸೆಂಬರ್ 12 ರಂದು ಖಾಸಗಿ ಸದಸ್ಯರ ನಿರ್ಣಯಗಳನ್ನು ಪರಿಗಣನೆಗೆ ತೆಗೆದುಕೊಳ್ಳಲಾಗುವುದು.

### ಅಧಿವೇಶನದ ಪ್ರಮುಖ ಹೈಲೈಟ್..?

» ಆರೋಗ್ಯ ಭದ್ರತೆ ಮತ್ತು ರಾಷ್ಟ್ರೀಯ ಭದ್ರತಾ ಸೆಸ್ ಮಸೂದೆ, 2025: ಈ ಮಸೂದೆಯನ್ನು ಪರಿಚಯಿಸಲು ಮತ್ತು ಪರಿಗಣಿಸಲು ರಾಷ್ಟ್ರಪತಿಯವರು ಸಂವಿಧಾನದ 117ನೇ ವಿಧಿಯ (1) ಮತ್ತು 274ನೇ ವಿಧಿಯ (1) ರ ಅಡಿಯಲ್ಲಿ ಶಿಫಾರಸು ಮಾಡಿದ್ದಾರೆ.

» ಮಣಿಪುರ ಸರಕು ಮತ್ತು ಸೇವಾ ತೆರಿಗೆ (ಎರಡನೇ ತಿದ್ದುಪಡಿ) ಮಸೂದೆ, 2025: ಈ ಮಸೂದೆಯ ಪರಿಚಯ ಮತ್ತು ಪರಿಗಣನೆಗೆ ಸಂವಿಧಾನದ 207ನೇ ವಿಧಿಯ (1) ಮತ್ತು (3) ರ ಅಡಿಯಲ್ಲಿ ರಾಷ್ಟ್ರಪತಿಯವರ ಅನುಮತಿ ದೊರೆತಿದೆ.

» ಕೇಂದ್ರೀಯ ಅಬಕಾರಿ (ತಿದ್ದುಪಡಿ) ಮಸೂದೆ, 2025: ಈ ಮಸೂದೆಗೂ ಸಹ 117 ಮತ್ತು 274ನೇ ವಿಧಿಗಳ ಅಡಿಯಲ್ಲಿ ಅನುಮೋದನೆ ನೀಡಲಾಗಿದೆ.

### ಪ್ರತಿ ಪಕ್ಷಗಳ ಪ್ರತಿಭಟನಾಸ್ತ್ರ..?

ಸೋಮವಾರ, ಸಂಸತ್ತಿನಲ್ಲಿ ರಾಜ್ಯಸಭೆಯ ವಿರೋಧ ಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ ಅವರ ಕಚೇರಿಯಲ್ಲಿ ಇಂಡಿಯಾ ಮೈತ್ರಿಕೂಟದ ಸದನ ನಾಯಕರ ಸಭೆಯನ್ನು ಕರೆಯಲಾಗಿದೆ. ಕಾಂಗ್ರೆಸ್ ಪಕ್ಷವು ಆಪರೇಷನ್ ಸಿಂಧೂರ ಸಮಯದಲ್ಲಿ ಭಾರತ ಮತ್ತು ಪಾಕಿಸ್ತಾನದ ನಡುವಿನ ಕದನ ವಿರಾಮಕ್ಕೆ ಮಧ್ಯಸ್ಥಿಕೆ ವಹಿಸುವ ಕುರಿತು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಪುನರಾವರ್ತಿತ ಹೇಳಿಕೆಗಳ ಬಗ್ಗೆ ಮತ್ತು ಚೀನಾದೊಂದಿಗಿನ ವ್ಯಾಪಾರ ಒಪ್ಪಂದಗಳು ಹಾಗೂ ಸಮಸ್ಯೆಗಳ ಕುರಿತು ಚರ್ಚೆಗೆ ಒತ್ತಾಯಿಸುವ ಸಾಧ್ಯತೆಯಿದೆ.

## ಹಿರಿಯ ನಟ ಉಮೇಶ್ ಇನ್ನಿಲ್ಲ

• ಮಲ್ಲಮ್ಮ ನುಡಿ ಬೆಂಗಳೂರು

ತೀವ್ರ ಅನಾರೋಗ್ಯದಿಂದ ಬಳಲುತ್ತಿದ್ದ ಸ್ಯಾಂಡಲ್‌ವುಡ್ ಹಿರಿಯ ನಟ ಎಂ.ಎಸ್.ಉಮೇಶ್ ಭಾನುವಾರ ವಿಧಿವಶರಾಗಿದ್ದಾರೆ.

ಅನಾರೋಗ್ಯದಿಂದಾಗಿ ಹಲವು ದಿನಗಳಿಂದ ಆಸ್ಪತ್ರೆಯಲ್ಲಿ ಅವರು ಚಿಕಿತ್ಸೆ ಪಡೆಯುತ್ತಿದ್ದ ಉಮೇಶ್ ಅವರು, ಚಿಕಿತ್ಸೆ ಫಲಕಾರಿಯಾಗದೆ ಇಂದು ಕಿದ್ವಾಯಿ ಆಸ್ಪತ್ರೆಯಲ್ಲಿ ಕೊನೆಯುಸಿರೆಳೆದಿದ್ದಾರೆ.



ಎಂ. ಎಸ್. ಉಮೇಶ್ ಮೈಸೂರಿನಲ್ಲಿ ಏಪ್ರಿಲ್ 22, 1945ರಲ್ಲಿ ಜನಿಸಿದ್ದರು. ರಂಗಭೂಮಿ ಮತ್ತು ಚಲನಚಿತ್ರ ನಟರಾಗಿ 1948ರಿಂದ ಸಕ್ರಿಯರಾಗಿದ್ದರು.

ಮಕ್ಕಳ ರಾಜ್ಯ, ಭಾಗ್ಯವಂತರು, ಕಿಲಾಡಿ ಜೋಡಿ, ಗುರು ಶಿಷ್ಯರು, ಭೂಮಿಗೆ ಬಂದ ಭಗವಂತ, ಹಾಲು ಜೇನು, ಕಾಮನಬಿಲ್ಲು, ಅಪೂರ್ವ ಸಂಗಮ, ಶೃತಿ ಸೇರಿದಾಗ, ಮೇಘ ಮಂದಾರ, ಆಕಸ್ಮಿಕ, ಸರ್ವರ್ ಸೋಮಣ್ಣ, ಮೇಘಮಾಲೆ, ನನ್ನಾಸೆಯ ಹೂವೆ, ಜಾಕಿ, ಯಾರ್ಂಬೊ, ಮುಸ್ಸಂಜೆ ಮಾತು, ಡೇರ್ ಡೆವಿಲ್ ಮುಸ್ತಫಾ, ಹಗಲುವೇಷ ಸೇರಿದಂತೆ 350ಕ್ಕೂ ಹೆಚ್ಚು ಚಿತ್ರಗಳಲ್ಲಿ ನಟಿಸಿದ್ದಾರೆ.

## ಭಗವದ್ಗೀತಾ ಅಭಿಯಾನಕ್ಕೆ ಗಣ್ಯರ ಚಾಲನೆ

• ಮಲ್ಲಮ್ಮ ನುಡಿ ಶಿವಮೊಗ್ಗ

ಶ್ರೀ ಭಗವದ್ಗೀತಾ ಅಭಿಯಾನ 2025; ರಾಜ್ಯಮಟ್ಟದ ಮಹಾಸಮರ್ಪಣೆ ಕಾರ್ಯಕ್ರಮದಲ್ಲಿ ಕೇಂದ್ರ ಸಚಿವರಾದ ಶ್ರೀ HD ಕುಮಾರಸ್ವಾಮಿ ಭಾಗವಹಿಸಿದರು.

ಶ್ರೀ ಸೋಂದಾ ಸ್ವರ್ಣವಲ್ಲೀ ಮಹಾಸಂಸ್ಥಾನದ ಪರಮಪೂಜ್ಯ ಶ್ರೀಮಜ್ಜಗದ್ಗುರು ಶಂಕರಾಚಾರ್ಯ ಶ್ರೀ ಶ್ರೀ ಶ್ರೀಮದ್ ಗಂಗಾಧರೇಂದ್ರ ಸರಸ್ವತೀ ಮಹಾಸ್ವಾಮಿಗಳು, ಹರಿಹರಪುರದ ಶ್ರೀ ಆದಿಶಂಕರಾಚಾರ್ಯ ಶ್ರೀ ಶಾರದಾ ಲಕ್ಷ್ಮೀನೃಸಿಂಹ ಪೀಠದ ಪರಮಪೂಜ್ಯ ಶ್ರೀಮಜ್ಜಗದ್ಗುರು ಶಂಕರಾಚಾರ್ಯ ಶ್ರೀ ಶ್ರೀ ಸ್ವಯಂಪ್ರಕಾಶ ಸಚ್ಚಿದಾನಂದ ಸರಸ್ವತೀ ಮಹಾಸ್ವಾಮಿಗಳು, ಬೆಕ್ಕಿನಕಲ್ಮಠದ ಡಾ. ಶ್ರೀ ಶ್ರೀ ಮಲ್ಲಿಕಾರ್ಜುನ ಮುರುಘರಾಜೇಂದ್ರ ಮಹಾಸ್ವಾಮಿಗಳು, ಶಿವಮೊಗ್ಗದ ಶ್ರೀ ಆದಿಚುಂಚನಗಿರಿ ಮಹಾಸಂಸ್ಥಾನ ಶಾಖಾಮಠದ ಪರಮಪೂಜ್ಯ ಶ್ರೀ ಶ್ರೀ ನಾದಮಯಾನಂದನಾಥ ಮಹಾಸ್ವಾಮಿಗಳು ದಿವ್ಯ ಸಾನ್ನಿಧ್ಯ ವಹಿಸಿದ್ದರು.



ಹಿರಿಯರು, ರಾಜ್ಯದ ಮಾಜಿ ಮುಖ್ಯಮಂತ್ರಿ ಶ್ರೀ ಯಡಿಯೂರಪ್ಪ, ಮಾಜಿ ಉಪ ಮುಖ್ಯಮಂತ್ರಿ ಕೆ ಎಸ್ ಈಶ್ವರಪ್ಪ, ಸಂಸದರಾದ ಶ್ರೀ ರಾಘವೇಂದ್ರ, ವಿಧಾನ ಪರಿಷತ್ ಸದಸ್ಯ ಡಿ.ಎಸ್. ಅರುಣ್

## ಪ್ರತಿಯೊಂದು ಸಮಾಜದ ಪ್ರಗತಿಗೆ ಬೇಕು ಶಿಕ್ಷಣ

**ಯಾದಗಿರಿ:** ಪ್ರತಿಯೊಂದು ಸಮಾಜದ ಅಭಿವೃದ್ಧಿಗೆ ಶಿಕ್ಷಣ ಅತ್ಯಂತ ಅಗತ್ಯವಾಗಿದ್ದು, ಪ್ರತಿಯೊಬ್ಬ ಪಾಲಕರು ತಮ್ಮ ಮಕ್ಕಳಿಗೆ ಶಿಕ್ಷಣ ಕೊಡುವುದರ ಜೊತೆಗೆ ಕುಟುಂಬ, ಸಮಾಜದ ಪ್ರಗತಿಗೆ ಚಿಂತಿಸಬೇಕು ಎಂದು ಗುರುಮಠಕಲ್ ಶಾಸಕ ಶರಣಗೌಡ ಕಂದಕೂರ ಹೇಳಿದರು.

ತಾಲೂಕಿನ ಯಡ್ಡಳ್ಳಿ ಗ್ರಾಮದಲ್ಲಿ ಶ್ರೀ ಮಹರ್ಷಿ ವಾಲ್ಮೀಕಿ ಪುತ್ಥಳಿ ಅನಾವರಣ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.



ಮಹರ್ಷಿ ವಾಲ್ಮೀಕಿ ಅವರ ಉಪದೇಶಗಳು, ಸಾಹಿತ್ಯದ ಮಹತ್ವ ಮತ್ತು ಸಂಸ್ಕೃತಿಯ ಪರಂಪರೆಯನ್ನು ಉಳಿಸುವ ಅಗತ್ಯವನ್ನು ವಿವರಿಸಿದರು.

ಮಹರ್ಷಿ ವಾಲ್ಮೀಕಿ ಬರೆದಿರುವ ರಾಮಾಯಣವನ್ನು ಪ್ರತಿ ಯೊಬ್ಬರೂ ಓದಬೇಕು ಮತ್ತು ಅದರಲ್ಲಿರುವ ಪ್ರತಿಯೊಂದು ವಿಚಾರವನ್ನು ಅರಿತುಕೊಳ್ಳಬೇಕು. ಮುಂದಿನ ಪೀಳಿಗೆಯೂ ರಾಮಾಯಣವನ್ನು ಅರ್ಥಮಾಡಿಕೊಳ್ಳುವ ನಿಟ್ಟಿನಲ್ಲಿ ಹೆಜ್ಜೆ ಇಡೋಣ ಎಂದು ಹೇಳಿದರು.

ಗೊಲ್ಲಂಪಲ್ಲಿ ಶ್ರೀ ವಾಲ್ಮೀಕಿ ವರದಾನಂದೇಶ್ವರ ಮಹಾಸ್ವಾಮಿಗಳು ಸಾನ್ನಿಧ್ಯವಹಿಸಿ ಮಾತನಾಡಿ, ಸಮಾಜದ ಏಳ್ಗೆಗೆ ವಾಲ್ಮೀಕಿ ಮಹರ್ಷಿಯ ಚಿಂತನೆಗಳು ಅತ್ಯವಶ್ಯಕವಾಗಿದ್ದು, ಪ್ರತಿಯೊಬ್ಬರೂ ವಾಲ್ಮೀಕಿ ರಾಮಾಯಣವನ್ನು ಓದಬೇಕು, ತಮ್ಮ ಮಕ್ಕಳಿಗೆ ವಾಲ್ಮೀಕಿ ರಾಮಾಯಣದಲ್ಲಿನ ತತ್ವಗಳು, ಆದರ್ಶಗಳು, ಚಿಂತನೆಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳುವಂತೆ ಸಲಹೆ ನೀಡಬೇಕು ಎಂದು ಹೇಳಿದರು. ಈ ಸಂದರ್ಭದಲ್ಲಿ ಭೋಜನಗೌಡ ಯಡ್ಡಳ್ಳಿ, ಬಾಚವಾರ ಸೇರಿದಂತೆ ಇತರರಿದ್ದರು.

## ಎಲ್ಲಿದ್ದಾರೆ ಬಿಜೆಪಿ ಉಸ್ತುವಾರಿ?

**ಬೆಂಗಳೂರು:** ರಾಜ್ಯಕಾಂಗ್ರೆಸ್‌ನಲ್ಲಿ ಸಿಎಂ ಪಟ್ಟಕ್ಕಾಗಿ ಕಾದಾಟ ಜಾರಿಯಲ್ಲಿದೆ. ಈ ಸಮಯವನ್ನು ಬಳಸಿಕೊಳ್ಳಬೇಕಾದ ರಾಜ್ಯ ಬಿಜೆಪಿ ಮೌನಕ್ಕೆ ಶರಣಾಗಿರುವುದು ಚರ್ಚೆಗೆ ಗ್ರಾಸವೊದಗಿಸಿದೆ. ಬಿಜೆಪಿಯನ್ನು ಎಚ್ಚರಿಸಬೇಕಾದ ಉಸ್ತುವಾರಿಯೇ ಕರ್ನಾಟಕದಲ್ಲಿ ಕಣ್ಮರೆಯಾಗಿದೆ. ಆಡಳಿತಾರೂಢ ಪಕ್ಷದಲ್ಲಿನ ಆಂತರಿಕ ಕಲಹದ ಲಾಭ ಪಡೆಯಲು ರಣತಂತ್ರ ರೂಪಿಸಬೇಕಿದ್ದ ರಾಧಾ ಮೋಹನ್ ದಾಸ್‌ಅಗರ್ವಾಲ್, ರಾಜ್ಯದಲ್ಲಿ ಪಕ್ಷ ಸಂಘಟನೆಯತ್ತ ಮುಖ ಹಾಕದೇ ತಿಂಗಳುಗಳೇ ಕಳೆದಿವೆ.

ರಾಜ್ಯ ಬಿಜೆಪಿಯಲ್ಲಿನ ಹತ್ತು ಹಲವು ಗೊಂದಲಗಳಿಂದ ಸಂಘಟನೆ ಸಂಪೂರ್ಣ ಕುಸಿದಿದ್ದರೂ ಹೆಚ್ಚು ತಲೆಕೆಡಿಸಿಕೊಳ್ಳದ ರಾಧಾಮೋಹನ್, ನಾಮಕಾವಾಸ್ತೆಯ ಉಸ್ತುವಾರಿ ಎಂದು ವಿಶ್ಲೇಷಿಸಲಾಗುತ್ತದೆ.

ಕರ್ನಾಟಕದಲ್ಲಿ ಬಿಜೆಪಿ ರಾಜ್ಯಾಧ್ಯಕ್ಷರ ನೇಮಕ ಇಲ್ಲವೇ ಮುಂದುವರಿಕೆಯ ಗೊಂದಲ ಇನ್ನೂ ಹಾಗೆ ಮುಂದುವರಿದಿದೆ. ಈ ಹೊತ್ತಿನಲ್ಲಿ ರಾಜ್ಯ ನಾಯಕರಿಗೆ ನಿರ್ದೇಶನ ನೀಡಬೇಕಿದ್ದ ಅವರು ಇಲ್ಲಿಯವರೆಗೆ ಬೆರಳೆಣಿಕೆಯಷ್ಟು ಬಾರಿ ರಾಜ್ಯಕ್ಕೆ ಭೇಟಿ ಕೊಟ್ಟಿದ್ದು, ಇತ್ತೀಚಿಗೆ ಬಂದು ಹೋಗುವುದೂ ಕೂಡ ಗೊತ್ತಾಗುತ್ತಿಲ್ಲ ಎಂಬ ಬಲವಾದ ಕೂಗು ಕಾರ್ಯಕರ್ತರಲ್ಲಿ ಕೇಳಿಬರುತ್ತಿದೆ. ಕಳೆದ ವರ್ಷ ಜುಲೈನಲ್ಲಿ ರಾಜ್ಯ ಬಿಜೆಪಿ ಉಸ್ತುವಾರಿಯಾಗಿ ರಾಧಾ ಮೋಹನ್‌ದಾಸ್ ಅಗರ್ವಾಲ್‌ರನ್ನು ನೇಮಕ ಮಾಡಲಾಗಿತ್ತು. ರಾಧಾ ಮೋಹನ್‌ದಾಸ್ ಅಗರ್ವಾಲ್ ರಾಜ್ಯದಲ್ಲಿ ಲೋಕಸಭಾ ಚುನಾವಣೆಯ ಉಸ್ತುವಾರಿಯಾಗಿ ಕೆಲಸ ನಿರ್ವಹಿಸಿದ್ದರು. ರಿ ಶಾಸಕರಾಗಿದ್ದ ಸದ್ಯ ರಾಜ್ಯಸಭಾ ಸದಸ್ಯರೂ ಆಗಿದ್ದಾರೆ.

## ಅಲ್ಲಿ ತಂಗಾಳಿ ಇಲ್ಲಿ ಚಳಿ ಚಳಿ

• ಮಲ್ಲಮ್ಮ ನುಡಿ ಬೆಂಗಳೂರು

ಡಿಟ್ವಾ ಚಂಡಮಾರುತದ ಪ್ರಭಾವದಿಂದ ರಾಜಧಾನಿ ಬೆಂಗಳೂರು ನಗರದಲ್ಲಿ ವಿಪರೀತ ಚಳಿಗಾಳಿ ಶುರುವಾಗಿದೆ.

ಮೈ ನಡುಗುವಷ್ಟು ಚಳಿಯ ಅನುಭವ ಆಗುತ್ತಿದೆ. ಮುಂಜಾನೆ, ಸಂಜೆಯ ಒತೆಗೆ ದಿನವಿಡಿಯೂ ಕಳೆದೆರಡು ದಿನದಿಂದ ಮೋಡ ತುಂಬಿದ್ದು, ಇವತ್ತೂ ಕೂಡಾ ಇದೇ ವಾತಾವರಣ ಇರಲಿದೆ. ಡಿಸೆಂಬರ್ 1 ರಿಂದ ಬಿಸಿಲು ಬೀಳುವ ಸಾಧ್ಯತೆ ಇದೆ. ಹೌದು ಸದ್ಯ ಶ್ರೀಲಂಕಾ ಬಳಿ ಇದ್ದ ಡಿಟ್ವಾ ಚಂಡಮಾರುತದ ತಮಿಳುನಾಡಿನ ದಕ್ಷಿಣ ಕರಾವಳಿಗೆ (ನ.30) ತಲುಪಲಿದೆ. ಇದರ ಪ್ರಭಾವದಿಂದ ಕರ್ನಾಟಕದ ದಕ್ಷಿಣ ಒಳನಾಡಿನ ಜಿಲ್ಲೆಗಳಲ್ಲಿ ಸಾಧಾರಣ ಮಳೆಯಾಗಲಿದೆ. ಬೆಂಗಳೂರು ನಗರ ಸೇರಿದಂತೆ ಸುತ್ತಮುತ್ತಲಿನ ಜಿಲ್ಲೆಗಳಲ್ಲಿ ಇಂದು ಹಗುರದಿಂದ ಸಾಧಾರಣವಾಗಿ ಮಳೆಯಾಗುವ ಸಾಧ್ಯತೆ ಇದೆ.

### ಈ ಜಿಲ್ಲೆಗಳಲ್ಲಿ ಮಳೆ ಸಾಧ್ಯತೆ

ಬೀದರ್, ಯಾದಗಿರ್, ಕಲ್ಬುರಗಿ, ತುಮಕೂರು, ಚಿಕ್ಕಬಳ್ಳಾಪುರ, ಕೋಲಾರ, ಬೆಂಗಳೂರು ಗ್ರಾಮಾಂತರ, ಬೆಂಗಳೂರು ನಗರ, ರಾಮನಗರ, ಚಾಮರಾಜನಗರ, ಮೈಸೂರು, ಹಾಸನ, ಕೊಡಗು, ಚಿಕ್ಕಮಗಳೂರು ಜಿಲ್ಲೆಗಳ ಕೆಲವೆಡೆ ಗುಡುಗು ಸಹಿತ ಮಳೆಯಾಗುವ ಸಾಧ್ಯತೆಯಿದೆ. ಬಳ್ಳಾರಿ ಚಿತ್ರದುರ್ಗ, ದಾವಣಗೆರೆ, ಶಿವಮೊಗ್ಗ, ವಿಜಯನಗರ ಜಿಲ್ಲೆಗಳಲ್ಲಿ ಒಣ ಹವೆ ಉಂಟಾಗುವ ಸಾಧ್ಯತೆಯಿದೆ ಎನ್ನಲಾಗಿದೆ.

## ಕುರ್ಚಿ ಪವರ್ ಶೇರಿಂಗ್ ಚರ್ಚೆ?

• ಮಲ್ಲಮ್ಮ ನುಡಿ ಬೆಂಗಳೂರು/ದೆಹಲಿ

ದೆಹಲಿಯಲ್ಲಿ ಸೋನಿಯಾಗಾಂಧಿ ಮನೆಯಲ್ಲಿ ನಾಡಿನ ಪವರ್ ಶೇರಿಂಗ್ ಸಭೆ ಟುಸ್ ಆಗಿದೆ. ವರಿಷ್ಠ ರಾಹುಲ್‌ಗಾಂಧಿ, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹಾಗೂ ಸೋನಿಯಾಗಾಂಧಿ ಮಧ್ಯಸ್ಥಿಕೆಯಲ್ಲಿ ನಡೆದ ಸಭೆಯಲ್ಲಿ ಚಳಿಗಾಲದ ಅಧಿವೇಶನ ಬಗ್ಗೆ ಮಾತ್ರ ಚರ್ಚೆಯಾಗಿದ್ದು, ಕರ್ನಾಟಕ ಕುರ್ಚಿ ಬದಲಾವಣೆ ಬಗ್ಗೆ ಯಾವುದೇ ಚರ್ಚೆ ನಡೆದಿಲ್ಲ ಎಂದು ಮೂಲಗಳು ಖಚಿತ ಪಡಿಸಿವೆ.


ಮುಖ್ಯಮಂತ್ರಿ, ಉಪ ಮುಖ್ಯಮಂತ್ರಿ ಅವರ ಉಪಾಹಾರ ಕೂಟದ ಬಳಿಕ ರಾಜ್ಯದಲ್ಲಿ ಅಧಿಕಾರ ಹಂಚಿಕೆಯ ಗೊಂದಲಗಳ ಬಗ್ಗೆ ತಾತ್ಕಾಲಿಕ ವಿರಾಮ ದೊರೆತಿದೆಯಾದರೂ, ಅಂತಿಮ ತೀರ್ಮಾನದ ಬಗ್ಗೆ ದೆಹಲಿಯಲ್ಲಿಂದು ನಡೆಯುವ ಉನ್ನತ ಮಟ್ಟದ ಸಭೆಯಲ್ಲಿ ಚರ್ಚೆಯಾಗುವ ನಿರೀಕ್ಷೆ ಸುಳ್ಳಾಗಿದೆ.



## ವಚನಗಳಿಂದ ವೈಚಾರಿಕತೆ

• ಮಲ್ಲಮ್ಮ ನುಡಿ ಬಸವಕಲ್ಯಾಣ

ವಿಶ್ವಗುರು ಬಸವಣ್ಣನವರು ವಚನಗಳ ಮೂಲಕ ವೈಚಾರಿಕತೆಯನ್ನು ಬೆಳೆಸಿದ್ದಾರೆ ಅವರ ಮಹತ್ವದ ವಚನಗಳಲಿ ಒಂದಾದ ಕಳ ಬೇಡ ಕೊಳಬೇಡ ಎಂಬ ವಚನದ 7 ಬೇಡಗಳನ್ನು ಅಳವಡಿಸಿ ಕೊಳ್ಳಬೇಕು ಎಂದು ಆಂಧ್ರಪ್ರದೇಶದ ರಾಜ್ಯಪಾಲರಾದ ಎಸ್. ಅಬ್ದುಲ್ ನಜೀರ್ ತಿಳಿಸಿದರು.



ಇಲ್ಲಿನ ಅನುಭವ ಮಂಟಪದ ಪರಿಸರದಲ್ಲಿ ನಡೆಯಲಿರುವ 46. ನೇಯ ಶರಣ ಕಮ್ಮಟ ಅನುಭವ ಮಂಟಪ ಉತ್ಸವ ಸಮಾರಂಭದ ಉದ್ಘಾಟಿಸಿ ಮಾತನಾಡಿದ ಅವರು ಸಪ್ತಸಾಲಿನ ಈ ವಚನ ಜಾರಿಗೆ ತಂದರೆ ಪೊಲೀಸ್ ಹಾಗೂ ಕೋರ್ಟ್ ಅವಶ್ಯಕತೆ ಇರುವುದಿಲ್ಲ ಎಂದು ತಿಳಿಸಿದರು. ಬೀದರ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಖಂಡ್ರೆ ಮಾತನಾಡಿ 2026 ನೇಯ ವರ್ಷದ ಅಂತ್ಯದವರೆಗೆ ನೂತನ ಅನುಭವ ಮಂಟಪ ಕಾಮಗಾರಿ ಪೂರ್ಣಗೊಳಿಸಲಾಗುವುದು ಎಂದು ತಿಳಿಸಿದರು. ಸಾನಿಧ್ಯ ವಹಿಸಿದ ಅನುಭವ ಮಂಟಪ ಟ್ರಸ್ಟಿನ ಅಧ್ಯಕ್ಷರಾದ ಪೂಜ್ಯಶ್ರೀ ಡಾ. ಬಸವಲಿಂಗ ಪಟ್ಟದೇವರ ಮಾತನಾಡಿ ಬಸವಣ್ಣನವರ ಕಾಯಕ ಭೂಮಿಯಲ್ಲಿ ನೂತನ ಅನುಭವ ಮಂಟಪದ ಮೆರಗು ಹೆಚ್ಚಿಸಬೇಕಾದರೆ ಇಲ್ಲಿ ವಚನ ವಿಶ್ವವಿದ್ಯಾಲಯ ಅವಶ್ಯಕತೆ ಇದೆ ಎಂದರು. ಆದಿಚುಂಚನಗಿರಿ ಮಹಾ ಸಂಸ್ಥಾನ ಮಠದ ಜಗದ್ಗುರು ಡಾ. ನಿರ್ಮಲಾನಂದ ನಾಥ ಮಹಾಸ್ವಾಮಿಜಿಗಳು ಮಾತನಾಡಿ ಜೀವನದಲ್ಲಿ ಶರಣ ಸಂತರ ವಚನಗಳು ನಮ್ಮಗೆ ದಾರಿ ದೀಪವಾಗಿವೆ ಎಂದರು.

# ನಿರ್ಲಕ್ಷ್ಯ ತೋರದೆ ಅರ್ಜಿದಾರರಿಗೆ ಮಾಹಿತಿ ನೀಡಿ –ಆಯುಕ್ತ ರುದ್ರಣ್ಣ ಹರ್ತಿಕೋಟೆ

**ಮಲ್ಲಮ್ಮ ನುಡಿ ವಾರ್ತೆ ಬೀದರ:** ನಿರ್ಲಕ್ಷ್ಯ ತೋರದೆ ಅರ್ಜಿದಾರರಿಗೆ ಅಧಿಕಾರಿಗಳು ಮಾಹಿತಿ ನೀಡಬೇಕು ಎಂದು ಕರ್ನಾಟಕ ರಾಜ್ಯ ಮಾಹಿತಿ ಆಯೋಗದ ಆಯುಕ್ತರಾದ ರುದ್ರಣ್ಣ ಹರ್ತಿಕೋಟೆ ಅವರು ತಿಳಿಸಿದರು.

ಅವರು ಶನಿವಾರ ಜಿಲ್ಲಾ ಪಂಚಾಯತ ಕಛೇರಿ ಸಭಾಂಗಣದಲ್ಲಿ ನಡೆದ ಮಾಹಿತಿ ಹಕ್ಕು ಕಾಯ್ದೆಯ ತರಬೇತಿ ಕಾರ್ಯಾಗಾರ ಉದ್ದೇಶಿಸಿ ಮಾತನಾಡಿದರು.

ಅರ್ಜಿದಾರ ಕೇಳಿರುವ ಮಾಹಿತಿಯನ್ನು ಸಂಬಂಧಪಟ್ಟ ಅಧಿಕಾರಿಗಳು 30 ದಿನಗಳಲ್ಲಿ ಮಾಹಿತಿ ನೀಡಬೇಕು. ಮಾಹಿತಿ ಹಕ್ಕು ಕೂಡ ಒಂದು ಮೂಲಭೂತ ಹಕ್ಕು ಆಗಿದೆ. ರಾಜ್ಯದಲ್ಲಿ ಒಟ್ಟು ಇದುವರೆಗೆ 55143 ಅರ್ಜಿಗಳಲ್ಲಿ 36206 ಅರ್ಜಿ ವಿಲೇವಾರಿಯಾಗಿವೆ. ಉಳಿದ ಅರ್ಜಿಗಳು ಕೂಡ ವೇಗ ಗತಿಯಲ್ಲಿ ಇತ್ಯಾರ್ಥ ಗೊಳಿಸಲಾಗುವುದು ಎಂದರು.

ಮಾಹಿತಿ ಹಕ್ಕು ಕಾಯ್ದೆಯಡಿ 10735 ಅರ್ಜಿ ಪ್ರಕರಣದಲ್ಲಿ 10.16 ಕೋಟಿ ದಂಡ ವಿಧಿಸಲಾಗಿದೆ. ಇದರಲ್ಲಿ 3084 ಅರ್ಜಿದಾರರು 2.70 ಕೋಟಿ ರೂಪಾಯಿ ಮಾತ್ರ ದಂಡ ಪಾವತಿಸಿದ್ದಾರೆ. ಬೀದರ ಜಿಲ್ಲೆಯಲ್ಲಿ 383 ಅರ್ಜಿ ಬಾಕಿ ಇವೆ. ಇದರಲ್ಲಿ ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ 215, ನಗರಾಭಿವೃದ್ಧಿ ಪ್ರಾಧಿಕಾರದ 58, ಕಂದಾಯ ಇಲಾಖೆಯ 54, ಸಮಾಜ ಕಲ್ಯಾಣ ಇಲಾಖೆಯ 21 ಮತ್ತು ಇತರ ಇಲಾಖೆಗಳ 35 ಅರ್ಜಿ ಬಾಕಿ ಇವೆ. ಕಲ್ಯಾಣ ಕರ್ನಾಟಕದಲ್ಲಿಯೇ ಅತಿ ಕಡಿಮೆ ಅರ್ಜಿ ಬಾಕಿ ಇರುವ ಜಿಲ್ಲೆಯಾಗಿದೆ. ಬೀದರ ಜಿಲ್ಲೆಯಲ್ಲಿ 106 ಅರ್ಜಿ ಪ್ರಕರಣಕ್ಕೆ 9.2 ಲಕ್ಷ ದಂಡ ವಿಧಿಸಲಾಗಿದ್ದು 7 ಅರ್ಜಿ ಪ್ರಕರಣದಲ್ಲಿ 87 ಸಾವಿರ ಮಾತ್ರ ದಂಡ ಪಾವತಿಸಿದ್ದಾರೆ ಎಂದರು. ಕೆ.ಡಿ.ಪಿ ಸಭೆಯಲ್ಲೂ ಕೂಡ ಮಾಹಿತಿ ಹಕ್ಕು ಕಾಯ್ದೆ ಬಗ್ಗೆ ಚರ್ಚೆ ಆಗಬೇಕು ಎಂದರು.

ಬೆಂಗಳೂರು ಪೀಠದ ಮಾಹಿತಿ ಆಯುಕ್ತರಾದ ರಾಜಶೇಖರ ಎಸ್. ಅವರು ಮಾತನಾಡಿ, ಸಂವಿಧಾನದ 19(ಎ) ಮತ್ತು 21(ಎ) ವಿಧಿಗಳು ಮಾಹಿತಿ ಹಕ್ಕುಗೆ ಸಂಬಂಧಿಸಿವೆ. 1975ರಲ್ಲಿ ರಾಜ್ ನಾರಾಯಣ್ ವರ್ಸಸ್ ಉತ್ತರ ಪ್ರದೇಶ ಸರ್ಕಾರ ತೀರ್ಪುನಲ್ಲಿ ನ್ಯಾಯಾಲಯ ಮಾಹಿತಿ ಹಕ್ಕು ಎತ್ತಿ ಹಿಡಿದಿದೆ. ಈ ತೀರ್ಪು ಆಧಾರದ ಮೇಲೆ 2005 ರಲ್ಲಿ ಮಾಹಿತಿ ಹಕ್ಕು ಕಾಯ್ದೆ ಜಾರಿಗೆ ತರಲಾಯಿತು. ಉತ್ತಮ ಆಡಳಿತ, ಪಾರದರ್ಶಕತೆ ಮತ್ತು ಭ್ರಷ್ಟಾಚಾರವನ್ನು ನಿಯಂತ್ರಿಸಲು ಮಾಹಿತಿ ಹಕ್ಕನ್ನು ಪರಿಚಯಿಸಲಾಗಿದೆ. ಅಧಿಕಾರಿಗಳು ತಮ್ಮ ಕಾಲ ಮಿತಿಯೊಳಗೆ ಕಾರ್ಯ ನಿರ್ವಹಿಸುವುದು ಹಾಗೂ ಸಾರ್ವಜನಿಕರ ಹಿತಾಸಕ್ತಿ ಕಾಪಾಡುವುದಾಗಿದೆ. ಮಾಹಿತಿ ಹಕ್ಕು ಕಾಯ್ದೆ ಜಗತ್ತಿನಲ್ಲೇ ಅತಿ ಹೆಚ್ಚು ಬಳಿಕೆಯಲ್ಲಿರುವ ಕಾಯ್ದೆಯಾಗಿದೆ. ಮಾಹಿತಿ ಹಕ್ಕು ಕಾಯ್ದೆಯ ಸದುಪಯೋಗ ಪಡೆದುಕೊಳ್ಳಬೇಕು ಎಂದರು.



ಕಲಬುರ್ಗಿ ಪೀಠದ ಮಾಹಿತಿ ಆಯುಕ್ತರಾದ ಬಿ. ವೆಂಕಟಸಿಂಗ್ ಅವರು ಮಾತನಾಡಿ, ಕಲಬುರಗಿ ವಿಭಾಗದಲ್ಲಿ 6768 ಅರ್ಜಿ ಬಾಕಿ ಇವೆ. ಅದರಲ್ಲಿ ಅತಿ ಹೆಚ್ಚು ಪಂಚಾಯತ್ ರಾಜ್ ಇಲಾಖೆಗೆ ಸಂಬಂಧಿಸಿವೆ. ಪಿಡಿಓ ಗಳು ಸಮಯಕ್ಕೆ ಸರಿಯಾಗಿ ಮಾಹಿತಿ ನೀಡಿರದ ಕಾರಣ ಅರ್ಜಿ ಹಾಗೇ ಬಾಕಿ ಉಳುಯುತ್ತಿವೆ. ಕೆಳ ಹಂತದಲ್ಲಿಯೇ ಅರ್ಜಿ ವಿಲೇವಾರಿ ಮಾಡುವುದು ಉತ್ತಮ ವಿಧಾನವಾಗಿದೆ. ಮಾಹಿತಿ ಹಕ್ಕು ಕಾಯ್ದೆ ನಿಯಮಗಳ ಬಗ್ಗೆ ಮತ್ತು ಈ ಕಾಯ್ದೆಗೆ ಸಂಬಂಧಿಸಿದಂತ ನ್ಯಾಯಾಲಯದ ತೀರ್ಪುಗಳ ಬಗ್ಗೆ ಅಧಿಕಾರಿಗಳು ಹಾಗೂ ಸಾರ್ವಜನಿಕರು ತಿಳಿದುಕೊಳ್ಳಬೇಕು ಎಂದರು.

ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಶಿವಾನಂದ ಕರಾಳೆ, ಬೀದರ ಸಹಾಯಕ ಆಯುಕ್ತ ಮೊಹಮದ್ ಶಕೀಲ್ ಸೇರಿದಂತೆ ಇತರೆ ಅಧಿಕಾರಿಗಳು ಉಪಸ್ಥಿತರಿದ್ದರು.

## ಪೊಲೀಸರೂ ಕರ್ತವ್ಯದ ನಡುವೆಯೂ ಕ್ರೀಡಾಕೂಟದಲ್ಲಿ ಭಾಗವಹಿಸುತ್ತಿರುವುದು ಶ್ಲಾಘನೀಯ–ಸಚಿವ ಈಶ್ವರ ಬಿ.ಖಂಡ್ರೆ



**ಮಲ್ಲಮ್ಮ ನುಡಿ ವಾರ್ತೆ ಬೀದರ:** ಸಾರ್ವಜನಿಕರ ಸುರಕ್ಷತೆ ಮತ್ತು ಕಾನೂನು ಸುವ್ಯವಸ್ಥೆ ಕಾಪಾಡಲು ದಿನರಾತ್ರಿ ಶ್ರಮಿಸುವ ಪೊಲೀಸ್ ಸಿಬ್ಬಂದಿ, ಕರ್ತವ್ಯಗಳ ನಡುವೆಯೂ ಕ್ರೀಡಾಕೂಟದಲ್ಲಿ ಭಾಗವಹಿಸುವುದು ಶ್ಲಾಘನೀಯ ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಬಿ.ಖಂಡ್ರೆ ಹೇಳಿದರು.

ಅವರು ಶನಿವಾರ ಬೀದರ ಜಿಲ್ಲಾ ಪೊಲೀಸ್ ಕವಾಯತ್ ಮೈದಾನದಲ್ಲಿ ಹಮ್ಮಿಕೊಂಡಿರುವ ಜಿಲ್ಲಾ ಪೊಲೀಸ್ ಇಲಾಖೆಯ ವಾರ್ಷಿಕ ಕ್ರೀಡಾ–ಕೂಟ–2025 ನ್ನು ಉದ್ಘಾಟಿಸಿ ಮಾತನಾಡಿದರು.

ಕ್ರೀಡೆ ಆರೋಗ್ಯ, ಶಿಸ್ತು ಮತ್ತು ತಂಡಸ್ಫೂರ್ತಿಯನ್ನು ಬೆಳೆಸುವ ಜೊತೆಗೆ, ಕೆಲಸದ ಒತ್ತಡದಿಂದ ಮಾನಸಿಕ ಹಸನಿಯನ್ನು ನೀಡುವ ಮಹತ್ವದ ವೇದಿಕೆಯಾಗಿದೆ ಎಂದು ಸಚಿವರು ಅಭಿಪ್ರಾಯಪಟ್ಟರು.

ಜಿಲ್ಲಾ ಪೊಲೀಸ್ ಇಲಾಖೆ ಆಯೋಜಿಸಿರುವ ಈ ಕ್ರೀಡಾಕೂಟದಲ್ಲಿ ಭಾಗವಹಿಸುತ್ತಿರುವ ಎಲ್ಲಾ ಅಧಿಕಾರಿಗಳು ಹಾಗೂ ಸಿಬ್ಬಂದಿಗಳಿಗೆ ಅವರು ಶುಭಾಶಯಗಳನ್ನು ತಿಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಪ್ರದೀಪ ಗುಂಟಿ, ಜಿಲ್ಲಾ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಚಂದ್ರಕಾಂತ ಪೂಜಾರಿ, ಸೇರಿದಂತೆ ಪೊಲೀಸ್ ಇಲಾಖೆಯ ಸಿಬ್ಬಂದಿಗಳು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

## ಮಕ್ಕಳ ಸಮಸ್ಯೆಗಳು ಶೀಘ್ರ ಬಗೆಹರಿಸಲಾಗುವುದು: ರಿಜ್ವಾನಾ

**ಮಲ್ಲಮ್ಮ ನುಡಿ ವಾರ್ತೆ ಬಸವಕಲ್ಯಾಣ:** ವಿದ್ಯಾರ್ಥಿಗಳು ನಮ್ಮ ಗಮನಕ್ಕೆ ತಂದ ಪ್ರತಿಯೊಂದು ಸಮಸ್ಯೆಗಳನ್ನು ಗ್ರಾಮ ಪಂಚಾಯತ್ ವತಿಯಿಂದ ಬಗೆಹರಿಸಿಕೊಡುತ್ತೇವೆ ಎಂದು ಪಂಚಾಯತ್ ಅಭಿವೃದ್ಧಿ ಅಧಿಕಾರಿ ರೀಜ್ವಾನಾ ಹೇಳಿದರು.

ತಾಲ್ಲೂಕಿನ ದನ್ನೂರಾ(ಕೆ) ಗ್ರಾಮದ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಶನಿವಾರ ಮಕ್ಕಳ ಹಕ್ಕುಗಳ ಗ್ರಾಮ ಸಭೆ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳ ಸಮಸ್ಯೆಗಳು ಆಸಲಿಸಿದ ನಂತರ ಅವರು ಮಾತನಾಡಿ, ಶಾಲೆಯಲ್ಲಿ ಶೌಚಾಲಯ, ಕಂಪೌಂಡ ಹಾಗೂ ಆಟದ ಮೈದಾನಕ್ಕೆ ಬೇಕಾಗುವ ಸೌಕರ್ಯಗಳನ್ನು ಸೇರಿದಂತೆ ಗ್ರಾಮ ಪಂಚಾಯತ್ ವತಿಯಿಂದ ಏನೇಲ್ಲಾ ಸೌಲಭ್ಯಗಳನ್ನು ಕಲ್ಪಿಸಿಕೊಡಲು ಬರುತ್ತೆ ಅವೇಲ್ಲ ನೀಡಲು ಪ್ರಾಮಾಣಿಕ ಪ್ರಯತ್ನ ಮಾಡುತ್ತೇವೆ ಎಂದರು.



ಆರ್.ಡಿ.ಆರ್.ಫೇಲ್ಲೋ ಶೃತಿ ಅವರು ಮಾತನಾಡಿ, ಮಕ್ಕಳು ತಮ್ಮ ಹಕ್ಕುಗಳಿಂದ ವಂಚಿತ ರಾಗಬಾರದು ಎಂಬ ಉದ್ದೇಶದಿಂದ ಗ್ರಾಮ ಪಂಚಾಯತ್ ವತಿಯಿಂದ ಶಾಲೆಗಳಲ್ಲಿ ವಿಶೇಷ ಗ್ರಾಮ ಸಭೆ ಹಮ್ಮಿಕೊಳ್ಳುವ ಮೂಲಕ ಮಕ್ಕಳ ಸಮಸ್ಯೆಗಳನ್ನು ಮುಕ್ತವಾಗಿ ಆಲಿಸಿ ಬಗೆಹರಿಸಲಾಗುತ್ತಿದೆ ಎಂದರು. ನಂತರ ಆರ್.ಎಲ್.ಎಚ್.ಪಿ.ಸಂಯೋಜಕ ನಾಗರಾಜ ಶೀಲವಂತ ಹಾಗೂ ಸಿಆರ್‌ಸಿ ವೆಂಕಟರಾವ್ ಸಭೆಯ ಉದ್ದೇಶ ಮತ್ತು ಮಹತ್ವದ ಬಗ್ಗೆ ಮಾತನಾಡಿದರು.

ಈ ಸಂದರ್ಭದಲ್ಲಿ ಮುಖ್ಯಗುರುಗಳಾದ ಅನೀತಾ, ಗ್ರಾ.ಪಂ.ಕಾ.ದ.ದತ್ತಾತ್ರಿ, ಐಇಸಿ ಸಂಯೋಜಕ ವೀರಾರೆಡ್ಡಿ, ಸದಸ್ಯರಾದ ಮಹೇಶ ದುಬಲಗುಂಡೆ, ಹಣಮಂತರಾವ್ ಬಿರಾದಾರ್, ಭೀಮಣ್ಣಾ ವಾಡೇಕರ್, ಬಿಸಿ ತುಕಾರಾಮರೆಡ್ಡಿ, ಅರಿವು ಕೇಂದ್ರದ ಮೇಲ್ವಿಚಾರಕ ಸಂತೋಷ, ಡಿಇಓ ದೀಪಕ ಹಾಗೂ ಕಾಯಕ ಮಿತ್ರ ಚಾಮಲಾ ಸೇರಿದಂತೆ ಶಾಲಾ ಸಿಬ್ಬಂದಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ಬಾವಗಿ ಗ್ರಾಮದಲ್ಲಿ ಗ್ಯಾರಂಟಿ ಅನುಷ್ಠಾನ ಸಮಿತಿ ವತಿಯಿಂದ ಜಾಗೃತಿ ಅಭಿಯಾನ



**ಮಲ್ಲಮ್ಮ ನುಡಿ ವಾರ್ತೆ ಬೀದರ್:** ಜನರ ಕಷ್ಟಗಳಿಗೆ ಕಾಂಗ್ರೆಸ ಬೆಲ್ಲ ಸಕ್ಕರೆಯಾಗಿದೆ, ಮನೆ ಮನೆಗೆ ಮಲ್ಲಿಗೆಯಾಗಿದೆ ಎಂದರೆ ತಪ್ಪಾಗಲಾರದು. ಮಹಿಳೆಯರ ಕಷ್ಟಗಳಿಗೆ ಹೆಗಲಾಗಿ ರಾಜ್ಯದ ಜವಾಬ್ದಾರಿಯ ನೊಗ ಹೊತ್ತು ಎಲ್ಲರನ್ನು ಒಳಗೊಂಡು ನುಡಿದಂತೆ ನಡೆದು–ನಡೆದಂತೆ ನುಡಿದು ಜನ ಸಾಮಾನ್ಯರ ಕೈ ಹಿಡಿದು ಸರ್ವರಿಗೂ ಸಮಬಾಳು ಸರ್ವರಿಗೆ ಸಮಪಾಲು ತತ್ವದಲ್ಲಿ ನಂಬಿಕೆಯಿಟ್ಟು ಕಳಂಕರಹಿತವಾಗಿ ಹೆಜ್ಜೆ ಹಾಕಿದೆ,

ರಾಜ್ಯ ಸರ್ಕಾರದ ಜನಪರ ಕಾರ್ಯಕ್ರಮಗಳಾದ ಗ್ಯಾರಂಟಿ ಯೋಜನೆಗಳನ್ನು ಪ್ರತಿ ಮನೆಗೂ ತಲುಪಿಸುವ ನಿಟ್ಟಿನಲ್ಲಿ ಮಾನ್ಯ ಮಾಜಿ ಶಾಸಕರಾದ ಸನ್ಮಾನ್ಯ ಶ್ರೀ ಅಶೋಕ ಖೇಣಿ ಸರ್ ರವರ ಮಾರ್ಗದರ್ಶನದಲ್ಲಿ ಬೀದರ ದಕ್ಷಿಣ ಕ್ಷೇತ್ರದ ತಾಲ್ಲೂಕ ಪಂಚ ಗ್ಯಾರಂಟಿ ಉಪಾಧ್ಯಕ್ಷರಾದ ಶ್ರೀ ರಾಜಕುಮಾರ ಮಡಕಿ ಹಾಗೂ ಸದಸ್ಯರ ನೇತೃತ್ವದಲ್ಲಿ ನಮ್ಮ ನಡೆ ಹಳ್ಳಿ ಕಡೆ ಕಾರ್ಯಕ್ರಮವನ್ನು

ಬೀದರದಕ್ಷಿಣಕ್ಷೇತ್ರದ ಸಂಗೋಳಗಿ ಗ್ರಾಮ ಪಂಚಾಯತ ವ್ಯಾಪ್ತಿಯಲ್ಲಿ ಬರುವ ಬಾವಗಿ ಗ್ರಾಮದಲ್ಲಿ ಕರ್ನಾಟಕ ಸರ್ಕಾರದ ಪಂಚ್ ಗ್ಯಾರಂಟಿ ಯೋಜನೆಗಳಾದ,

**ಗೃಹ ಲಕ್ಷ್ಮಿ ಯೋಜನೆ:** ಹಲವು ಮಹಿಳೆಯರಿಗೆ ಬ್ಯಾಂಕ್ ಖಾತೆ ಹಾಗೂ ಆಧಾರ್ ಜೋಡಣೆ (ಓಕಅಖ) ಸಮಸ್ಯೆಯಿಂದ ಹಣ ಜಮಾವಣೆಯಾಗಿರಲಿಲ್ಲ.

ಅಂತಹ ಪ್ರಕರಣಗಳನ್ನು ಸಮಿತಿ ಗುರುತಿಸಿ,

ಅಧಿಕಾರಿಗಳೊಂದಿಗೆ ಸಮನ್ವಯ ಸಾಧಿಸಿ ಸಮಸ್ಯೆ ಬಗೆಹರಿಸುತ್ತಿದೆ.

**ಅನ್ನಭಾಗ್ಯ ಯೋಜನೆ:** ಪಡಿತರ ಚೀಟಿ ತಿದ್ದುಪಡಿಗೆ ಸಂಬಂಧಿಸಿದಂತೆ ಗ್ರಾಮ ಒನ್ ಕೇಂದ್ರಗಳಲ್ಲಿ ಎದುರಾಗುತ್ತಿದ್ದ ತೊಂದರೆಗಳನ್ನು ನಿವಾರಿಸುವಲ್ಲಿ ತಂಡವು ಸಕ್ರಿಯವಾಗಿ ಕೆಲಸಮಾಡಿದೆ. ಅಲ್ಲದೆ, ಕಳ್ಳ ಸಾಗಣಿಕೆಯಂತಹ ಪ್ರಕರಣಗಳ ಬಗ್ಗೆಯೂ ನಿಗಾ ವಹಿಸಿ, ಅಧಿಕಾರಿಗಳ ಗಮನಕ್ಕೆ ತರುತ್ತಿದೆ. ಮತ್ತು

**ಶಕ್ತಿ ಯೋಜನೆ,**

ಗೃಹ ಜ್ಯೋತಿ, ಯುವನಿಧಿ, ಯೋಜನಗಳ ಮಹತ್ವದ ಬಗ್ಗೆ ಮನೆ ಮನೆಗೆ ತೆರಳಿ ಜನರಲ್ಲಿ ತಿಳಿಸಲಾಯಿತು.

ಈ ಸಂದರ್ಭದಲ್ಲಿ ಕಮಿಟಿಯ ಸದಸ್ಯರಾದ ಉದಯಕುಮಾರ ಚಟನಳ್ಳಿ, ಶಿವಕುಮಾರ ಕುತ್ತಾಬಬಾದ್,

ಲೋಕೇಶ ಕನಶೆಟ್ಟಿ, ಗ್ರಾಮ ಪಂಚಾಯತ ಸದಸ್ಯರಾದ ಮೊಹಮ್ಮದ್ ತಾಜೋದ್ದಿನ್, ಬಾವಗಿ ಭದ್ರೇಶ್ವರ್ ಮಠದ ಸ್ವಾಮೀಜಿ ಶಿವಕುಮಾರ ಸ್ವಾಮಿ, ಪವನ ಬಾಪೂರೆ, ಶೈಕ್ ಶೈಲಾನಿ, ಸಿದ್ದರೆಡ್ಡಿ ಸೇರಿ ಅನೇಕ ಗ್ರಾಮಸ್ಥರು ಪಾಲ್ಗೊಂಡಿದರು.

## ಹಾವು ಕಡಿತ ನಿರ್ವಹಣೆ ಕುರಿತು ಮಕ್ಕಳಿಗೆ ಜಾಗೃತಿ

**ಮಲ್ಲಮ್ಮನುಡಿವಾರ್ತೆಬೆಂಗಳೂರು**

ಕರ್ನಾಟಕದಾದ್ಯಂತ ಅರಣ್ಯ ಮತ್ತು ವನ್ಯಜೀವಿ ಸಂರಕ್ಷಣೆ ಹಾಗೂ ಪರಿಸರ ಜಾಗೃತಿಯನ್ನು ಉತ್ತೇಜಿಸಲು, ವನ್ಯಜೀವಿಗಳೊಂದಿಗೆ ಸಹಬಾಳ್ವೆಯನ್ನು ಬೆಳೆಸಿಕೊಳ್ಳಲು ಕರ್ನಾಟಕ ಪರಿಸರ ಪ್ರವಾಸೋದ್ಯಮ ಅಭಿವೃದ್ಧಿ ಮಂಡಳಿಯು ನಿರಂತರ ಪ್ರಯತ್ನಗಳನ್ನು ಕೈಗೊಳ್ಳಲಾಗುತ್ತಿದ್ದು, ಇಂದು ಅನಗೊಂಡಹಳ್ಳಿಯ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಸಹಯೋಗದೊಂದಿಗೆ ಶಾಲೆಯ ವಿದ್ಯಾರ್ಥಿಗಳು ಮತ್ತು ಶಿಕ್ಷಕರಿಗೆ ಹಾವುಗಳು ಮತ್ತು ಹಾವು ಕಡಿತ ನಿರ್ವಹಣೆ ಕುರಿತು ಜಾಗೃತಿ ಕಾರ್ಯಕ್ರಮವನ್ನು ಆಯೋಜಿಸಿತ್ತು.

ಈ ಜಾಗೃತಿ ಮೂಡಿಸುವ ಕಾರ್ಯಕ್ರಮದಲ್ಲಿ ಹಾವುಗಳ ಪರಿಸರ ಪ್ರಾಮುಖ್ಯತೆ, ಹಾವುಗಳು ಮಾನವ ವಾಸಸ್ಥಳಕ್ಕೆ ಪ್ರವೇಶಿಸುವುದನ್ನು ತಡೆಯುವ ಕ್ರಮಗಳು ಮತ್ತು ಹಾವು ಕಡಿತದ ಸಮಯದಲ್ಲಿ ಸರಿಯಾದ ಪ್ರಥಮ ಚಿಕಿತ್ಸಾ ಪದ್ಧತಿಗಳ ಮೇಲೆ ಕೇಂದ್ರೀಕರಿಸಲಾಗಿತ್ತು.

ಕರ್ನಾಟಕ ಪರಿಸರ ಪ್ರವಾಸೋದ್ಯಮ ಅಭಿವೃದ್ಧಿ ಮಂಡಳಿಯ ಅಧ್ಯಕ್ಷರಾದ ಶ್ರೀಮತಿ ಶಾಲೆಟ್ ಪಿಂಟೋ ಅವರು ಕಾರ್ಯಕ್ರಮವನ್ನು ಉದ್ಘಾಟಿಸಿ ಪರಿಸರ ಸಮತೋಲನವನ್ನು ಕಾಪಾಡಿಕೊಳ್ಳುವಲ್ಲಿ ಹಾವುಗಳು ನಿರ್ಣಾಯಕ ಪಾತ್ರವಿದ್ದು, ಸಮುದಾಯಗಳು ವೈಜ್ಞಾನಿಕವಾಗಿ ನಿಖರವಾದ ಪ್ರಥಮ ಚಿಕಿತ್ಸಾ ವಿಧಾನಗಳು ಮತ್ತು ಸುರಕ್ಷಿತ ಅಭ್ಯಾಸಗಳ ಬಗ್ಗೆ ತಿಳಿಯಲು ಅಗತ್ಯ ಕ್ರಮವಹಿಸಬೇಕು ಎಂದು ತಿಳಿಸಿದರು.

ಕರ್ನಾಟಕ ಪ್ರವಾಸೋದ್ಯಮ ಅಭಿವೃದ್ಧಿ ಮಂಡಳಿಯ ಪ್ರಧಾನ ವ್ಯವಸ್ಥಾಪಕರು ಹಾಗೂ ಉಪ ಅರಣ್ಯ ಸಂರಕ್ಷಣಾಧಿಕಾರಿಯಾದ ಶ್ರೀಮತಿ ಮಾಲಿನಿ. ಈ ಅವರು ಮಾತನಾಡಿ, ಹಾವು ಕಡಿತಕ್ಕೆ ಹೇಗೆ ಸರಿಯಾದ ರೀತಿಯಲ್ಲಿ ಪ್ರಥಮ ಚಿಕಿತ್ಸೆಯನ್ನು ಮಾಡಬೇಕೆಂಬುದನ್ನು ಮಕ್ಕಳಿಗೆ ತಿಳಿಸಿಕೊಟ್ಟರು.

ತಾಂತ್ರಿಕ ಅಧಿವೇಶನವನ್ನು ಮುಖ್ಯ ನಿಸರ್ಗತಜ್ಞರಾದ ರಾಹುಲ್ ಆರಾಧ್ಯ ಅವರು ನಡೆಸಿಕೊಟ್ಟರು. ಸಂವಾದ ಹಾಗೂ ಚರ್ಚೆಗಳ ಮೂಲಕ ಮಕ್ಕಳ ಪ್ರಶ್ನೆಗಳಿಗೆ, ಅನುಮಾನಗಳಿಗೆ ಉತ್ತರಗಳನ್ನು ನೀಡಿ ತಿಳುವಳಿಕೆ ಮೂಡಿಸಿದರು.




ಬಸವಕಲ್ಯಾಣ :– ಇಲ್ಲಿನ ಕ್ಷೇತ್ರ ಸಂಪನ್ಮೂಲ ಕೇಂದ್ರದ ಶಾಲಾ ಸಿದ್ಧತಾ ಕೇಂದ್ರ ( ಎಸ್ ಆರ್ ಪಿ) ಯಲ್ಲಿ ವಿಶೇಷ ಚೇತನ ( ಸಿ ಡಬ್ಲ್ಯೂ ಎಸ್ ಎನ್ ) ಮಕ್ಕಳಿಗೆ ಶ್ರೀಮತಿ ಡಾ. ಪೂಜಾ ಮೇಡಂ ರವರಿಂದ ಈ ಮೇಲಿನ ಸದರಿ ಮಕ್ಕಳಿಗೆ ಪಿಜೋಥೆರಪಿ ಮಾಡಲಾಯಿತು ಈ ಸಂದರ್ಭದಲ್ಲಿ ಕ್ಷೇತ್ರ ಸಮನ್ವಯಾಧಿಕಾರಿಗಳಾದ ಶ್ರೀ ಪ್ರಭಾಕರ್ ಕಳಮಸೆ ಬಿ ಆರ್ ಪಿ ಬಾಲಕೃಷ್ಣ ಪಾಟೀಲ್ ಬಿ ಐ ಈ ಆರ್ ಟಿ ಗಳಾದ ಡಾ. ಕೆಜಿ ಶರಣಪ್ಪ ಗದ್ದೆಗಾವ್ ಶ್ರೀಮತಿ ಅನಿತಾ ಹಾಗೂ ಮಕ್ಕಳು ಪಾಲಕ ಪೋಷಕರು ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ).

## ಬೃಹತ ಉಚಿತ ಆರೋಗ್ಯ ತಪಾಸಣೆ



**ಮಲ್ಲಮ್ಮ ನುಡಿ ವಾರ್ತೆ ಹುಮನಾಬಾದ್ :**

ನಗರದ ಎಚ್.ಕೆ.ಡಿ.ಇ.ಟಿ. ದಂತ ಮಹಾವಿದ್ಯಾಲಯ ಹಾಗೂ ಫಾರ್ಮಸಿ ಕಾಲೇಜಿನ ಆವರಣದಲ್ಲಿ ಡಿ. 3ರಂದು ಬೆಳಗ್ಗೆ 10 ಗಂಟೆಗೆ ಬಸವರಾಜ ಪಾಟೀಲ್ ಫೌಂಡೇಶನ್, ಮಹಾದೇವಪ್ಪ ರಾಂಪೂರೆ ಮೆಡಿಕಲ್ ಕಾಲೇಜು, ಬಸವೇಶ್ವರ ಆಸ್ಪತ್ರೆ, ಎನ್.ಜಿ.ಎನ್. ಫೌಂಡೇಶನ್ ಕಲಬುರಗಿ ಹಾಗೂ ರೋಟರಿ ಕ್ಲಬ್ ಹುಮನಾಬಾದ ವತಿಯಿಂದ ಆಯೋಜನೆ ಮಾಡಲಾಗಿದೆ ಎಂದು ಮಾಜಿ ಸಚಿವ ರಾಜಶೇಖರ ಪಾಟೀಲ್ ತಿಳಿಸಿದ್ದಾರೆ. ಬೆಳಗ್ಗೆ 10 ಗಂಟೆಯಿಂದ ಮಧ್ಯಾಹ್ನ 3 ಗಂಟೆಯ ವರೆಗೆ ಬೃಹತ್ ಉಚಿತ ಆರೋಗ್ಯ ತಪಾಸಣೆ ಶಿಬಿರ ಜರುಗಲಿದ್ದು, ಈ ಶಿಬಿರದಲ್ಲಿ ಸುಗರ, ಬಿಪಿ, ಥೈರಾಡ್, ಜನರಲ್ ಮೇಡಿಷನ್, ನರರೋಗ, ಕೀಲು ಮತ್ತು ಮೂಳೆ, ಸ್ತ್ರೀ ರೋಗ, ಮಕ್ಕಳ, ಚರ್ಮ, ಕೂದಲು, ಲೈಂಗಿಕ ಸಮಸ್ಯೆ, ಕಣ್ಣು, ಕಿವಿ, ಮೂಗು, ಗಂಟಲು, ಕೆಮ್ಮು, ದಮ್ಮು, ಅಸ್ತಮಾ, ಮಾಸಿಕ ರೋಗ, ಶಸ್ತ್ರ ಚಿಕಿತ್ಸೆ, ಹೃದಯ ರೋಗ ಹಾಗೂ ಮೂತ್ರಪಿಂಡ ರೋಗಗಳಿಗೆ ಚಿಕಿತ್ಸೆ ನೀಡಲಾಗುವುದು.

ಈ ಉಚಿತ ಆರೋಗ್ಯ ಶಿಬಿರದಲ್ಲಿ 40ಕ್ಕೂ ಹೆಚ್ಚಿನ ನುರಿತ ವೈದ್ಯರ ತಂಡ ಭಾಗವಹಿಸಲಿದೆ. ಆದ್ದರಿಂದ ಹುಮನಾಬಾದ ಮತಕ್ಷೇತ್ರದ ಎಲ್ಲ ನಾಗರಿಕರು ಇದರ ಸದುಪಯೋಗ ಪಡೆದುಕೊಂಡು ಶಿಬಿರದ ಉದ್ದೇಶ ಯಶಸ್ವಿ ಮಾಡಬೇಕು ಎಂದು ಮನವಿ ಮಾಡಿದ್ದಾರೆ.

## ಎಸ್‌ಎಸ್‌ಎಲ್‌ಸಿ. ಪಿಯುಸಿ ಪರೀಕ್ಷೆ ಮಾರ್ಗದರ್ಶನ

**ಮಲ್ಲಮ್ಮ ನುಡಿ ವಾರ್ತೆ**

**ಬೀದರ್ :** ಪೂಜ್ಯ ಡಾ|| ಚನ್ನಬಸವ ಪಟ್ಟದೇವರು ಜಿಲ್ಲಾ ರಂಗಮಂದಿರದಲ್ಲಿ ಡಿಸೆಂಬರ 9 ರಂದು, ವಿಶ್ವ ಕನ್ನಡಿಗರ ಸಂಸ್ಥೆ ಕರ್ನಾಟಕ ಹಾಗೂ ವೀರ ಕನ್ನಡಿಗರ ಸೇನೆ ವತಿಯಿಂದ ರಾಜ್ಯ ಮಟ್ಟದ ಗಡಿ ಕನ್ನಡಿಗರ ಉತ್ಸವ– 70 ನೇ ಕರ್ನಾಟಕ ರಾಜ್ಯೋತ್ಸವ ಸಾಹಿತ್ಯ ಸಂಸ್ಕೃತಿ ಸಂಗೀತ ಕಾರ್ಯಕ್ರಮ ಹಾಗೂ ಎಸ್ ಎಸ್ ಎಲ್ ಸಿ ಮತ್ತು ಪಿ ಯು ಸಿ ವಿದ್ಯಾರ್ಥಿಗಳಿಗೆ ಪರೀಕ್ಷ ಮಾರ್ಗದರ್ಶನವನ್ನು ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಕಾರ್ಯಗಾರ ಹಮ್ಮಿಕೊಂಡಿರುವ ಬಗ್ಗೆ ಜಿಲ್ಲಾಧಿಕಾರಿಗಳಿಗೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಜಿಲ್ಲಾ ಪಂಚಾಯತ ಹಾಗೂ ಉಪನಿರ್ದೇಶಕರು ಪದವಿ ಪೂರ್ವ ಮತ್ತು ವೃತ್ತಿಪರ ಶಿಕ್ಷಣ ಇಲಾಖೆ, ಶಾಲಾ ಶಿಕ್ಷಣ ಇಲಾಖೆ, ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ವಿದ್ಯಾರ್ಥಿಗಳಿಗೆ ಸದರಿ ಕಾರ್ಯಕ್ರಮಕ್ಕೆ ಕಳಿಸಿಕೊಡಲು ಪತ್ರದ ಮೂಲಕ ವಿನಂತಿ ಮಾಡಲಾಗಿದೆ ಬೀದರ ಜಿಲ್ಲೆ ಶೈಕ್ಷಣಿಕ ಕ್ಷೇತ್ರದಲ್ಲಿ ವಿದ್ಯಾರ್ಥಿಗಳ ಸಾಧನೆ ಹೆಚ್ಚಿಸಲು, ಪರೀಕ್ಷ ವಿಷಯ ತಜ್ಞರಾದ ಕಲಾಕುಂಚಾ ಸಾಂಸ್ಕೃತಿಕ ಸಂಸ್ಥೆ ದಾವಣಗೆರೆ ಅಧ್ಯಕ್ಷರಾದ ಶ್ರೀ ಗಣೇಶ ಶೆಣೈ ಹಾಗೂ ಮಹೇಶಕುಮಾರ ಬೆಂಗಳೂರು ರವರಿಂದ ಪರೀಕ್ಷ ಮಾರ್ಗದರ್ಶನ ಕಾರ್ಯಗಾರವನ್ನು ಹಮ್ಮಿಕೊಳ್ಳಲಾಗಿದೆ. ಬೆಳಗ್ಗೆ 11 ಗಂಟೆಯಿಂದ ಮಧ್ಯಾಹ್ನ 4 ಗಂಟೆ ವರೆಗೆ ನಡೆಯುವ ಪರೀಕ್ಷ ಕಾರ್ಯಗಾರದಲ್ಲಿ ಎಸ್ ಎಸ್ ಎಲ್ ಸಿ ಮತ್ತು ಪಿ ಯು ಸಿ ವಿದ್ಯಾರ್ಥಿಗಳಿಗೆ ಕಳಿಸಿಕೊಡಲು, ವಿಶ್ವ ಕನ್ನಡಿಗರ ಸಂಸ್ಥೆ ಅಧ್ಯಕ್ಷ ಡಾ. ಸುಬ್ಬಣ್ಣ ಕರಕನಳ್ಳಿ ವೀರ ಕನ್ನಡಿಗರ ಸೇನೆ ಜಿಲ್ಲಾಧ್ಯಕ್ಷ ಮುಖೇಶ ಶಹಾಗಂಜ್ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ, ಹೆಚ್ಚಿನ ಮಾಹಿತಿಗಾಗಿ 9901612139 ಸಂಖ್ಯೆ ಸಂಪರ್ಕಿಸಿ

## ಅನ್ನ ದಾಸೋಹಕ್ಕೆ ಚಾಲನೆ



**ಮಲ್ಲಮ್ಮ ನುಡಿ ವಾರ್ತೆ ಚಿಟಗುಪ್ಪ:**

ಪಟ್ಟಣದಲ್ಲಿ ಕನ್ನಡ ಸೇನೆ ಕರ್ನಾಟಕ ವತಿಯಿಂದ ಹಮ್ಮಿಕೊಂಡಿದ 70ನೇ ಕನ್ನಡ ರಾಜ್ಯೋತ್ಸವದ ಪ್ರಯುಕ್ತ ಅನ್ನದಾಸೋಹಕ್ಕೆ ಕನ್ನಡ ಸೇನೆ ಕರ್ನಾಟಕ ರಾಜ್ಯ ಉಪಾಧ್ಯಕ್ಷ ಡಾ. ರವಿ ಸ್ವಾಮಿ ನಿರ್ಣಾ ಚಾಲನೆ ನೀಡಿದರು. ಈ ಸಂಧರ್ಭದಲ್ಲಿ ಜಿಲ್ಲಾಧ್ಯಕ್ಷ ಸುಭಾಷ ಕೆನೆಡೆ, ತಾಲೂಕಾಧ್ಯಕ್ಷ ಪವನ ಪೂಜಾರಿ, ರಾಜಕುಮಾರ ಆರ್. ಹಡಪದ, ರಮೇಶ ಧೂಳ್, ನಿಂಗಪ್ಪ ಹಡಪದ, ಸತೀಶ ಗಂಜಿ, ಶಿವರಾಜ್ ಸ್ವಾಮಿ ಘಾತ್ಮಪುರ, ತಿಪ್ಪಣ್ಣ ಇಟಗಾ, ಉಮೇಶ ಧೂಮಾಳೆ ಸೇರಿದಂತೆ ಕನ್ನಡ ಸೇನೆ ಕಾರ್ಯಕರ್ತರು ಉಪಸ್ಥಿತರಿದ್ದರು.

## ಸಹಾಯಧನಕ್ಕಾಗಿ ತಾತ್ಕಾಲಿಕ ಪಟ್ಟಿ ಪ್ರಕಟ: ಆಕ್ಷೇಪಣೆ ಆಹ್ವಾನ

**ಮಲ್ಲಮ್ಮ ನುಡಿ ವಾರ್ತೆ** ಕಲಬುರಗಿ:

ಕಲಬುರಗಿ ಮಹಾನಗರ ಪಾಲಿಕೆಯಿಂದ 2025–26ನೇ ಸಾಲಿಗಾಗಿ ಎಸ್.ಎಫ್.ಸಿ (ಮುಕ್ತ ನಿಧಿ) ಕ್ರಿಯಾ ಯೋಜನೆಯಡಿ ಪರಿಶಿಷ್ಟ ಪಂಗಡದ ಜನರಿಗೆ ಸಣ್ಣ ಉದ್ದಿಮೆ ಸ್ಥಾಪಿಸಲು ಬ್ಯಾಂಕ್ ಮುಖಾಂತರ ಸಹಾಯಧನಕ್ಕಾಗಿ ಅರ್ಜಿ ಆಹ್ವಾನಿಸಿ, ಅರ್ಹ ಹಾಗೂ ಅನರ್ಹ ಅರ್ಜಿದಾರರ ತಾತ್ಕಾಲಿಕ ಪಟ್ಟಿಯನ್ನು ಕಲಬುರಗಿ ಮಹಾನಗರ ಪಾಲಿಕೆಯ ನೋಟೀಸ್ ಬೋರ್ಡ್‌ನಲ್ಲಿ ಈಗಾಗಲೇ ಪ್ರಚುರಪಡಿಸಲಾಗಿದೆ. ಈ ತಾತ್ಕಾಲಿಕ ಅರ್ಹ ಹಾಗೂ ಅನರ್ಹ ಪಟ್ಟಿಗೆ ಆಕ್ಷೇಪಣೆಗಳು ಇದ್ದಲ್ಲಿ 2025ರ ಡಿಸೆಂಬರ್ 12 ರೊಳಗಾಗಿ ಪೂರಕ ದಾಖಲೆಗಳೊಂದಿಗೆ ಕಲಬುರಗಿ ಮಹಾನಗರ ಪಾಲಿಕೆ ಕಚೇರಿಯಲ್ಲಿ ಆಕ್ಷೇಪಣೆ ಸಲ್ಲಿಸಬೇಕು. ಕೊನೆಯ ದಿನಾಂಕದ ನಂತರ ಬಂದ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ ಎಂದು ಅವರು ತಿಳಿಸಿದ್ದಾರೆ.

## ಗುರು ವಂದನೆ ಮಹೋತ್ಸವ ಜಾನಸನ್ ಘೋಡೆ

**ಮಲ್ಲಮ್ಮ ನುಡಿ ವಾರ್ತೆ**

**ಬೀದರ್ :** ಕಲಬುರಗಿ ಜಿಲ್ಲೆಯ ಆಳಂದ ತಾಲ್ಲೂಕಿನ ಜಿಡಗಾ ಮಠದಲ್ಲಿ ಡಿ. 1 ಹಾಗೂ 2 ರಂದು ಡಾ. ಮುರುಘರಾಜೇಂದ್ರ ಸ್ವಾಮೀಜಿ ಅವರ 41ನೇ ಗುರುವಂದನ ಮಹೋತ್ಸವ ನಡೆಯಲಿದೆ ಎಂದು ಶ್ರೀಮಠದ ಭಕ್ತ ಕಾಂಗ್ರೆಸ್ ಕಿಸಾನ್ ವಿಭಾಗದ ರಾಷ್ಟ್ರೀಯ ಜಂಟಿ ಸಂಯೋಜಕ ಜಾನಸನ್ ಘೋಡೆ ತಿಳಿಸಿದ್ದಾರೆ.

ಡಿ. 1 ರಂದು ಬೆಳಿಗ್ಗೆ 9.50ಕ್ಕೆ ಮಠದಲ್ಲಿ ನಿರ್ಮಿಸಿದ 100 ಅಡಿ ಎತ್ತರದ ನೂತನ ರಾಷ್ಟ್ರೀಯ ಧ್ವಜ



ಸ್ತಂಭ ಲೋಕಾರ್ಪಣೆ ಹಾಗೂ 2 ರಂದು ಬೆಳಿಗ್ಗೆ 11ಕ್ಕೆ ಗುರುವಂದನೆ ಮಹೋತ್ಸವ ಮತ್ತು ಸಾಂಸ್ಕೃತಿಕ ಕಾರ್ಯಕ್ರಮ ಜರುಗಲಿದೆ ಎಂದು ಹೇಳಿದ್ದಾರೆ.

ಡಾ. ಮುರುಘರಾಜೇಂದ್ರ ಸ್ವಾಮೀಜಿಯವರ 41ನೇ ಗುರುವಂದನೆ ಮಹೋತ್ಸವ ಸ್ವಾಗತ ಸಮಿತಿ ಹಾಗೂ ಭಕ್ತರಿಂದ ಈಗಾಗಲೇ ಮಹೋತ್ಸವಕ್ಕೆ ಭರದ ಸಿದ್ಧತೆಗಳು ನಡೆದಿವೆ. ತೆಲಂಗಾಣ, ಆಂಧ್ರಪ್ರದೇಶ, ಮಹಾರಾಷ್ಟ್ರ, ಗೋವಾ ಸೇರಿ ವಿವಿಧೆಡೆಯ ಐದು ರಾಜ್ಯದ ಭಕ್ತರು ಬರಲಿದ್ದಾರೆ. ಬೀದರ್ ಜಿಲ್ಲೆ ಹಾಗೂ ಕಲ್ಯಾಣ ಕರ್ನಾಟಕದ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಎಂದು ಮನವಿ ಮಾಡಿದ್ದಾರೆ.

# ಶಿಕ್ಷಾ ಬಂದಿಗಳಿಗೆ ಪೆರೋಲ್ ಮೇಲೆ ಬಿಡುಗಡೆ ಕುರಿತು ಅರಿವಿನ ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ:

ಕಲಬುರಗಿ ಕೇಂದ್ರ ಕಾರಾಗೃಹದಲ್ಲಿರುವ ಶಿಕ್ಷಾ ಬಂದಿಗಳಿಗೆ ಕೇಂದ್ರ ಕಾರಾಗೃಹ ಕಲಬುರಗಿ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಕಲಬುರಗಿರವರ ಸಂಯುಕ್ತ ಆಶ್ರಯದಲ್ಲಿ ಶಿಕ್ಷಾಬಂದಿಗಳಿಗೆ ಪೆರೋಲ್ ಮೇಲೆ ಬಿಡುಗಡೆ ಕುರಿತು ಅರಿವಿನ ಕಾರ್ಯಕ್ರಮವನ್ನು ಕಲಬುರಗಿ ಕೇಂದ್ರ ಕಾರಾಗೃಹದಲ್ಲಿ ಆಯೋಜಿಸಲಾಯಿತು. ಈ ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಗಳಾಗಿ ಆಗಮಿಸಿದ ಗೌ॥ ನ್ಯಾಯಾಧೀಶರಾದ ಶ್ರೀನಿವಾಸ ನವಲೆ, ಸದಸ್ಯರು ಕಾರ್ಯದರ್ಶಿಗಳು ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರು ಕಲಬುರಗಿರವರು ಮಾತನಾಡುತ್ತಾ, ಪೆರೋಲ್ ಅಂದರೆ ತಾತ್ಕಾಲಿಕ ಬಿಡುಗಡೆ ಈ ಅವಧಿಯಲ್ಲಿ ತಮಗೆ ನಿಗಧಿಗೊಳಿಸಿದ ದಿನಾಂಕದೊಳಗೆ ಅಂದರೆ 01 ತಿಂಗಳ ಪೆರೋಲ್ ಮೇಲೆ ಬಿಡುಗಡೆ ಹೊಂದಿದ್ದರೆ ತಾವು ತಿಂಗಳ ಕೊನೆಯ ದಿನಾಂಕಕ್ಕೆ ಕಾರಾಗೃಹಕ್ಕೆ ಬಂದು ವರದಿಯನ್ನು ಮಾಡಕೊಳ್ಳತಕ್ಕದ್ದು, ಒಂದು ವೇಳೆ ಒಂದು ದಿನ ತಡವಾದರೂ ಅದು ಕಾನೂನಿನ ಅಡಿಯಲ್ಲಿ



ಅಪರಾಧವಾಗುತ್ತದೆ.

ಆಗ ತಮಗೆ 02 ವರ್ಷಗಳ ಹೆಚ್ಚುವರಿ ಶಿಕ್ಷೆಯನ್ನು ನೀಡಲಾಗುತ್ತದೆ. ಈಗಾಗಲೇ ತಮಗೆ ನೀಡಿರುವ ಶಿಕ್ಷಾ ಅವಧಿಯ ಜೊತೆಗೆ ಹೆಚ್ಚುವರಿಯಾಗಿ 02 ವರ್ಷ ಜೈಲು ಕಳೆಯಬೇಕಾಗುತ್ತದೆ. ಆದ್ದರಿಂದ ತಾವುಗಳು ಪೆರೋಲ್ ಅವಧಿಯಲ್ಲಿ ನೀಡಿದ ದಿನಾಂಕಕ್ಕೆ ಮರಳಿ ಹೆಚ್ಚುವರಿ ಶಿಕ್ಷೆಯಿಂದ ತಪ್ಪಿಸಿಕೊಳ್ಳಿ, ಅಲ್ಲದೆ ತಾವುಗಳು ತಮ್ಮ ಜೊತೆ ನಿಷೇಧಿತ ವಸ್ತುಗಳು ಸಿಕ್ಕರು ಕೂಡಾ ಶಿಕ್ಷೆಯ ಜೊತೆಗೆ ಹೆಚ್ಚುವರಿ ಶಿಕ್ಷೆ ಅನುಭಸಬೇಕಾಗುತ್ತದೆ.

ಆದ್ದರಿಂದ ಇಲ್ಲಿ ತಾವುಗಳು ಕಾನೂನಿನ ಕಾಯಿದೆ ನಿಯಮಗಳನ್ನು ಪಾಲಿಸುವಂತೆ ಹಾಗೂ ಕಾರಾಗೃಹದಲ್ಲಿ ಕರ್ತವ್ಯ ನಿರ್ವಹಿಸುವ ಅಧಿಕಾರಿ/ಸಿಬ್ಬಂದಿಗಳು ತಮ್ಮ ಕರ್ತವ್ಯದಲ್ಲಿ ಕುಂದು-ಕೊರತೆಗಳು, ಯಾವುದೇ ತೊಂದರೆಗಳು ಉಂಟಾದರೆ ನೇರವಾಗಿ ಗೌ॥ ನ್ಯಾಯಾಲಯಕ್ಕೆ ತಮ್ಮ ಸಮಸ್ಯೆಗಳನ್ನು ಹೇಳಿಕೊಳ್ಳಬಹುದು ಎಂದು ಕರೆ ನೀಡಿದರು.

ಈ ಕಾರ್ಯಕ್ರಮದ ಘನ ಅಧ್ಯಕ್ಷತೆಯನ್ನು ವಹಿಸಿದ ಈ ಸಂಸ್ಥೆಯ ಮುಖ್ಯ ಅಧೀಕ್ಷಕರಾದ ಡಾ॥ ಅನೀತಾ ಆರ್. ರವರು ಮಾತನಾಡುತ್ತಾ ಪೆರೋಲ್ ಮೇಲೆ ಎರಡು ರೀತಿಯಲ್ಲಿ ಬಿಡುಗಡೆಗೆ ಅವಕಾಶವಿದೆ. ಒಂದು ಸಾಮಾನ್ಯ ಬಿಡುಗಡೆ, ಇನ್ನೊಂದು ತುರ್ತು ಸಂದರ್ಭದಲ್ಲಿ ಬಿಡುಗಡೆಗೊಳಿಸಲಾಗುತ್ತದೆ. ಪೆರೋಲ್ ಅವಧಿಯನ್ನು ತಾವುಗಳು 01 ತಿಂಗಳಿಂದ 03 ತಿಂಗಳವರೆಗೆ ವಿಸ್ತರಿಸಲು ಅವಕಾಶವಿದೆ.

ಬಂದಿಗಳು ಪೆರೋಲ್ ಬಗ್ಗೆ ಸಂಪೂರ್ಣ ಮಾಹಿತಿಯನ್ನು ಪಡೆದು, ನಿಯಮಗಳನ್ನು ಅರಿತು ಅದರ ಸದುಪಯೋಗ ಪಡೆದುಕೊಳ್ಳಬೇಕೆಂದು ಹೇಳಿದರು.

ಪೆರೋಲ್ ಮೇಲೆ ತೆರಳಲು ಕನಿಷ್ಠ ವಿಚಾರಣಾ ಅವಧಿ ಸೇರಿ 02 ವರ್ಷಗಳು ಪೂರೈಸಿದವರಿಗೆ ಬಿಡುಗಡೆಗೆ ಅವಕಾಶವಿರುತ್ತದೆಂದು ಹೇಳಿದರು.

ಈ ಕಾರ್ಯಕ್ರಮದಲ್ಲಿ ಈ ಸಂಸ್ಥೆಯ ಅಧೀಕ್ಷಕರಾದ ಶ್ರೀ. ಎಂ. ಹೆಚ್. ಆಶೇಖಾನ್, ಸಹಾಯಕ ಅಧೀಕ್ಷಕರಾದ ಶ್ರೀ ಚನ್ನಪ್ಪ, ಈ ಸಂಸ್ಥೆಯ ಜೈಲರ್‌ಗಳಾದ ಶ್ರೀಮತಿ ಸುನಂದಾ ವಿ., ಶ್ರೀ ಪುಂಡಲೀಕ

ಟಿ.ಕೆ, ಶ್ಯಾಮ ಬಿದ್ರಿ ಹಾಗೂ ಎಲ್ಲಾ ಅಧಿಕಾರಿ/ಸಿಬ್ಬಂದಿಗಳು ಭಾಗವಹಿಸಿದ್ದರು. ಸಂಸ್ಥೆಯ ಶಿಕ್ಷಕರಾದ ಶ್ರೀ ನಾಗರಾಜ ಮೂಲಗೆ ರವರು ನಿರೂಪಣೆಯೊಂದಿಗೆ ಕಾರ್ಯಕ್ರಮ ನೆರವೇರಿಸಿದರು.

## ಬಾಕಿ ಉಳಿದಿರುವ ಇಲಾಖಾ ಶಾಸನ ಪ್ರಕರಣ ದಂಡದ ಮೊತ್ತದಲ್ಲಿ ಶೇ.50 ರಷ್ಟು ರಿಯಾಯಿತಿ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ: ಕಲಬುರಗಿ ಉಪ ಸಾರಿಗೆ ಆಯುಕ್ತರು ಹಾಗೂ ಹಿರಿಯ ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಚೇರಿಯಲ್ಲಿನ 1991-92 ರಿಂದ 2019-2020ರ ಅವಧಿಯಲ್ಲಿ ವಿವಿಧ ಅಪರಾಧಗಳಿಗಾಗಿ ಮತ್ತು ವಿವಿಧ ವಾಹನಗಳ ವಿರುದ್ಧ ಬಾಕಿ ಇರುವ ಇಲಾಖಾ ಶಾಸನ ಪ್ರಕರಣಗಳನ್ನು ಇತ್ಯರ್ಥಪಡಿಸಲು ದಂಡದ ಮೊತ್ತದಲ್ಲಿ ಶೇ. 50ರಷ್ಟು ರಿಯಾಯಿತಿ ನೀಡಿ ರಾಜ್ಯ ಸರ್ಕಾರವು ಆದೇಶ ಹೊರಡಿಸಿದೆ. ಸಾರ್ವಜನಿಕರು ಕಲಬುರಗಿ ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಚೇರಿಗೆ ಖುದ್ದಾಗಿ ಭೇಟಿ ನೀಡಿ ಈ ರಿಯಾಯಿತಿಯ ಸದುಪಯೋಗಪಡೆದುಕೊಳ್ಳಬೇಕೆಂದು ಕಲಬುರಗಿ ಉಪ ಸಾರಿಗೆ ಆಯುಕ್ತರು ಹಾಗೂ ಹಿರಿಯ ಪ್ರಾದೇಶಿಕ ಸಾರಿಗೆ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

1991-92 ರಿಂದ 2019-2020ರ ವರೆಗೆ ಒಟ್ಟು 1205 ಪ್ರಕರಣಗಳು ಬಾಕಿ ಇದ್ದು, ಈ ಪ್ರಕರಣವಾರು ದಂಡದ ದರಗಳ ವಿವರ ಈ ಕೆಳಕಂಡಂತೆ ಇರುತ್ತದೆ.

ದಿನಾಂಕ: 02-09-2019 ರವರೆಗೆ ಪ್ರಕರಣಗಳು: ಡಿ.ಎಲ್.ರಹಿತ ಚಾಲನೆಗಾಗಿ 1500 ರೂ, ವಿಮಾ ರಹಿತ ಚಾಲನೆಗಾಗಿ 500 ರೂ, ರಹದಾರಿ ರಹಿತ ಅಪರಾಧಕ್ಕೆ 5000 ರೂ, ಅರ್ಹತಾ ಪತ್ರ ರಹಿತ ಚಾಲನೆಗಾಗಿ 2000 ರೂ. ಹಾಗೂ ಅಧಿಕ ಭಾರ ಸಾಗಿಸಿದ್ದಕ್ಕಾಗಿ 2000 ರೂ. ಮತ್ತು ಪ್ರತಿ ಟನ್‌ಗೆ 1000 ರೂ. ದಂಡವನ್ನು ಪಾವತಿಸಬೇಕು.

ದಿನಾಂಕ 03-09-2019 ರಿಂದ 20-09-2019 ರವರೆಗಿನ ಅವಧಿಯ ಪ್ರಕರಣಗಳಿಗೆ: ಡಿ.ಎಲ್. ರಹಿತ ಚಾಲನೆಗಾಗಿ 10,000 ರೂ., ವಿಮಾ ರಹಿತ ಚಾಲನೆಗಾಗಿ 2000 ರೂ., ರಹದಾರಿ ರಹಿತ ಅಪರಾಧಕ್ಕೆ ರೂ. 10000 ರೂ., ಅರ್ಹತಾ ಪತ್ರ ರಹಿತ ಚಾಲನೆಗಾಗಿ 5000 ರೂ. ಹಾಗೂ ಅಧಿಕ ಭಾರ ಸಾಗಿಸಿದ್ದಕ್ಕಾಗಿ 20000 ರೂ. ಮತ್ತು ಪ್ರತಿ ಟನ್‌ಗೆ 2000 ರೂ. ದಂಡ ಪಾವತಿಸಬೇಕು.

ದಿನಾಂಕ: 21-09-2019 ರಿಂದ 31-03-2020 ವರೆಗಿನ ಅವಧಿಯ ಪ್ರಕರಣಗಳಿಗೆ: ಡಿ.ಎಲ್.ರಹಿತ ಚಾಲನೆಗಾಗಿ 10000 ರೂ., ವಿಮಾ ರಹಿತ ಚಾಲನೆಗಾಗಿ 4000 ರೂ., ರಹದಾರಿ ರಹಿತ ಅಪರಾಧಕ್ಕೆ 5000 ರೂ., ಅರ್ಹತಾ ಪತ್ರ ರಹಿತ ಚಾಲನೆ ಅಪರಾಧಕ್ಕೆ 5000 ರೂ ಹಾಗೂ ಅಧಿಕ ಭಾರ ಸಾಗಿಸಿದ್ದಕ್ಕಾಗಿ 5000 ರೂ. ಮತ್ತು ಪ್ರತಿ ಟನ್‌ಗೆ 2000 ರೂ. ದಂಡ ಪಾವತಿಸಬೇಕು.

ಇದಲ್ಲದೇ ಮೋಟಾರು ವಾಹನ ಕಾಯ್ದೆ 1988ರ ಸೆಕ್ಷನ್ 200ರಲ್ಲಿ ಬರುವ ವಿವಿಧ ಅಪರಾಧಗಳಿಗೆ ಆಯಾ ಕಾಲಕ್ಕೆ ನೀಡಿದ ಅಧಿಸೂಚನೆ ಪ್ರಕಾರ ದಂಡ ವಿಧಿಸಲಾಗುತ್ತದೆ ಹಾಗೂ ದಂಡದ ಮೊತ್ತದಲ್ಲಿ ಮಾತ್ರ ಶೇ. 50 ರಷ್ಟು ರಿಯಾಯಿತಿ ನೀಡಿ ಸರ್ಕಾರವು ಆದೇಶಿಸಿದ್ದು, ಈ ಆದೇಶವು ದಿನಾಂಕ: 21-11-2025 ರಿಂದ ದಿನಾಂಕ: 12-12-2025 ರವರೆಗೆ ಜಾರಿಯಲ್ಲಿದ್ದು, ಸಾರ್ವಜನಿಕರು ಈ ರಿಯಾಯಿತಿಯ ಸದುಪಯೋಗಪಡಿಸಿಕೊಳ್ಳಬೇಕೆಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಹಾಯಧನಕ್ಕಾಗಿ ತಾತ್ಕಾಲಿಕ ಪಟ್ಟಿ ಪ್ರಕಟ: ಆಕ್ಷೇಪಣೆ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ:

ಕಲಬುರಗಿ ಮಹಾನಗರ ಪಾಲಿಕೆಯಿಂದ 2025-26ನೇ ಸಾಲಿಗಾಗಿ ಎಸ್.ಎಫ್.ಸಿ (ಮುಕ್ತ ನಿಧಿ) ಕ್ರಿಯಾ ಯೋಜನೆಯಡಿ ಪರಿಶಿಷ್ಟ ಪಂಗಡದ ಜನರಿಗೆ ಸಣ್ಣ ಉದ್ದಿಮೆ ಸ್ಥಾಪಿಸಲು ಬ್ಯಾಂಕ್ ಮುಖಾಂತರ ಸಹಾಯಧನಕ್ಕಾಗಿ ಅರ್ಜಿ ಆಹ್ವಾನಿಸಿ, ಅರ್ಹ ಹಾಗೂ ಅನರ್ಹ ಅರ್ಜಿದಾರರ ತಾತ್ಕಾಲಿಕ ಪಟ್ಟಿಯನ್ನು ಕಲಬುರಗಿ ಮಹಾನಗರ ಪಾಲಿಕೆಯ ನೋಟೀಸ್ ಬೋರ್ಡ್‌ನಲ್ಲಿ ಈಗಾಗಲೇ ಪ್ರಚುರಪಡಿಸಲಾಗಿದೆ ಎಂದು ಕಲಬುರಗ ಮಹಾನಗರ ಪಾಲಿಕೆಯ ಉಪ ಆಯುಕ್ತರು (ಆಡಳಿತ) ಅವರು ತಿಳಿಸಿದ್ದಾರೆ.

ಈ ತಾತ್ಕಾಲಿಕ ಅರ್ಹ ಹಾಗೂ ಅನರ್ಹ ಪಟ್ಟಿಗೆ ಆಕ್ಷೇಪಣೆಗಳು ಇದ್ದಲ್ಲಿ 2025ರ ಡಿಸೆಂಬರ್ 12 ರೊಳಗಾಗಿ ಪೂರಕ ದಾಖಲೆಗಳೊಂದಿಗೆ ಕಲಬುರಗಿ ಮಹಾನಗರ ಪಾಲಿಕೆ ಕಚೇರಿಯಲ್ಲಿ ಆಕ್ಷೇಪಣೆ ಸಲ್ಲಿಸಬೇಕು. ಕೊನೆಯ ದಿನಾಂಕದ ನಂತರ ಬಂದ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ ಎಂದು ಅವರು ತಿಳಿಸಿದ್ದಾರೆ.

## ಜಿಲ್ಲೆಯಲ್ಲಿ ಮಾನಸಿಕ ಆರೋಗ್ಯ ಶಿಬಿರ

ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ:

ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮ ಹಾಗೂ ಮನೋಚೈತನ್ಯ ಕಾರ್ಯಕ್ರಮದಡಿ ಕಲಬುರಗಿ ಜಿಲ್ಲೆಯ ಎಲ್ಲಾ ತಾಲೂಕು ಸಾರ್ವಜನಿಕ ಆಸ್ಪತ್ರೆ, ಸಮುದಾಯ ಆರೋಗ್ಯ ಕೇಂದ್ರ ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ 2025ರ ಡಿಸೆಂಬರ್ ಮಾಹೆಯಲ್ಲಿ ಕೆಳಕಂಡ ದಿನಾಂಕಗಳಂದು ಮಾನಸಿಕ ಆರೋಗ್ಯ ಶಿಬಿರವನ್ನು ಹಮ್ಮಿಕೊಳ್ಳಲಾಗಿದೆ ಎಂದು ಕಲಬುರಗಿ ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮ ಅಧಿಕಾರಿಗಳು ತಿಳಿಸಿದ್ದಾರೆ.

ತಪಾಸಣಾ ಶಿಬಿರದ ವಿವರ ಇಂತಿದೆ. ಡಿಸೆಂಬರ್ 2 ರಂದು ಆಳಂದ ತಾಲೂಕು ಸಾರ್ವಜನಿಕ ಆಸ್ಪತ್ರೆ, ಡಿಸೆಂಬರ್ 4 ರಂದು ದೇವಲ ಗಾಣಗಾಪುರ ಸಂಗಮ್, ಡಿಸೆಂಬರ್ 5 ರಂದು ಕಮಲಾಪುರ ಪ್ರಾಥಮಿಕ ಆರೋಗ್ಯ ಆಸ್ಪತ್ರೆ, ಡಿಸೆಂಬರ್ 6 ರಂದು ಕಲಬುರಗಿ ಕೇಂದ್ರ ಕಾರಾಗೃಹ, ಡಿಸೆಂಬರ್ 9 ರಂದು ಚಿಂಚೋಳಿ ತಾಲೂಕು ಸಾರ್ವಜನಿಕ ಆಸ್ಪತ್ರೆ, ಡಿಸೆಂಬರ್ 12ರಂದು ಅಫಜಲಪುರ ತಾಲೂಕು ಸಾರ್ವಜನಿಕ ಆಸ್ಪತ್ರೆ, ಡಿಸೆಂಬರ್ 13ರಂದು ಕಲಬುರಗಿ ಕೇಂದ್ರ ಕಾರಾಗೃಹ, ಡಿಸೆಂಬರ್ 16 ರಂದು ಚಿತ್ತಾಪುರ ಸಾರ್ವಜನಿಕ ತಾಲೂಕು ಆಸ್ಪತ್ರೆ, ಡಿಸೆಂಬರ್ 19 ರಂದು ಜೇವರ್ಗಿ ತಾಲೂಕು ಸಾರ್ವಜನಿಕ ಆಸ್ಪತ್ರೆ, ಡಿಸೆಂಬರ್ 20 ರಂದು ಕಲಬುರಗಿ ಕೇಂದ್ರ ಕಾರಾಗೃಹ, ಡಿಸೆಂಬರ್ 23 ರಂದು ಸೇಡಂ ತಾಲೂಕು ಸಾರ್ವಜನಿಕ ಆಸ್ಪತ್ರೆ, ಡಿಸೆಂಬರ್ 26 ರಂದ

ು ಕಾಳಗಿ ಸಮುದಾಯ ಆರೋಗ್ಯ ಕೇಂದ್ರ, ಡಿಸೆಂಬರ್ 27 ರಂದು ಕಲಬುರಗಿ ಕೇಂದ್ರ ಕಾರಾಗೃಹ ಹಾಗೂ ಡಿಸೆಂಬರ್ 31 ರಂದು ಶಹಾಬಾದ ಸಮುದಾಯ ಆರೋಗ್ಯ ಕೇಂದ್ರಗಳಲ್ಲಿ ತಪಾಸಣಾ ಶಿಬಿರ ಜರುಗಲಿದೆ.

ಮಾನಸಿಕ

ಕಾಯಿಲೆಗಳ ಲಕ್ಷಣಗಳನ್ನು ಹೊಂದಿರುವ ವ್ಯಕ್ತಿಗಳನ್ನು ಸಮುದಾಯದಲ್ಲಿ ಗುರುತಿಸಿ ಅವರನ್ನು ಈ ಶಿಬಿರ ನಡೆಯುವ

ದಿನಾಂಕದಂದು ಕರೆತಂದು ತಜ್ಞರಿಗೆ ತೋರಿಸಿ ಚಿಕಿತ್ಸೆ ಕೊಡಿಸಬೇಕು ಅವರು ತಿಳಿಸಿದ್ದಾರೆ.

## ಪರೀಕ್ಷಾ ಕೇಂದ್ರಗಳ ಸುತ್ತಮುತ್ತಲೂ ನಿಷೇಧಾಜ್ಞೆ

ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ:

ಕರ್ನಾಟಕ ನರ್ಸಿಂಗ್ ಹಾಗೂ ಅರೆ ವೈದ್ಯಕೀಯ ವಿಜ್ಞಾನಗಳ ನಿಯಂತ್ರಣ ಪ್ರಾಧಿಕಾರ ನಡೆಸುತ್ತಿರುವ ಅರೆ ವೈದ್ಯಕೀಯ ಕೋರ್ಸ್‌ಗಳ ಡಿಸೆಂಬರ್ 2025ರ ವಾರ್ಷಿಕ ಪರೀಕ್ಷೆಯು ಕಲಬುರಗಿ ನಗರದ-04 ಹಾಗೂ ಅಫಜಲಪುರ ತಾಲೂಕಿನ ಮಲ್ಲಾಬಾದ್‌ನಲ್ಲಿ-01 ಸೇರಿದಂತೆ ಒಟ್ಟು 05 ಪರೀಕ್ಷಾ ಕೇಂದ್ರಗಳಲ್ಲಿ 2025ರ ಡಿಸೆಂಬರ್ 2 ರಿಂದ ಡಿಸೆಂಬರ್ 5 ರವರೆಗೆ ಬೆಳಿಗ್ಗೆ 9.30 ರಿಂದ ಮಧ್ಯಾಹ್ನ 12.30 ಗಂಟೆಯವರೆಗೆ ಹಾಗೂ ಮಧ್ಯಾಹ್ನ 2 ರಿಂದ ಸಂಜೆ 5 ಗಂಟೆಯವರೆಗೆ ಜರುಗಲಿದೆ.

ಈ ಪರೀಕ್ಷೆಯನ್ನು ಶಾಂತಿಯುತ, ಸುಸೂತ್ರವಾಗಿ ನಡೆಸಲು ಹಾಗೂ ನಕಲು ತಡೆಯಲು ಅನುಕೂಲವಾಗುವಂತೆ ಜಿಲ್ಲೆಯ ಒಟ್ಟು 05 ಪರೀಕ್ಷಾ ಕೇಂದ್ರಗಳ ಸುತ್ತಮುತ್ತಲಿನ 200 ಮೀಟರ್ ಸ್ಥಳವನ್ನು ಪರೀಕ್ಷಾ ಸಮಯದಲ್ಲಿ ನಿಷೇಧಿತ ಪ್ರದೇಶವೆಂದು ಘೋಷಿಸಲಾಗಿದೆ. ಕಲಬುರಗಿ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿಗಳಾದ ಬಿ. ಫೌಜಿಯಾ ತರನ್ನುಮ್ ಅವರು 2023 ಬಿ.ಎನ್.ಎಸ್.ಎಸ್. ಕಲಂ 163ರ ಅಡಿಯಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಈ ಆದೇಶ ಹೊರಡಿಸಿದ್ದಾರೆ.

ಕರ್ನಾಟಕ ಪೊಲೀಸ್ ಅಧಿನಿಯಮ 1963ರ ಕಲಂ-35(ಸಿ)ರ ಅನ್ವಯ ಈ ಪರೀಕ್ಷಾ ಸಮಯದಲ್ಲಿ ಸಂಬಂಧಪಟ್ಟ ಪರೀಕ್ಷಾ ಕೇಂದ್ರದ ಮುಖ್ಯ ಅಧೀಕ್ಷಕರು, ಸಿಬ್ಬಂದಿ ವರ್ಗದವರನ್ನು ಹೊರತುಪಡಿಸಿ, ಬೇರೆ ಯಾವುದೇ ವ್ಯಕ್ತಿಗಳು ಪರೀಕ್ಷಾ ಕೇಂದ್ರಗಳ ಸುತ್ತಮುತ್ತಲಿನ ವ್ಯಾಪ್ತಿಯ 200 ಮೀಟರ್ ಪ್ರದೇಶದಲ್ಲಿ ಮೊಬೈಲ್ ಫೋನ್, ಪೇಜರ್, ಬ್ಲ್ಯೂಟೂತ್ ಹಾಗೂ ವೈರ್‌ಲೆಸ್ ಸೆಟ್‌ಗಳು ಸೇರಿದಂತೆ ಮತ್ತಿತರ ಇಲೆಕ್ಟ್ರಾನಿಕ್ಸ್ ವಸ್ತುಗಳನ್ನು ಉಪಯೋಗಿಸುವುದನ್ನು ನಿಷೇಧಿಸಲಾಗಿದೆ. ಇದಲ್ಲದೇ ಈ ಪರೀಕ್ಷಾ ಕೇಂದ್ರಗಳ ಪ್ರದೇಶ ವ್ಯಾಪ್ತಿಯನ್ನು ಬರುವ ಎಲ್ಲಾ ಝೆರಾಕ್ಸ್ ಮತ್ತು ಪುಸ್ತಕ ಅಂಗಡಿ ಮುಂತಾದವನ್ನು ಮುಚ್ಚುವಂತೆಯೂ ಜಿಲ್ಲಾ ದಂಡಾಧಿಕಾರಿಗಳು ಆದೇಶಿಸಿದ್ದಾರೆ.

## ಕೇಂದ್ರ ಜಲಶಕ್ತಿ ಸಚಿವರಿಗೆ ಪತ್ರ: ಪ್ರಿಯಾಂಕ್ ಖರ್ಗೆ

ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ:

ಕರ್ನಾಟಕ ರಾಜ್ಯವು ಜಲ ಜೀವನ್ ಮಿಷನ್ (ಜೆಜೆಎಂ) ಯೋಜನೆಯನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸುತ್ತಿದ್ದು, ಕೇಂದ್ರ ಸರ್ಕಾರ ರಾಜ್ಯಕ್ಕೆ ಮಂಜೂರು ಮಾಡಿರುವ ಅನುದಾನ ಅತ್ಯಂತ ಕಡಿಮೆಯಾಗಿದ್ದು ಇದು ಕೇಂದ್ರ ಸರ್ಕಾರದ ಪಾಲಿನ ಅತಿ ದೊಡ್ಡ ಕೊರತೆಯನ್ನು ತೋರುತ್ತದೆ ಹಾಗೂ ರಾಜ್ಯ ಸರ್ಕಾರದ ಪ್ರಗತಿಪರ ಕಾಮಗಾರಿಗಳಿಗೆ ಅಡ್ಡಿಯಾಗುತ್ತಿದೆ ಎಂದು ಕೇಂದ್ರ ಜಲಶಕ್ತಿ ಸಚಿವರಾದ ಸಿ.ಆರ್.ಪಾಟೀಲ್ ಅವರಿಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ಮತ್ತು ಜೈವಿಕ ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ ಬರೆದಿರುವ ಪತ್ರದಲ್ಲಿ ತಿಳಿಸಿದ್ದಾರೆ.

ಜಲಜೀವನ್ ಮಿಷಿನ್ ಯೋಜನೆಯ ಆರ್ಥಿಕ ಪ್ರಗತಿ ರೂ.35,698.58 ಕೋಟಿಗಳಾಗಿದ್ದು, ಅನುಮೋದಿತ ವೆಚ್ಚ ರೂ.69,487.60 ಕೋಟಿಗಳಾಗಿದೆ. ಒಟ್ಟು 35,698.58 ಕೋಟಿ ರೂಪಾಯಿ ವೆಚ್ಚದಲ್ಲಿ, ರಾಜ್ಯದ ಪಾಲು 24,598.45 ಕೋಟಿ ರೂಪಾಯಿಗಳಾಗಿದ್ದರೆ, ಕೇಂದ್ರ ಪಾಲು ಕೇವಲ 11,786.63 ಕೋಟಿ ರೂಪಾಯಿಗಳಾಗಿದೆ ಎಂದು ಪತ್ರದಲ್ಲಿ ತಿಳಿಸಿರುವ ಸಚಿವ ಪ್ರಿಯಾಂಕ್ ಖರ್ಗೆ ಇದು ಕೇಂದ್ರ ಸರ್ಕಾರದ ಪಾಲಿನ ದೊಡ್ಡ ಕೊರತೆಯನ್ನು ಪ್ರತಿಬಿಂಬಿಸುತ್ತದೆ ಎಂದು ಹೇಳಿದ್ದು, ಈ ಹಣಕಾಸು ವರ್ಷದಲ್ಲಿಯೂ ಸಹ, ರಾಜ್ಯ ಸರ್ಕಾರವು 1,500.00 ಕೋಟಿ ರೂಪಾಯಿಗಳನ್ನು ಬಿಡುಗಡೆ ಮಾಡಿದೆ, ಆದರೆ ಇಲ್ಲಿಯವರೆಗೆ ಕೇಂದ್ರ ಸರ್ಕಾರದ ಅನುದಾನ ಬಿಡುಗಡೆ ಶೂನ್ಯವಾಗಿದೆ, ಯಾವುದೇ ಸಂಭಾವ್ಯ ವಿಳಂಬವನ್ನು ತಗ್ಗಿಸಲು ಮತ್ತು ಕೇಂದ್ರ ಸರ್ಕಾರದ ನಿಧಿಯ ನಿರೀಕ್ಷೆಯಲ್ಲಿ ನಡೆಯುತ್ತಿರುವ ಕಾಮಗಾರಿಗಳನ್ನು ಮುಂದುವರಿಸಲು ರಾಜ್ಯ ಸರ್ಕಾರವು ಪೂರ್ವಭಾವಿಯಾಗಿ ಹಣವನ್ನು ವಿತರಿಸಿದೆ ಎಂಬ ಸಂಗತಿಯನ್ನು ಪತ್ರದಲ್ಲಿ ಉಲ್ಲೇಖಿಸಿದ್ದಾರೆ.

ಈ ಹಣಕಾಸು ವರ್ಷದಲ್ಲಿ ರಾಜ್ಯವು ಬಜೆಟ್ ಹಂಚಿಕೆಗಳು ಮತ್ತು ಸಕಾಲಿಕ ಬಿಡುಗಡೆಗಳ ಮೂಲಕ ಈ ಯೋಜನೆಯನ್ನು ಪೂರ್ವಭಾವಿಯಾಗಿ ಬೆಂಬಲಿಸುತ್ತಿದೆ, ಇದರಲ್ಲಿ ರೂ.11,050.00 ಕೋಟಿ ಹಂಚಿಕೆಯಾಗಿದೆ, ಕೇಂದ್ರ ಅನುದಾನಗಳ ಸಕಾಲಿಕ ಬಿಡುಗಡೆ ಸೇರಿದಂತೆ ಪರಿಣಾಮಕಾರಿ ಅನುಷ್ಠಾನಕ್ಕಾಗಿ ಈ ಯೋಜನೆಗೆ ಭಾರತ ಸರ್ಕಾರದಿಂದ ನಿರಂತರ ಬೆಂಬಲದ ಅಗತ್ಯವಿದೆ ಎಂದೂ ಸಚಿವ ಪ್ರಿಯಾಂಕ್ ಖರ್ಗೆ ಕೇಂದ್ರ ಸಚಿವರಿಗೆ ಬರೆದಿರುವ ಪತ್ರದಲ್ಲಿ ತಿಳಿಸಿದ್ದಾರೆ. ಪ್ರಸ್ತುತ, ಸುಮಾರು 1700.00 ಕೋಟಿ ರೂಪಾಯಿಗಳ ಬಿಲ್ಗಳು ಪಾವತಿಗೆ ಬಾಕಿ ಉಳಿದಿವೆ ಮತ್ತು 2600.00 ಕೋಟಿ ರೂಪಾಯಿಗಳ ಬಿಲ್ಗಳು ಪೈಪ್ಲೈನ್ನಲ್ಲಿವೆ. ಈ ಪಾವತಿಗಳು ಮತ್ತಷ್ಟು ವಿಳಂಬವಾದರೆ ಕೆಲಸಗಳು ನಿಧಾನವಾಗುವ / ಸ್ಥಗಿತಗೊಳ್ಳುವ ಸಾಧ್ಯತೆಯಿದೆ ಎಂದು ಕಳವಳ ವ್ಯಕ್ತಪಡಿಸಿರುವ ಸಚಿವ ಪ್ರಿಯಾಂಕ್ ಖರ್ಗೆ ಅವರು ಕೆಲವು ಗುತ್ತಿಗೆದಾರರು ಈಗಾಗಲೇ ಸಿಬ್ಬಂದಿಯನ್ನು ಕಡಿಮೆ ಮಾಡಲು ಪ್ರಾರಂಭಿಸಿದ್ದಾರೆ.

## ಸದೃಢ ಭಾರತಕ್ಕಾಗಿ ಆರೋಗ್ಯವಂತ, ಪ್ರಜ್ಞಾವಂತ ಯುವಕರ ಅವಶ್ಯಕತೆ ಇದೆ: ದೊಡ್ಡಮನಿ




ಮಲ್ಲಮ್ಮನುಡಿವಾರ್ತೆ ಕಲಬುರಗಿ:

ಸದೃಢಭಾರತಕ್ಕಾಗಿ ಆರೋಗ್ಯವಂತ ಮತ್ತು ಪ್ರಜ್ಞಾವಂತ ಯುವಕರ ಅವಶ್ಯಕತೆ ಇದೆ. ವಿದ್ಯಾರ್ಥಿಗಳು ಹಾಗೂ ಯುವಕರು ಇಂದು ಡ್ರಗ್ಸ್ ವ್ಯಸನಿಗಳಾಗಿ ಮೋಜು-ಮಸ್ತಿಯಲ್ಲಿ ತಮ್ಮ ಜೀವನ ಹಾಳುಮಾಡಿಕೊಂಡು ಕುಟುಂಬ, ಸಮಾಜ ಮತ್ತು ರಾಷ್ಟ್ರಕ್ಕೆ ಮಾರಕವಾಗುತ್ತಿದ್ದಾರೆ. ಎಎಸ್ ವಿದ್ಯಾರ್ಥಿಗಳು ಸಮಾಜದಲ್ಲಿ ಜಾಗೃತಿ ಮೂಡಿಸಿ ನಶೆ ಮುಕ್ತ ಭಾರತ ಮಾಡಲು ಸಂಕಲ್ಪ ಮಾಡಬೇಕೆಂದು ಎಎಸ್ ವಿಭಾಗೀಯ ಅಧಿಕಾರಿ ಡಾ.ಚಂದ್ರಶೇಖರ ದೊಡ್ಡಮನಿ ಅಭಿಪ್ರಾಯಪಟ್ಟರು.

ಸೇಡಂನ ಮಾತೃಛಾಯಾ ಪದವಿ ಪೂರ್ವ ಕಾಲೇಜಿನಲ್ಲಿ ರಾಷ್ಟ್ರೀಯ ಸೇವಾ ಯೋಜನೆ ವತಿಯಿಂದ ಮಾಧವಾರ ಗ್ರಾಮದಲ್ಲಿ ಹಮ್ಮಿಕೊಂಡ ಎಎಸ್ ವಾರ್ಷಿಕ ವಿಶೇಷ ಶಿಬಿರ ಉದ್ಘಾಟಿಸಿ ಮಾತನಾಡಿದ ಅವರು, ವಿದ್ಯಾರ್ಥಿಗಳು ಪ್ರಜ್ಞೆ ಹಾಗೂ ಪರಿಶ್ರಮದಿಂದ ಅಧ್ಯಯನ ಮಾಡಿ ಉನ್ನತ ಅಧಿಕಾರಿಗಳು ಮತ್ತು ನಾಯಕರಾಗಲು ಶ್ರಮಿಸಬೇಕೆಂದರು. ಸಾನಿಧ್ಯ ವಹಿಸಿದ ಶಿವಶಂಕರಮಠದ ಶಿವಶಂಕರ ಶಿವಾಚಾರ್ಯರು ಮಾತನಾಡಿ, ವಿದ್ಯಾರ್ಥಿಗಳು ಉತ್ತಮ ಗುಣಗಳು ಮತ್ತು ಆದರ್ಶ ತತ್ವಗಳನ್ನು ಬದುಕಿನಲ್ಲಿ ಅಳವಡಿಸಿಕೊಳ್ಳಬೇಕೆಂದರು.

ಕೊತ್ತಲ ಬಸವೇಶ್ವರ ಭಾರತೀಯ ಶಿಕ್ಷಣ ಸಮಿತಿಯ ಕಾರ್ಯದರ್ಶಿ ಅನುರಾಧ ಪಾಟೀಲ್ ಕಾರ್ಯಕ್ರಮದ ಅಧ್ಯಕ್ಷತೆವಹಿಸಿದ್ದರು. ಕಾರ್ಯಕ್ರಮದಲ್ಲಿ ಮಹೇಶ್ ರೆಡ್ಡಿ, ಸತೀಶ್ ರೆಡ್ಡಿ, ಶಾರದಾ, ಪ್ರಚಾರ್ಯ ಭೀಮರೆಡ್ಡಿ ಬೆಜ್ಜ, ಎನ್ ಎಸ್ ಎಸ್ ಕಾರ್ಯಕ್ರಮ ಅಧಿಕಾರಿ ಭೀಮಾಶಂಕರ ಮಠಪತಿ, ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಈ ಸಂದರ್ಭದಲ್ಲಿ ಎನ್ ಎಸ್ ಎಸ್ ವಿದ್ಯಾರ್ಥಿಗಳು ಪ್ಲಾಸ್ಟಿಕ್ ಮುಕ್ತ ಪರಿಸರ ನಾಟಕ ಪ್ರದರ್ಶನ ಮಾಡಿದರು. ಮಹಮ್ಮದ್ ಇರ್ಫಾನ್ ಸ್ವಾಗತಿಸಿದರು. ಸಿದ್ದಯ್ಯ ಸ್ವಾಮಿ ವಂದಿಸಿದರು. ರಾಜಕುಮಾರ ಚನ್ನೀರ್ ನಿರೂಪಿಸಿದರು.

## ಕೃಷಿ ಇಲಾಖೆ ಕಚೇರಿಗೆ ಬೀಗ :ಸರ್ಕಾರದಿಂದ ರೈತರಿಗೆ ಅನ್ಯಾಯ: ಚವ್ಹಾಣ

ಮಲ್ಲಮ್ಮ ನುಡಿ ವಾರ್ತೆ ಔರಾದ(ಬಿ)

ರಾಜ್ಯ ಸರ್ಕಾರದ ರೈತರ ವಿರೋಧಿ ನೀತಿಯನ್ನು ಖಂಡಿಸಿ ನವೆಂಬರ್ 29 ರಂದು ಔರಾದ(ಬಿ) ಪಟ್ಟಣದಲ್ಲಿ ಶಾಸಕ ಪ್ರಭು ಬಿ.ಚವ್ಹಾಣ ಅವರ ನೇತೃತ್ವದಲ್ಲಿ ಬೃಹತ್ ಪ್ರತಿಭಟನೆ ನಡೆಸಲಾಯಿತು.

ಭಾರತೀಯ ಜನತಾ ಪಕ್ಷ ಔರಾದ(ಬಿ) ಮಂಡಲ ಹಾಗೂ ರೈತ ಮೋರ್ಚಾ ವತಿಯಿಂದ ನಡೆದ ಪ್ರತಿಭಟನೆಯಲ್ಲಿ ಸಾವಿರಾರು ಜನ ಪಾಲ್ಗೊಂಡರು. ಬಸವೇಶ್ವರ ವೃತ್ತದಿಂದ ಆರಂಭವಾದ ಪ್ರತಿಭಟನಾ ರ್‍ಯಾಲಿಯು ಬಸ್ ನಿಲ್ದಾಣ, ಎಪಿಎಂಸಿ ವೃತ್ತದ ಮಾರ್ಗವಾಗಿ ಕೃಷಿ ಇಲಾಖೆ ಕಚೇರಿಯವರೆಗೆ ಸಾಗಿತು. ನಂತರ ಸಹಾಯಕ ಕೃಷಿ ನಿರ್ದೇಶಕರ ಕಚೇರಿಗೆ ಬೀಗ ಹಾಕುವ ಮೂಲಕ ರಾಜ್ಯ ಸರ್ಕಾರದ ವಿರುದ್ಧ ಆಕ್ರೋಶ ಹೊರ ಹಾಕಿದರು.

ಈ ವೇಳೆ ಶಾಸಕರಾದ ಪ್ರಭು ಬಿ.ಚವ್ಹಾಣ ಅವರು ಮಾತನಾಡಿ, ಅತಿವೃಷ್ಟಿಯಿಂದ ಬೆಳೆ ಕಳೆದುಕೊಂಡು ರೈತರು ತೀವ್ರ ಸಂಕಷ್ಟದಲ್ಲಿದ್ದಾರೆ. ರೈತರಿಗೆ ನೆರವಾಗಬೇಕಾದ ಸರ್ಕಾರ ಕಣ್ಣು, ಕಿವಿ ಇಲ್ಲದಂತೆ ವರ್ತಿಸುತ್ತಿದೆ. ದೀಪಾವಳಿಗೂ ಮುನ್ನವೇ ಬೆಳೆ ಹಾನಿ ಪರಿಹಾರ ನೀಡಲಾಗುವುದೆಂದು ಹೇಳಿದ್ದರು. ಆದರೆ ನಾವು ಹೋರಾಟ ಮಾಡಿದ ನಂತರ ಕೆಲವು ರೈತರಿಗೆ ಮಾತ್ರ ಎನ್‌ಡಿಆರ್‌ಎಫ್, ಎಸ್‌ಡಿಆರ್‌ಎಫ್ ಅನ್ವಯ ಪರಿಹಾರ ನೀಡಲಾಗಿದ್ದು, ಉಳಿದವರಿಗೆ ತಾರತಮ್ಯ ಮಾಡಲಾಗಿದೆ. ಔರಾದ್‌ನ ಶೇ.40ರಷ್ಟು ರೈತರಿಗೆ ಪರಿಹಾರ ಸಿಕ್ಕಿಲ್ಲ. ಬಿಜೆಪಿ ಶಾಸಕರಿರುವ ಕ್ಷೇತ್ರಗಳಿಗೆ ತಾರತಮ್ಯ ಮಾಡಲಾಗುತ್ತಿದೆ ಎಂದು ಆರೋಪಿಸಿದರು. ಸರ್ಕಾರದ ಆಂತರಿಕ ಕಲಹಗಳಿಂದಾಗಿ ರೈತರು ಅನ್ಯಾಯಕ್ಕೆ ಒಳಗಾಗುತ್ತಿದ್ದಾರೆ.




ಬೆಳೆ ಹಾನಿ ಸಮೀಕ್ಷೆ ಸಮರ್ಪಕವಾಗಿ ನಡೆದಿಲ್ಲ. ಇಲಾಖೆಯ ಸಿಬ್ಬಂದಿ ಪರಿಚಯಸ್ಥರಿಗೆ ಮಾತ್ರ ಹಣ ಪಾವತಿಸಿದ್ದು, ಉಳಿದವರಿಗೆ ಸರಿಯಾಗಿ ಸಿಕ್ಕಿಲ್ಲ. ಬೆಳೆ ನಷ್ಟವಾದ ಎಲ್ಲ ರೈತರಿಗೆ ಸರಿಯಾದ ರೀತಿಯಲ್ಲಿ ಪರಿಹಾರ ಸಿಕ್ಕಿಲ್ಲ. ಈ ಬಗ್ಗೆ ಜಿಲ್ಲಾಧಿಕಾರಿಗಳು, ಕೃಷಿ ಇಲಾಖೆಯ ಜಂಟಿ ನಿರ್ದೇಶಕರ ಗಮನಕ್ಕೆ ತರಲಾಗಿದೆ ಎಂದರು.

ನಾನು ಪಶು ಸಂಗೋಪನೆ ಸಚಿವನಾಗಿದ್ದಾಗ ಪ್ರತಿ ಜಿಲ್ಲೆಗೆ ಗೋಶಾಲೆ ಮಾಡುವ ಯೋಜನೆ ಜಾರಿಗೊಳಿಸಿದ್ದೆ. ಮೂಕ ಪ್ರಾಣಿಗಳ ಸೇವೆಗೆ 1962 ಪಶು ಅಂಬ್ಯುಲೆನ್ಸ್ ಆರಂಭಿಸಿದ್ದೆ. ಜಾನುವಾರುಗಳ ಹಿತರಕ್ಷಣೆಗಾಗಿ ಪ್ರಾಣಿ ಕಲ್ಯಾಣ ಸಹಾಯವಾಣಿ ಕೇಂದ್ರ, ರಾಜ್ಯ ಪ್ರಾಣಿ ಕಲ್ಯಾಣ ಮಂಡಳಿ ಸ್ಥಾಪಿಸಿದ್ದೆ. ಈಗ ಅಧಿಕಾರದಲ್ಲಿರುವ ಕಾಂಗ್ರೆಸ್ ನೇತೃತ್ವದ ರಾಜ್ಯ ಸರ್ಕಾರ ಈ ಎಲ್ಲ ಯೋಜನೆಗಳನ್ನು ನಿಲ್ಲಿಸಿ ರೈತರು ಮತ್ತು ಜಾನುವಾರು ವಿರೋಧಿಯಾಗಿ ನಡೆದುಕೊಳ್ಳುತ್ತಿದೆ ಎಂದು ಹೇಳಿದರು.

ಅತಿಯಾದ ಮಳೆಯಿಂದಾಗಿ ಬೆಳೆ ಕಳೆದುಕೊಂಡು ರೈತರು ಕಂಗಾಲಾಗಿದ್ದಾರೆ. ಇವರ ನೆರವಿಗೆ ನಿಲ್ಲಬೇಕಾದ ಸರ್ಕಾರ ಕಣ್ಣು ಮುಚ್ಚಿ ಕುಳಿತಿದೆ. ರಾಜ್ಯ ಸರ್ಕಾರ ನುಡಿದಂತೆ ನಡೆದುಕೊಳ್ಳಬೇಕು. ಭರವಸೆ ನೀಡಿದ ರೀತಿಯಲ್ಲಿ ಸಂಕಷ್ಟಕ್ಕೊಳಗಾದ ಎಲ್ಲ ರೈತರಿಗೆ ಸಮರ್ಪಕ ಪರಿಹಾರಧನ ಪಾವತಿಸಬೇಕು. ಬೆಳೆ ವಿಮೆ ಸೌಲಭ್ಯ ಕಲ್ಪಿಸಬೇಕು. ರೈತರ ಸಾಲ ಮನ್ನಾ ಮಾಡಬೇಕು. ಔರಾದ(ಬಿ) ವಿಧಾನಸಭಾ ಕ್ಷೇತ್ರಕ್ಕೆ 12 ಕೋಟಿ ಪರಿಹಾರ ಪಾವತಿಸುವುದು ಬಾಕಿಯಿದೆ ಎನ್ನಲಾಗುತ್ತಿದೆ. ಈ ಎಲ್ಲ ರೈತರಿಗೆ ಶೀಘ್ರ ಪರಿಹಾರಧನ ಪಾವತಿಸಬೇಕು. ಅತಿವೃಷ್ಟಿಯಿಂದ ಕಲ್ಯಾಣ ಕರ್ನಾಟಕ ಭಾಗದಲ್ಲಿ ರಸ್ತೆ, ಸೇತುವೆ, ಕೆರೆ-ಕಟ್ಟೆಗಳೆಲ್ಲ ಒಡೆದು ಸಾಕಷ್ಟು ಹಾನಿಯಾಗಿದೆ. ಇವುಗಳನ್ನು ಶೀಘ್ರ ಸರಿಪಡಿಸಿ ಜನತೆಗೆ ಅನುಕೂಲ ಮಾಡಿಕೊಡಬೇಕು ಎಂದು ಸರ್ಕಾರವನ್ನು ಒತ್ತಾಯಿಸಿದರು.

ಭಾರತೀಯ ಜನತಾ ಪಕ್ಷ ಸದಾ ರೈತರ ಪರವಾಗಿದ್ದು, ಎಂದಿಗೂ ರೈತರಿಗೆ ಅನ್ಯಾಯವಾಗಲು ಬಿಡುವುದಿಲ್ಲ. ಪಕ್ಷದ ರಾಜ್ಯಾಧ್ಯಕ್ಷರ ನಿರ್ದೇಶನದ ಮೇರೆಗೆ ರಾಜ್ಯಾದ್ಯಂತ ಪ್ರತಿಭಟನೆ ನಡೆಯುತ್ತಿದ್ದು, ಈ ಹೋರಾಟ ಇಲ್ಲಿಗೆ ನಿಲ್ಲುವುದಿಲ್ಲ. ರೈತರಿಗೆ ಆಗಿರುವ ಅನ್ಯಾಯ ಸರಿಪಡಿಸದೇ ಇದ್ದಲ್ಲಿ ಇನ್ನಷ್ಟು ಉಗ್ರ ಸ್ವರೂಪದಲ್ಲಿ ನಡೆಸಲಾಗುತ್ತದೆ ಎಂದು ಎಚ್ಚರಿಸಿದರು.

ಈ ಸಂದರ್ಭದಲ್ಲಿ ಬಿಜೆಪಿ ಮಂಡಲ ಅಧ್ಯಕ್ಷರಾದ ರಾಮಶೆಟ್ಟಿ ಪನ್ನಾಳೆ, ಮಂಡಲ ಪ್ರಭಾರಿ ಮಹೇಶ್ವರ ಸ್ವಾಮಿ, ರೈತರ ಮೋರ್ಚಾ ಜಿಲ್ಲಾಧ್ಯಕ್ಷ ಶಿವರಾಜ ಅಲ್ಮಾಜೆ, ಜಿಲ್ಲಾ ಮಹಿಳಾ ಮೋರ್ಚಾ ಕಾರ್ಯದರ್ಶಿ ವಿಜಯಲಕ್ಷ್ಮೀ ಕೌಟಗೆ, ಮಹಿಳಾ ಮೋರ್ಚಾ ಉಪಾಧ್ಯಕ್ಷೆ ಗೀತಾ ಗೌಡಾ, ಮುಖಂಡರಾದ ಮಾರುತಿ ಚವ್ಹಾಣ, ವಸಂತ ಬಿರಾದಾರ, ಬಸವರಾಜ ಪಾಟೀಲ, ಶಿವಾಜಿರಾವ ಪಾಟೀಲ ಮುಂಗನಾಳ, ಖಂಡೋಬಾ ಕಂಗಟೆ, ನಾಗಶೆಟ್ಟಿ ಗಾದಗೆ, ರಂಗಾರಾವ ಜಾಧವ, ಶಿವಾಜಿರಾವ ಕಾಳೆ, ಪ್ರವೀಣ ಕಾರಬಾರಿ, ಖಾಜಾಮಿಯ್ಯಾ, ಮಾರುತಿ ಪಟ್ನೆ, ಸಂತೋಷ ಪೋಕಲವಾರ, ಸಂಜು ವಡೆಯರ್, ಕೇರಬಾ ಪವಾರ್, ಅಶೋಕ ಮೇತ್ರೆ, ಉದಯ ಸೋಲಾಪೂರೆ, ಪ್ರಕಾಶ ಜೀರ್ಗೆ, ಸಂಜು ಮುರ್ಕೆ, ರಾಜಕುಮಾರ ಸೋರಾಳೆ, ಸಚಿನ ಬಿರಾದಾರ, ಪ್ರಕಾಶ ಜೀರ್ಗೆ, ಮಲ್ಲಪ್ಪ ದಾನಾ, ಯೋಗೇಶ ಪಾಟೀಲ, ವೀರಾರೆಡ್ಡಿ ಚಿಂತಾಕಿ, ವೀರಾರೆಡ್ಡಿ ನಾಗನಪಲ್ಲಿ, ಶ್ರೀನಿವಾಸ ಖೂಬಾ, ಬಸವರಾಜ ಹಳ್ಳೆ, ಪ್ರಕಾಶ ಅಲ್ಮಾಜೆ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ವಿಶ್ವ ಏಡ್ಸ್ ದಿನಾಚರಣೆ ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಮತ್ತು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಏಡ್ಸ್ ನಿಯಂತ್ರಣ ಮತ್ತು ನಿರ್ವಾಹಕ ಘಟಕ ವತಿಯಿಂದ ಡಿ.01 ರಂದು ಬೆಳಿಗ್ಗೆ 10 ಗಂಟೆಗೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಕಚೇರಿ ಸಭಾಂಗಣದಲ್ಲಿ ಜಿಲ್ಲಾ ಮಟ್ಟದ ವೇದಿಕೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಅಂದು ಬೆಳಿಗ್ಗೆ 07 ಗಂಟೆಗೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಕಚೇರಿ ಮುಂಭಾಗದಲ್ಲಿ ವಾಕಥಾನ್ ಕಾರ್ಯಕ್ರಮ ಏರ್ಪಡಿಸಲಾಗಿದೆ. ವಾಕಥಾನ್ ಅಲ್ಲಿಂದ ಆರಂಭಗೊಂಡು ಸಂಗಂ ವೃತ್ತ- ರಾಘವೇಂದ್ರ ಸಿನಿಮಾ ಮಂದಿರ

ರಸ್ತೆ- ಕೆ.ಸಿ.ರಸ್ತೆ- ಮೀನಾಕ್ಷಿ ವೃತ್ತದ ಮೂಲಕ ಹಳೆಯ ಜಿಲ್ಲಾಧಿಕಾರಿಗಳ ಕಚೇರಿ ಮುಂಭಾಗದಿಂದ ಗಡಿಗಿ ಚೆನ್ನಪ್ಪ ವೃತ್ತ- ಸಂಗಂ ವೃತ್ತದ ಮಾರ್ಗವಾಗಿ ಮರಳಿ ಜಿಲ್ಲಾ ಆಸ್ಪತ್ರೆಯ ಆವರಣಕ್ಕೆ ತಲುಪಿ ಅಂತ್ಯಗೊಳ್ಳಲಿದೆ. ಬಳಿಕ ವೇದಿಕೆ ಕಾರ್ಯಕ್ರಮ ನಡೆಯಲಿದೆ.

ಅಂದು ಸಂಜೆ 06 ಗಂಟೆಗೆ ನಗರದ ಬ್ರೂಸ್ ಪೇಟೆ ಪೊಲೀಸ್ ಠಾಣೆ ಮುಂಭಾಗದಲ್ಲಿ ಕ್ಯಾಂಡೆಲ್ (ಮೇಣದ ಬತ್ತಿ) ಲೈಟ್ ಜಾಥ ಹಮ್ಮಿಕೊಳ್ಳಲಾಗಿದೆ. ಜಾಥಾವು

ಬ್ರೂಸ್ ಪೇಟೆ ಪೊಲೀಸ್ ಠಾಣೆ ಮುಂಭಾಗದಿಂದ ಆರಂಭಗೊಂಡು ಹೆಚ್.ಆರ್.ಗವಿಯಪ್ಪ ವೃತ್ತದವರೆಗೆ ನಡೆಯಲಿದೆ ಎಂದು ಜಿಲ್ಲಾ ಏಡ್ಸ್ ನಿಯಂತ್ರಣ ಮತ್ತು ನಿರ್ವಾಹಕ ಘಟಕ ಅಧಿಕಾರಿ ಆಗಿರುವ ಜಿಲ್ಲಾ ಕ್ಷಯರೋಗ ನಿರ್ಮೂಲನಾಧಿಕಾರಿ ಡಾ.ಇಂದ್ರಾಣಿ.ವಿ ಅವರು ತಿಳಿಸಿದ್ದಾರೆ.

# ಢಾಯಿ ಆಖರ್ "ನನ್ನ ಆದರ್ಶ ವ್ಯಕ್ತಿಗೆ ಪತ್ರ" ರಾಷ್ಟ್ರಮಟ್ಟದ ಪತ್ರ ಬರೆಯುವ ಸ್ಪರ್ಧೆಗೆ ಆಹ್ವಾನ

**ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ :**

ಭಾರತೀಯ ಅಂಚೆ ಇಲಾಖೆ ಕರ್ನಾಟಕ ಅಂಚೆ ವೃತ್ತದಿಂದ ಢಾಯಿ ಆಖರ್ "ನನ್ನ ಆದರ್ಶ ವ್ಯಕ್ತಿಗೆ ಪತ್ರ" ರಾಷ್ಟ್ರಮಟ್ಟದ ಪತ್ರ ಬರೆಯುವ ಸ್ಪರ್ಧೆಗೆ ಆಹ್ವಾನಿಸಲಾಗಿದೆ ಎಂದು ಯಾದಗಿರಿ ಅಂಚೆ ಅಧೀಕ್ಷಕರು ಅವರು ತಿಳಿಸಿದ್ದಾರೆ.

ವಿಭಾಗಗಳು "ನನ್ನ ಆದರ್ಶ ವ್ಯಕ್ತಿಗೆ ಪತ್ರ" ರಾಷ್ಟ್ರಮಟ್ಟದ ಪತ್ರ ಇನ್ಲಾಂಡ್ ಲೆಟರ್ ಕಾರ್ಡ್ ಐಎಲ್‌ಸಿ ಗರಿಷ್ಠ 500 ಪದಗಳು, ಇನ್ಲಾಂಡ್ ಲೆಟರ್ 1000 ಪದಗಳು, ವಿಭಾಗಗಳು 18 ವರ್ಷ ಒಳಗಿರಬೇಕು. ವಿಭಾಗಗಳು "ನನ್ನ ಆದರ್ಶ ವ್ಯಕ್ತಿಗೆ ಪತ್ರ"ರಾಷ್ಟ್ರಮಟ್ಟದ ಪತ್ರ ಇನ್ಲಾಂಡ್ ಲೆಟರ್ ಕಾರ್ಡ್ ಐಎಲ್‌ಸಿ ಗರಿಷ್ಠ 500 ಪದಗಳು, ಇನ್ಲಾಂಡ್ ಲೆಟರ್ 1000 ಪದಗಳು, 18 ವರ್ಷ ಮೇಲ್ಪಟ್ಟವರು. ರಾಜ್ಯಮಟ್ಟದಲ್ಲಿ ಬಹುಮಾನಗಳು 1ನೇ ಬಹುಮಾನ 25000 ರೂ.ಗಳ 2ನೇ ಬಹುಮಾನ 10,000 ರೂ.ಗಳ, 3ನೇ ಬಹುಮಾನ 5000 ರೂ.ಗಳ ಇದೆ. ರಾಷ್ಟ್ರಮಟ್ಟದಲ್ಲಿ ಬಹುಮಾನಗಳು 1ನೇ ಬಹುಮಾನ 50,000 ರೂ.ಗಳ, 2ನೇ ಬಹುಮಾನ 25,000 ರೂ.ಗಳ, 3ನೇ ಬಹುಮಾನ 10,000 ರೂ.ಗಳ ಇದೆ. ಪತ್ರಗಳನ್ನು ಇಂಗ್ಲೀಷ್, ಹಿಂದಿ, ಕನ್ನಡ ಭಾಷೆಯಲ್ಲಿ ಬರೆಯಬಹುದು ಮತ್ತು ತೋರಿಸಿರುವಂತೆ ನಿಮ್ಮ ಅಂಚೆ ವಿಭಾಗಕ್ಕೆ ಹಿರಿಯ ಅಂಚೆ ಅಧೀಕ್ಷಕರು, ಅಂಚೆ ಅಧೀಕ್ಷಕರು ಇಲ್ಲಿಗೆ ಸಲ್ಲಿಸಬೇಕು, ಪತ್ರಗಳು ಐಎಲ್‌ಸಿಗಳನ್ನು ಪೋಸ್ಟ್ ಮಾಡಲು 2025ರ ಡಿಸೆಂಬರ್ 8ರ ಒಳಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ವೆಬ್‌ಸೈಟ್ www.karnatakapost.gov.in ನಲ್ಲಿ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# "ನೇರ ಫೋನ್ ಇನ್" ಕಾರ್ಯಕ್ರಮ

**ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ :**

2025ರ ಡಿಸೆಂಬರ್ 1 ರಂದು "ನೇರ ಫೋನ್ ಇನ್" ಕಾರ್ಯಕ್ರಮವನ್ನು ಆಯೋಜಿಸಲಾಗಿದೆ ಎಂದು ಯಾದಗಿರಿ ವಿಭಾಗ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ ವಿಭಾಗೀಯ ನಿಯಂತ್ರಣಾಧಿಕಾರಿ ಜಿ.ಬಿ.ಮಂಜುನಾಥ ಅವರು ತಿಳಿಸಿದ್ದಾರೆ.

ಜಿಲ್ಲೆಯ ಸಾರ್ವಜನಿಕರಿಗೆ ಹಾಗೂ ಶಾಲಾ ಕಾಲೇಜು ವಿದ್ಯಾರ್ಥಿಗಳಿಗೆ ಉಂಟಾಗುವ ಸಾರಿಗೆ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳುವ ನಿಟ್ಟಿನಲ್ಲಿ ಪ್ರತಿ ತಿಂಗಳು ಮೊದಲನೆಯ ಸೋಮವಾರ "ನೇರ ಫೋನ್ ಇನ್" ಕಾರ್ಯಕ್ರಮವನ್ನ ಆಯೋಜಿಸಲು ಕಲಬುರಗಿ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ ಕೇಂದ್ರ ಕಛೇರಿ ವ್ಯವಸ್ಥಾಪಕ ನಿರ್ದೇಶಕರು ಅವರು ಸೂಚಿಸಿದೆ.

ಯಾದಗಿರಿ ಜಿಲ್ಲೆಯ ಸಾರ್ವಜನಿಕರಿಗೆ ಮತ್ತು ಶಾಲಾ ಕಾಲೇಜು ವಿದ್ಯಾರ್ಥಿಗಳಿಗೆ ಇರುವ ಸಾರಿಗೆ ಸಮಸ್ಯೆಗಳ ಕುರಿತು ಯಾದಗಿರಿ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ ವಿಭಾಗದಿಂದ 2025ರ ಡಿಸೆಂಬರ್ 1ರ ಸೋಮವಾರ ಮಧ್ಯಾಹ್ನ 3.30 ರಿಂದ 5.30 ಗಂಟೆಯ ವರೆಗೆ "ನೇರ ಫೋನ್ ಇನ್" ಕಾರ್ಯಕ್ರಮವನ್ನು ಏರ್ಪಡಿಸಿದೆ. ಯಾದಗಿರಿ ಜಿಲ್ಲೆಯ ಸಾರ್ವಜನಿಕರು ಮತ್ತು ಶಾಲಾ ಕಾಲೇಜು ವಿದ್ಯಾರ್ಥಿಗಳು ಈ "ನೇರ ಫೋನ್ ಇನ್" ಕಾರ್ಯಕ್ರಮದಲ್ಲಿ ದೂರವಾಣಿ ಸಂ.6366423882ಗೆ ಕರೆ ಮಾಡಿ ತಮ್ಮ ಸಾರಿಗೆ ವ್ಯವಸ್ಥೆ ಕುರಿತು ಇರುವ ಸಮಸ್ಯೆಗಳನ್ನು ತಿಳಿಸಿ ಪರಿಹಾರ ಕಂಡುಕೊಳ್ಳಬೇಕು. ಅಂದು "ನೇರ ಫೋನ್ ಇನ್" ಕಾರ್ಯಕ್ರಮದಲ್ಲಿ ಯಾದಗಿರಿ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ ವಿಭಾಗೀಯ ನಿಯಂತ್ರಣಾಧಿಕಾರಿಗಳು ಜಿಲ್ಲೆಯ ಸಾರಿಗೆ ಸಮಸ್ಯೆಗಳ ಕುರಿತು ಸಾರ್ವಜನಿಕರೊಂದಿಗೆ ನೇರವಾಗಿ ಮಾತನಾಡಲಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರಾಜ್ಯ ಮಟ್ಟದ ಯುವಜನೋತ್ಸವ ಕಾರ್ಯಕ್ರಮ

**ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ:**

ಜಿಲ್ಲಾಡಳಿತ,ಜಿಲ್ಲಾ ಪಂಚಾಯತ್, ಯಾದಗಿರಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಂಯುಕ್ತಾಶ್ರಯದಲ್ಲಿ ಯಾದಗಿರಿ ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ 2025ರ ಡಿಸೆಂಬರ್ 3 ಮತ್ತು 4 ರಂದು ಬೆಳಿಗ್ಗೆ 11 ಗಂಟೆಗೆ ರಾಜ್ಯಮಟ್ಟದ ಯುವಜನೋತ್ಸವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಕರ್ನಾಟಕ ಸರ್ಕಾರ ಮುಖ್ಯಮಂತ್ರಿಗಳಾದ ಸನ್ಮಾನ್ಯ ಶ್ರೀ ಸಿದ್ದರಾಮಯ್ಯ ಅವರು ಡಿ.3 ರಂದು ಬೆಳಿಗ್ಗೆ 11 ಗಂಟೆಗೆ ರಾಜ್ಯಮಟ್ಟದ ಯುವಜನೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸುವರು.

ಕರ್ನಾಟಕ ಸರ್ಕಾರ ಉಪ ಮುಖ್ಯಮಂತ್ರಿಗಳಾದ ಸನ್ಮಾನ್ಯ ಶ್ರೀ ಡಿ.ಕೆ.ಶಿವಕುಮಾರ, ಮತ್ತು ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ಉದ್ದಿಮೆಗಳ ಸಚಿವರು ಹಾಗೂ ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀ ಶರಣಬಸಪ್ಪ ದರ್ಶನಾಪೂರ ಅವರು ರಾಜ್ಯಮಟ್ಟದ ಯುವಜನೋತ್ಸವ ಕಾರ್ಯಕ್ರಮ ಅವರು ನೆರವೇರಿಸುವರು.

ಕರ್ನಾಟಕ ವಿಧಾನ ಪರಿಷತ್ತು ವಿರೋಧ ಪಕ್ಷದ ನಾಯಕ ಶ್ರೀ ಛಲವಾದಿ ಟಿ.ನಾರಾಯಣಸ್ವಾಮಿ, ಹಾಗೂ ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಶ್ರೀ ಬಾಬುರಾವ್ ಚಿಂಚನಸೂರು ಅವರ ಗೌರವ ಉಪಸ್ಥಿತಿಯಲ್ಲಿ ನೆರವೇರಲಿದೆ.

ಯಾದಗಿರಿ ವಿಧಾನಸಭಾ ಕ್ಷೇತ್ರದ ಶಾಸಕ ಶ್ರೀ ಚನ್ನಾರೆಡ್ಡಿ ಪಾಟೀಲ್ ತುನ್ನೂರ ಅವರು ಕಾರ್ಯಕ್ರಮ ಅಧ್ಯಕ್ಷತೆವಹಿಸುವರು.ರಾಯಚೂರು ಲೋಕಸಭಾ ಸದಸ್ಯರು ಶ್ರೀ ಜಿ.ಕುಮಾರ ನಾಯಕ ಹಾಗೂ ಕಲಬುರಗಿ ಲೋಕಸಭಾ ಸದಸ್ಯರು ಶ್ರೀ ರಾಧಾಕೃಷ್ಣ ದೊಡ್ಡಮನಿ ಮುಖ್ಯ ಅತಿಥಿಗಳಾಗಿ ಆಗಮಿಸುವರು.

ಗುರುಮಠಕಲ್ ವಿಧಾನಸಭಾ ಕ್ಷೇತ್ರದ ಶಾಸಕ ಶ್ರೀ ಶರಣಗೌಡ ಕಂದಕೂರ, ಸುರಪುರ ವಿಧಾನಸಭಾ ಕ್ಷೇತ್ರದ ಶಾಸಕ ಶ್ರೀ ರಾಜಾ ವೇಣುಗೋಪಾಲ ನಾಯಕ, ವಿಧಾನ ಪರಿಷತ್ತು ಸದಸ್ಯರು ಶ್ರೀ ಬಿ.ಜಿ.ಪಾಟೀಲ್, ಡಾ.ಚಂದ್ರಶೇಖರ ಬಿ.ಪಾಟೀಲ್, ಶ್ರೀ ಶಶೀಲ್ ಜಿ.ನಮೋಶಿ, ಕರ್ನಾಟಕ ರಾಜ್ಯ ಮದ್ಯಪಾನ ಸಂಯಮ ಮಂಡಳಿ ಅಧ್ಯಕ್ಷರು ಶ್ರೀ ಶರಣಪ್ಪ ಸಲಾದಪೂರ,ಭೀಮರಾಯನಗುಡಿ ಕಾಡಾ ಅಧ್ಯಕ್ಷರು ಶ್ರೀ ಬಾಬು ಹೊನ್ನಾ ನಾಯಕ, ಯಾದಗಿರಿ ನಗರಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷರು ಶ್ರೀ ಬಾಬುರಾವ್ ಕಾಡ್ಲೂರ ಅತಿಥಿಗಳಾಗಿ ಪಾಲ್ಗೊಳ್ಳುವರು.

ಬೆಂಗಳೂರು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಶ್ರೀ ನವೀನ್ ರಾಜ್ ಸಿಂಗ್, ಯಾದಗಿರಿ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು ಹಾಗೂ ಜಿಲ್ಲಾ ಪಂಚಾಯತ ಆಡಳಿತಾಧಿಕಾರಿಗಳು, ಗ್ರಾಹಕರ ವ್ಯವಹಾರಗಳು ಮತ್ತು ಕಾನೂನು ಮಾಪನಶಾಸ್ತ್ರ ಇಲಾಖೆ ಹಾಗೂ ಆಹಾರ ಮತ್ತು ನಾಗರಿಕರ ಸರಬರಾಜು ಸರ್ಕಾರದ ಕಾರ್ಯದರ್ಶಿಗಳು ಶ್ರೀ ಮನೋಜ್ ಜೈನ್, ಕಲಬುರಗಿ ವಿಭಾಗ ಪ್ರಾದೇಶಿಕ ಆಯುಕ್ತರು ಶ್ರೀಮತಿ ಜಹೀರಾ ನಸೀಮ, ಬೆಂಗಳೂರು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಆಯುಕ್ತರು ಶ್ರೀ ಚೇತನ್. ಆರ್ ವಿಶೇಷ ಆಹ್ವಾನಿತರಾಗಿ ಆಗಮಿಸುವರು. ಸರ್ವರಿಗೂ ಆದರದ ಸುಸ್ವಾಗತವನ್ನು ಯಾದಗಿರಿ ಜಿಲ್ಲಾಧಿಕಾರಿ ಶ್ರೀ ಹರ್ಷಲ್ ಭೋಯರ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಶ್ರೀ ಲವೀಶ್ ಒರಡಿಯಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶ್ರೀ ಪೃಥ್ವಿಕ್ ಶಂಕರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಹಿಳಾ ಧ್ವನಿ ಸಂಸ್ಥೆಗೆ ಹಿರಿಯ ನಾಗರಿಕರ ಸೇವಾ ರಾಜ್ಯ ಪ್ರಶಸ್ತಿಯ ಗರಿ. ಸಿ.ಎಂ ಸಿದ್ದರಾಮಯ್ಯ ಪ್ರಶಸ್ತಿ ಪ್ರದಾನ.



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಜಿಲ್ಲೆಯಾದ್ಯಂತ ಸಾಮಾಜಿಕ ಕಾರ್ಯಗಳ ಮೂಲಕ ಗುರುತಿಸಿ ಕೊಂಡಿರುವ ಮಹಿಳಾ ಧ್ವನಿ ಶಿಕ್ಷಣ ಮತ್ತು ಗ್ರಾಮೀಣ ಕ್ಷೇಮಾಭಿವೃದ್ಧಿ ಸಂಸ್ಥೆಗೆ ವಿಶ್ವ ಹಿರಿಯ ನಾಗರಿಕರ ದಿನಾಚರಣೆ–ಯಂದು ನೀಡುವ 2025ನೇ ಸಾಲಿನ ಹಿರಿಯ ನಾಗರಿಕರ ಸೇವಾ ಕ್ಷೇತ್ರದಲ್ಲಿ ಸಂಸ್ಥೆಯ ವಿಭಾಗದಲ್ಲಿ ರಾಜ್ಯ ಪ್ರಶಸ್ತಿಯನ್ನು ನೀಡಿ ಗೌರವಿಸಲಾಯಿತು.ಸಂಸ್ಥೆಯ ಕೊಪ್ಪಳ ಜಿಲ್ಲೆ ವಿವಿಧ ಭಾಗದಲ್ಲಿ ಮಹಿಳೆ,ಮಕ್ಕಳು ಹಾಗೂ ಹಿರಿಯ ನಾಗರಿಕ ಸೇವಾ ಕ್ಷೇತ್ರದಲ್ಲಿ ಅನೇಕ ಕಾರ್ಯಕ್ರಮ ಆಯೋಜಿಸುವ ಮೂಲಕ ಜಾಗೃತಿ ಮೂಡಿಸುತ್ತಿರುವ ಕಾರ್ಯ ಮಾಡುತ್ತಿದೆ.

ಬೆಂಗಳೂರಿನ ಪ್ಯಾಲೇಸ್ ಗ್ರೌಂಡ್ ನಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಆಯೋಜಿಸಿದ ಸುವರ್ಣ ಮಹೋತ್ಸವ ಕಾರ್ಯಕ್ರಮದಲ್ಲಿ ಪ್ರಶಸ್ತಿ ನೀಡಲಾಯಿತು. ಕಾರ್ಯಕ್ರಮದಲ್ಲಿ ಮಾನ್ಯ ಮುಖ್ಯ ಮಂತ್ರಿಗಳಾದ ಸಿದ್ದರಾಮಯ್ಯ,ಉಪ ಮುಖ್ಯ ಮಂತ್ರಿ ಡಿ.ಕೆ.ಶಿವಕುಮಾರ್, ಸಚಿವರಾದ ಲಕ್ಷ್ಮೀ ಹೆಬ್ಬಾಳ್ಕರ್, ಹೆಚ್.ಸಿ.ಮಹದೇವಪ್ಪ,ಕೆ.ಹೆಚ್. ಮುನಿಯಪ್ಪ,ಈಶ್ವರ ಖಂಡ್ರೆ,ಮಾಜಿ ರಾಜ್ಯಪಾಲೆ ಮಾರ್ಗರೇಟ್ ಆಳ್ವಾ, ಮಾಜಿ ಸಚಿವರಾದ ರಾಣಿ ಸತೀಶ ಮೋಟಮ್ಮ,ಜಯಮಾಲಾ,ಎಚ್.ಎಂ.ರೇವಣ್ಣ,ಶಾಸಕರಾದ ರೂಪಕಲಾ,ಲತಾ ಮಲ್ಲಿಕಾರ್ಜುನ, ಸಿ.ಎಂ ರಾಜಕೀಯ ಕಾರ್ಯದರ್ಶಿ ನಸೀರ್ ಅಹಮ್ಮದ್,ಪ್ರಕಾಶ ಹುಕ್ಕೇರಿ, ಚನ್ನರಾಜ ಹಟ್ಟಿಹೊಳೆ,ನಾಗಲಕ್ಷ್ಮೀ ಚೌದರಿ,ಬಿ.ಆರ್.ನಾಯ್ಡು ಉಪಸ್ಥಿತಿ ಇದ್ದು ಪ್ರಶಸ್ತಿ ಪ್ರದಾನ ಮಾಡಿದರು.ಸಂಸ್ಥೆಯ ಸಂಸ್ಥಾಪಕರಾದ ಪ್ರಿಯದರ್ಶಿನಿ ಮುಂಡರಗಿಮಠ ಅವರು ಸಂಸ್ಥೆಯ ಪರವಾಗಿ 1 ಲಕ್ಷ ನಗದು ಬಹುಮಾನ ಹಾಗೂ ಪ್ರಶಸ್ತಿ ಫಲಕ ಪಡೆದುಕೊಂಡರು. ಇದೇ ವೇಳೆ ವೆಂಕಟೇಶ ದೇಶಪಾಂಡೆ,ಬಿ.ಎನ್.ಹೊರಪೇಟಿ,ಮಹಾಂತಯ್ಯ ಸಿಂದೋಗಿಮಠ ಇಲಾಖೆಯ ಅಧಿಕಾರಿಗಳು ಹಾಗೂ ಎಲ್ಲಾ ಜಿಲ್ಲೆಯಿಂದ ಆಗಮಿಸಿದ ಅಂಗನವಾಡಿ ಕಾರ್ಯಕರ್ತರು ಅಧಿಕಾರಿಗಳು ಉಪಸ್ಥಿತಿ ಇದ್ದರು.

# ಡಾ. ಬಿ ಆರ್ ಅಂಬೇಡ್ಕರ್ ರವರ ಪಂಚಲೋಹದ ಪ್ರತಿಮೆ ಅನಾವರಣ



**ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ :**

ತಾಲೂಕಿನ ನಂದಿಕೂರ ಗ್ರಾಮದಲ್ಲಿ ಸಂವಿಧಾನ ಶಿಲ್ಪಿ, ಭಾರತ ರತ್ನ ಬಾಬಾಸಾಹೇಬ ಡಾ. ಬಿ ಆರ್ ಅಂಬೇಡ್ಕರ್ ರವರ ಪಂಚಲೋಹದ ಪ್ರತಿಮೆ ಅನಾವರಣವನ್ನು ಶಾಸಕ ಅಲ್ಲಮಪ್ರಭು ಪಾಟೀಲ್ ಅವರು ಉದ್ಘಾಟಿಸಿದರು. ಈ ಸಂಧರ್ಭದಲ್ಲಿ ವಿಧಾನ ಪರಿಷತ್ ಸದಸ್ಯ ಶ್ರೀ ತಿಪ್ಪಣಪ್ಪ ಕಮಕನೂರ,ಡಾ. ವಿಠ್ಠಲ ದೊಡ್ಡಮನಿ, ಕಾಂಗ್ರೆಸ್ ಮುಖಂಡ ನೀಲಕಂಠರಾವ್ ಮೂಲಗೆ,ಡಾ. ಕಿರಣ ದೇಶಮುಖ, ರಾಜಕುಮಾರ ಕಪನೂರ್,ಲಕ್ಷ್ಮಣ ಶೃಂಗೇರಿ, ತಹಸೀಲ್ದಾರ್ ಆನಂದಶಿಲ್, ಗ್ರಾಮ ಪಂಚಾಯತ್ ಅಧ್ಯಕ್ಷ ಚಂದ್ರಕಾಂತ್ ಪೂಜಾರಿ,ಸಿಪಿಐ ಹುಸೇನ ಭಾಷಾ,ಲಿಂಗರಾಜ್ ಕಣ್ಣಿ, ಶಾಮರಾಯ ಜಿ ಪಾಟೀಲ್, ನಾಗೇಂದ್ರ ಶೇರಿಕರ, ಶಾಮರಾಯ ಪಾಟೀಲ್, ದಿನೇಶ ದೊಡ್ಡಮನಿ, ಸುರೇಶ ಹಾದಿಮನಿ, ಎಸ್ ಎಸ್ ತವಡೆ, ದೇವೇಂದ್ರ ಸಿನ್ನೂರ್, ಪವನಕುಮಾರ್ ವಳಕೇರಿ, ಶ್ರೀನಿವಾಸ ದೊಡ್ಡಮನಿ, ಕುಪೇಂದ್ರ ವರ್ಮಾ, ಸೂರ್ಯಕಾಂತ್ ಕಣ್ಣಿ,ದಸ್ತಾಯ್ಯ ಗುತ್ತೇದಾರ, ಸಂದೀಪ್ ಗುತ್ತೇದಾರ,ಲಕ್ಷ್ಮಣ ಪೂಜಾರಿ, ವಿರೇಶ ಪಡೋಳಕರ್,ರಾಚಾಯ್ಯ ಸ್ವಾಮಿ ಸೇರಿದಂತೆ ಗ್ರಾಮಸ್ಥರು ಮತ್ತು ಡಾ. ಬಿ ಆರ್ ಅಂಬೇಡ್ಕರ್ ತರುಣ ಸಂಘದ ಮುಖಂಡರು ಉಪಸ್ಥಿತರಿದರು.



**ಹುಮನಾಬಾದ :** ದಿನಾಂಕ 29.08.2025 ರಂದು ಹುಮನಾಬಾದ ಮತ್ತು ಚಿಟಗುಪ್ಪ ತಾಲೂಕಿನ ಶಾಲೆಯ ಕಾರ್ಯನಿರ್ವಹಿಸುತ್ತಿರುವ ಮುಖ್ಯ ಅಡಿಗೆಯವರ ಒಂದು ದಿನದ ಕಾರ್ಯಗಾರ ತಾಲೂಕ ಪಂಚಾಯತ್ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಯಿತು ಅಧ್ಯಕ್ಷತೆಯನ್ನು ರಮ್ಯಾ ಐ ಎ ಎಸ್ ಅಧಿಕಾರಿಗಳು ವಹಿಸಿಕೊಂಡಿದ್ದರು ದೀಪಿಕ ನಾಯ್ಕರ್ ಕಾರ್ಯನಿರ್ವಾಹಕ ಅಧಿಕಾರಿಗಳು ಮುಖ್ಯ ಅತಿಥಿ ಸ್ಥಾನ ವಹಿಸಿಕೊಂಡಿದ್ದರು ಶ್ರೀ ವೆಂಕಟೇಶ ಗುಡ್ಡಾಳ ಕ್ಷೇತ್ರ ಶಿಕ್ಷಣಾಧಿಕಾರಿಗಳು ಹಾಗೂ ಪ್ರೀತಮ್ ಸಿಂಗ್ ಜಾದವ್ ಸಮನ್ವಯ ಅಧಿಕಾರಿಗಳು ಅತಿಥಿ ಸ್ಥಾನ ವಹಿಸಿಕೊಂಡಿದ್ದರು ಶ್ರೀಮತಿ ಕರುಣಾದೇವಿ ಎಂ ಭೋಸ್ಲೆ ಸಹಾಯಕ ನಿರ್ದೇಶಕರು ಅಕ್ಷರ ದಾಸೋಹ ಯೋಜನೆ ಅವರು ಪ್ರಾಸ್ತವಿಕವಾಗಿ ಮಾತನಾಡಿದರು. ಶೂಚಿತ್ವ ಮತ್ತು ಸ್ವಚ್ಛತೆ ಬಗ್ಗೆ ವಿವರವಾಗಿ ಹೇಳಿದರು ಶ್ರೀ ಸರ್ದಾರ್ ಅಲಿ ಐ ಆರ್ ಟಿ ಅವರು ಅಡುಗೆ ಸಿಬ್ಬಂದಿಯವರಿಗೆ ಸ್ವಚ್ಛತೆಯ ಬಗ್ಗೆ ಸಹ ವಿವರವಾಗಿ ಹೇಳಿದರು ಕವಿತ ಮುಖ್ಯ ಅಡಿಗೆಯವರು ಪ್ರಾರ್ಥನಾ ಗೀತೆ ಹಾಡಿದರು ಸಿಂಧೂಮತಿ ಪ್ರಥಮ ದರ್ಜೆ ಸಹಾಯಕರು ಅವರು ವಂದನಾರ್ಪಣೆ ಮಾಡಿದರು ಪ್ರಕಾಶ್ ಕಂಪ್ಯೂಟರ್ ಆಪರೇಟರ್ ಅಡುಗೆ ಸಿಬ್ಬಂದಿಯವರ ಮಾಹಿತಿ ದಾಖಲಿಸಿ ಕೊಂಡರು ಈ ಕಾರ್ಯಕ್ರಮದಲ್ಲಿ ಮುಖ್ಯ ಶಿಕ್ಷಕರು ಸುರೇಶ್ ಕಟ್ಟಿಮನಿ ಹಾಜರಿದ್ದರು. **ಮಲ್ಲಮ್ಮ ನುಡಿ ಚಿತ್ರ.**

# ವಡಗೇರಾ ತಾಲೂಕ ಪಂಚಾಯತ್ ತ್ರೈಮಾಸಿಕ ಕೆ.ಡಿ.ಪಿ ಸಭೆಗೆ ಸೂಚನೆ

**ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ :**

ವಡಗೇರಾ ತಾಲೂಕ ಪಂಚಾಯತ್ ತ್ರೈಮಾಸಿಕ ಕೆ.ಡಿ.ಪಿ ಸಭೆಯನ್ನು ಯಾದಗಿರಿ ವಿಧಾನಸಭಾ ಕ್ಷೇತ್ರದ ಶಾಸಕ ಶ್ರೀಚನ್ನಾರೆಡ್ಡಿ ಪಾಟೀಲ್ ತುನ್ನೂರ ಅಧ್ಯಕ್ಷತೆಯಲ್ಲಿ 2025ರ ಡಿಸೆಂಬರ್ 6 ರಂದು ಬೆಳಿಗ್ಗೆ 11 ಗಂಟೆಗೆ ಯಾದಗಿರಿ ತಾಲೂಕ ಪಂಚಾಯತ್ ಸಭಾಂಗಣದಲ್ಲಿ ಆಯೋಜಿಸಲಾಗಿದೆ ಎಂದು ವಡಗೇರಾ ತಾಲೂಕ ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಅವರು ತಿಳಿಸಿದ್ದಾರೆ.

2025–26ನೇ ಸಾಲಿನ ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮಗಳ ತ್ರೈಮಾಸಿಕ ಪ್ರಗತಿ ಪರಿಶೀಲನಾ ಸಭೆಗೆ 2025ರ ನವೆಂಬರ್ ಅಂತ್ಯದವರೆಗಿನ ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮಗಳ ಪ್ರಗತಿ ವರದಿಯನ್ನು (ಕಡ್ಡಾಯವಾಗಿ ಎ4 ಸೈಜ್ ಲ್ಯಾಂಡ್ ಸ್ಕೇಪ್) ಐದು ಪ್ರತಿಗಳಲ್ಲಿ 2025ರ ಡಿಸೆಂಬರ್ 4 ರಂದು ಮಧ್ಯಾಹ್ನ 2 ಗಂಟೆಗೆ ಒಳಗೆ ಸಲ್ಲಿಸಬೇಕು, ವಿಷಯ ಸೂಚನೆ 2025ರ ನವೆಂಬರ್ ಅಂತ್ಯದವರೆಗೆ ಪ್ರಗತಿ ಪರಿಶೀಲನೆ, ಅಧ್ಯಕ್ಷರ ಅನುಮತಿ ಮೇರೆಗೆ ಇತರೆ ವಿಷಯಗಳ ಕುರಿತು ಚರ್ಚೆ ನಡೆಯಲಿದೆ. ಈ ಸಭೆಗೆ ನಿಗದಿಪಡಿಸಿದ ಸಮಯಕ್ಕೆ ಅಧಿಕಾರಿಗಳು ಪ್ರಗತಿ ವರದಿಯೊಂದಿಗೆ ಪ್ರತಿನಿಧಿಯನ್ನು ಕಳುಹಿಸದೇ ಖುದ್ದಾಗಿ ಹಾಜರಾಗಬೇಕು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಿಲಿಂಡರ್ ಸ್ಫೋಟ ಸಂಭವಿಸಿದ ಮನೆಗೆ ಶಾಸಕ ನಾಡಗೌಡ ಭೇಟಿ



ತಾಳಿಕೋಟಿ: ಪಟ್ಟಣದ ಗಣೇಶ ನಗರದಲ್ಲಿರುವ ರವಿ ಸೋಮರೆಡ್ಡಿ ಕೋಳೂರ ಅವರ ಮನೆಯಲ್ಲಿ ಗ್ಯಾಸ್ ಸೋರಿಕೆಯಿಂದಾಗಿ ಸಿಲಿಂಡರ್ ಸ್ಫೋಟಗೊಂಡ ಹಿನ್ನಲೆಯಲ್ಲಿ ಶಾಸಕ ಅಪ್ಪಾಜಿ ನಾಡಗೌಡರು ಶುಕ್ರವಾರ ಸ್ಥಳಕ್ಕೆ ಭೇಟಿ ನೀಡಿದರು. ನವೆಂಬರ್ 27ರಂದು ಸಂಭವಿಸಿದ ಈ ಘಟನೆಯಲ್ಲಿ ಮನೆಯಲ್ಲಿದ್ದ 3.80 ಲಕ್ಷ ನಗದು ಹಣ ಪ್ರಮುಖ ದಾಖಲೆ ಪತ್ರಗಳು ಹಾಗೂ ಇಡೀ ಮನೆ ಕಟ್ಟಡ ಶಿಥಿಲಗೊಂಡಿದ್ದು ಅಂದಾಜು 50 ಲಕ್ಷದಷ್ಟು ಹಾನಿಯಾಗಿದೆ ಎಂದು ಮನೆಯ ಮಾಲೀಕ ಕೋಳೂರ ಶಾಸಕರಿಗೆ ತಿಳಿಸಿದರು.ಈ ಸಂದರ್ಭದಲ್ಲಿ ಶಾಸಕ ಅಪ್ಪಾಜಿ ನಾಡಗೌಡರು ಮಾತನಾಡಿ ಘಟನೆ ನಡೆದ ಸಮಯದಲ್ಲಿ ಮನೆಯಲ್ಲಿ ಯಾರೂ ಇಲ್ಲದೇ ಇರುವುದರಿಂದ ಯಾವುದೇ ರೀತಿಯ ಜೀವ ಹಾನಿ ಆಗಿಲ್ಲ, ಇದು ಸಮಾಧಾನದ ವಿಷಯವಾಗಿದೆ ಆದರೆ ಇಂಥಹ ವಿಷಯದಲ್ಲಿ ಸಾರ್ವಜನಿಕರು ಹೆಚ್ಚು ಜಾಗೃತಿ ವಹಿಸಬೇಕು ಎಂದ ಅವರು ಸ್ಫೋಟದಿಂದ ಆಗಿರುವ ಒಟ್ಟು ಹಾನಿಯ ಸಮಗ್ರ ವರದಿಯನ್ನು ತಹಸಿಲ್ದಾರ್ ಅವರಿಂದ ಪಡೆದುಕೊಂಡು ಮುಂದಿನ ಕ್ರಮ ಜರುಗಿಸುತ್ತೇನೆ ಎಂದರು. ಈ ಸಮಯದಲ್ಲಿ ಮುಖಂಡರಾದ ಪ್ರಭುಗೌಡ ಮದರಕಲ್, ಮುದ್ದೇಬಿಹಾಳ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಗುರು ತಾರನಾಳ, ಸಂಗನಗೌಡ ಅಸ್ಕಿ, ಗುರು ಕೊಪ್ಪದ, ಶಾಸಕರ ಆಪ್ತ ಸಹಾಯಕ ಬಾಗೇವಾಡಿ, ಕೊಳೂರ ಕುಟುಂಬದ ಸದಸ್ಯರು ಹಾಗೂ ಬಡಾವಣೆಯ ನಿವಾಸಿಗಳು ಇದ್ದರು.

# ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜಿನಲ್ಲಿ ನೂತನ ಕಟ್ಟಡಗಳ ಲೋಕಾರ್ಪಣೆ



ಮಲ್ಲಮ್ಮ ನುಡಿ ವಾರ್ತೆ ಔರಾದ(ಬಿ):

ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜಿನಲ್ಲಿ ಹೊಸದಾಗಿ ನಿರ್ಮಿಸಲಾದ ಸೆಮಿನಾರ್ ಹಾಲ್,ಗ್ರಂಥಾಲಯ ಹಾಗೂ ಕ್ಯಾಂಟೀನ್ ಕಟ್ಟಡಗಳಿಗೆ ಮಾಜಿ ಸಚಿವರು ಹಾಗೂ ಶಾಸಕರಾದ ಪ್ರಭು ಬಿ.ಚವ್ಹಾಣ ಅವರು ನ.29ರಂದು ಲೋಕಾರ್ಪಣೆ ಮಾಡಿದರು.

ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜಿನಲ್ಲಿ ಓದುತ್ತಿರುವ ವಿದ್ಯಾರ್ಥಿಗಳಿಗೆ ಬೋಧನಾ ಚಟುವಟಿಕೆಗಳು ನಡೆಸಲು, ಸಾಮಾಜಿಕ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ನಡೆಸಲು ಅನುಕೂಲವಾಗುವಂತೆ ಸೆಮಿನಾರ್ ಹಾಲ್ ನಿರ್ಮಿಸಿಕೊಡಬೇಕೆಂಬ ಬೇಡಿಕೆಯಿತ್ತು. ಹಾಗೆಯೇ ಒಳ್ಳೆಯ ಗ್ರಂಥಾಲಯ, ಕ್ಯಾಂಟೀನ್ ಹಾಗೂ ಮತ್ತಿತರೆ ಕಾಮಗಾರಿಗಳಿಗೆ ಕೆ-ಕೆಆರ್‌ಡಿಬಿ ಯೋಜನೆಯಡಿ 3.29 ಕೋಟಿ ಅಂದಾಜು ಮೊತ್ತದಲ್ಲಿ ಹೊಸ ಕಟ್ಟಡ ನಿರ್ಮಿಸಲಾಗಿದೆ. ಇವುಗಳನ್ನು ಸದ್ಬಳಕೆ ಮಾಡಿಕೊಳ್ಳಬೇಕೆಂದು ತಿಳಿಸಿದರು.

ಶಿಕ್ಷಣ ಅಭಿವೃದ್ಧಿ ನನ್ನ ಪರಮ ಸಂಕಲ್ಪವಾಗಿದ್ದು ಈ ದಿಶಿಯಲ್ಲಿ ಎಲ್ಲ ರೀತಿಯ ಸಹಕಾರ ನೀಡುತ್ತೇನೆ. ಕಾಲೇಜಿಗೆ ಇನ್ನೂ ಏನೇನು ಬೇಕು ಎಂಬುದನ್ನು ಪಟ್ಟಿ ಮಾಡಿಕೊಡಿ ಹಂತ ಹಂತವಾಗಿ ಅವಶ್ಯಕತೆಗೆ ಅನುಗುಣವಾಗಿ ಎಲ್ಲವನ್ನು ಒದಗಿಸುವ ವ್ಯವಸ್ಥೆ ಮಾಡುತ್ತೇನೆ. ವಿದ್ಯಾರ್ಥಿಗಳು ಸರಿಯಾಗಿ ಅಭ್ಯಾಸ ಮಾಡಬೇಕು ಕಾಲೇಜು ಮತ್ತು ಔರಾದ(ಬಿ) ಕ್ಷೇತ್ರದ ಹೆಸರನ್ನು ಎತ್ತರಕ್ಕೆ ಕೊಂಡೊಯ್ಯಬೇಕು ಎಂದು ತಿಳಿಸಿದರು.

ಕಾಲೇಜಿನಲ್ಲಿ ಬೋಧಕರ ಕೊರತೆಯಿರುವ ಬಗ್ಗೆ ಗಮನಕ್ಕಿದೆ. ಅತಿಥಿ ಶಿಕ್ಷಕರೇ ತರಗತಿಗಳನ್ನು ನಡೆಸುತ್ತಿದ್ದಾರೆ. ಸರ್ಕಾರದ ಹಂತದಲ್ಲಿ ನಿರಂತರ ಪತ್ರವ್ಯವಹಾರ ನಡೆಸುತ್ತಿದ್ದೇನೆ. ಬೋಧಕರನ್ನು ತರಲು ಅಗತ್ಯ ಕ್ರಮ ವಹಿಸುತ್ತೇನೆ. ಕಾಲೇಜಿನ ಎದುರು ಕೆಲವು ಬಸ್ಸುಗಳು ನಿಲ್ಲುತ್ತಿಲ್ಲವೆಂಬ ದೂರುಗಳಿವೆ. ಸಂಬಂಧಪಟ್ಟವರನ್ನು ಮಾತನಾಡಿಸಿ ಬಸ್ ತಂಗುವ ವ್ಯವಸ್ಥೆ ಮಾಡಲಾಗುವುದೆಂದು ಹೇಳಿದರು.

ಉದ್ಯಾನ ನಿರ್ಮಾಣಕ್ಕೆ ಕ್ರಮ ವಹಿಸಿ: ಇದೇ ವೇಳೆ ಶಾಸಕರು ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜು ಆವರಣದಲ್ಲಿ ಸಂಚರಿಸಿ ಸ್ವಚ್ಛತೆ ಹಾಗೂ ಮತ್ತಿತರೆ ವ್ಯವಸ್ಥೆಗಳನ್ನು ಪರಿಶೀಲಿಸಿದರು.ಕಾಲೇಜು ಆವರಣವನ್ನು ಶುಚಿಯಾಗಿ ಇಟ್ಟುಕೊಳ್ಳಬೇಕು. ಪಠ್ಯ ಚಟುವಟಿಕೆಗಳು ಅಚ್ಚುಕಟ್ಟಾಗಿ ನಡೆಯಬೇಕು ಎಂದು ಪ್ರಾಂಶುಪಾಲರಿಗೆ ತಿಳಿಸಿದರು.

ಕಾಲೇಜು ಆವರಣದಲ್ಲಿ ಉತ್ತಮ ಸ್ಥಳವಕಾಶವಿದೆ.ಸಂಪೂರ್ಣ ಆವರಣವನ್ನು ಸಮತಟ್ಟುಗೊಳಿಸಿ ಸುಂದರ ಉದ್ಯಾನ ನಿರ್ಮಿಸಲು ಪ್ರಸ್ತಾವನೆ ಸಲ್ಲಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು

ಈ ಸಂದರ್ಭದಲ್ಲಿ ಕಾಲೇಜು ಪ್ರಾಂಶುಪಾಲರಾದ ವಿಜಯಶೆಟ್ಟಿ, ಮುಖಂಡರಾದ ಮಾರುತಿ ಚವ್ಹಾಣ, ಸಚಿನ್ ರಾಠೋಡ, ಬಾಬು ರಾಠೋಡ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಬಾಕಿ ಇರುವ ಪ್ರಕರಣ ದಂಡದ ಮೊತ್ತ ಸರ್ಕಾರವು ಶೇ.50 ರಷ್ಟು ರಿಯಾಯಿತಿ

**ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ :**

ಪೊಲೀಸ್ ಇಲಾಖೆಯ ಸಂಚಾರಿ ಇ ಚಲನ್‌ನಲ್ಲಿ ದಾಖಲಾಗಿರುವ ಮತ್ತು ಸಾರಿಗೆ ಇಲಾಖೆಯಲ್ಲಿ 1991–92 ರಿಂದ 2019–2020 ರಿಂದ ಅವಧಿಯಲ್ಲಿ ದಾಖಲಾಗಿ ಪಾವತಿಗೆ ಬಾಕಿ ಇರುವ ಪ್ರಕರಣಗಳ ದಂಡದ ಮೊತ್ತದಲ್ಲಿ ಸರ್ಕಾರವು ಶೇ.50 ರಷ್ಟು ರಿಯಾಯಿತಿ ನೀಡಲಾಗಿದೆ ಎಂದು ಯಾದಗಿರಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿಗಳು ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ಗೌರವಾನ್ವಿತ ಶ್ರೀ ಮರಿಯಪ್ಪ ಅವರು ತಿಳಿಸಿದ್ದಾರೆ.

ಯಾದಗಿರಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಅಧ್ಯಕ್ಷರು ಹಾಗೂ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ನಿರ್ದೇಶನದ ಮೇರೆಗೆ 2025ರ ಡಿಸೆಂಬರ್ 13 ರಂದು ಪ್ರಸ್ತುತ ವರ್ಷದ ರಾಷ್ಟ್ರೀಯ ಲೋಕ್ ಅದಾಲತ್ ಹಮ್ಮಿಕೊಂಡಿದ್ದು, ಈ ಲೋಕ್ ಅದಾಲತ್‌ನ ಪ್ರಯುಕ್ತ ಸಾರ್ವಜನಿಕರ ಗಮನಕ್ಕೆ ಕರ್ನಾಟಕ ಸರ್ಕಾರವು ಪೊಲೀಸ್ ಇಲಾಖೆಯ ಸಂಚಾರಿ ಇ ಚಲನ್‌ನಲ್ಲಿ ದಾಖಲಾಗಿರುವ ಮತ್ತು ಸಾರಿಗೆ ಇಲಾಖೆಯಲ್ಲಿ 1991–92 ರಿಂದ 2019–2020ರ ಅವಧಿಯಲ್ಲಿ ದಾಖಲಾಗಿ ಪಾವತಿಗೆ ಬಾಕಿ ಇರುವ ಪ್ರಕರಣಗಳ ದಂಡದ ಮೊತ್ತದಲ್ಲಿ ಶೇ.50 ರಷ್ಟು ರಿಯಾಯಿತಿ ನೀಡಿರುತ್ತದೆ. ಈ ರಿಯಾಯಿತಿಯು 2025ರ ನವೆಂಬರ್ 21 ರಿಂದ 2025ರ ಡಿಸೆಂಬರ್ 12ರ ವರೆಗೆ ನೀಡಲಾಗಿರುತ್ತದೆ.

ಪೊಲೀಸ್ ಇಲಾಖೆಯ ಸಂಚಾರಿ ಇ–ಚಲನ್‌ನಲ್ಲಿ ದಾಖಲಾಗಿರುವ ಮತ್ತು ಸಾರಿಗೆ ಇಲಾಖೆಯಲ್ಲಿ 1991–92 ರಿಂದ 2019–2020ರ ಅವಧಿಯಲ್ಲಿ ದಾಖಲಾಗಿ ಪಾವತಿಗೆ ಬಾಕಿ ಇರುವ ಪ್ರಕರಣಗಳಲ್ಲಿ ಸಂಬಂಧ ಪಟ್ಟ ಸಾರ್ವಜನಿಕರು 2025ರ ನವೆಂಬರ್ 21 ರಿಂದ ಡಿಸೆಂಬರ್ 12ರ ಒಳಗೆ ತಮ್ಮ ಪ್ರಕರಣಗಳಲ್ಲಿ ದಂಡದ ಮೊತ್ತ ಪಾವತಿಸಿ ಸರ್ಕಾರವು ನೀಡಿರುವ ಶೇ.50 ರಷ್ಟು ರಿಯಾಯಿತಿಯನ್ನು ಸದುಪಯೋಗ ಪಡಿಸಿಕೊಳ್ಳಬೇಕು ಸಾರ್ವಜನಿಕರ ಗಮನಕ್ಕೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಡಿ,3 ರಾಯಚೂರಿನಲ್ಲಿ ಸತತ 8ನೇ ವರ್ಷದ ಪಠ್ಯಾಧಾರಿತ ರಸಪ್ರಶ್ನೆ



ಮಲ್ಲಮ್ಮ ನುಡಿ ವಾರ್ತೆ ರಾಯಚೂರು:

ರಾಯಚೂರು ಜಿಲ್ಲೆಯ ಹತ್ತನೇ ತರಗತಿ ವಿದ್ಯಾರ್ಥಿಗಳಶೈಕ್ಷಣಿಕಮಟ್ಟವನ್ನುವೃದ್ಧಿಸಲು ನವಯುಗ ಶಿಕ್ಷಣ ಸಂಸ್ಥೆ (ರಿ.) ಸತತ 8ನೇ ವರ್ಷದ ಪಠ್ಯಾಧಾರಿತ ರಸಪ್ರಶ್ನೆ ಸ್ಪರ್ಧೆಯನ್ನುಡಿಸೆಂಬರ್ 3ರಂದು ಬೆಳಿಗ್ಗೆ 9 ಗಂಟೆಗೆ ಪಂಡಿತ ಸಿದ್ದರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಆಯೋಜಿಸಿದೆ. ಈ ಕುರಿತು ಇಂದು ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ನವಯುಗ ಪದವಿ ಪೂರ್ವ ಕಾಲೇಜು ಪ್ರಾಚಾರ್ಯ ರಮೇಶ್ ಉಪ್ರಾಳ್ ಮಾಹಿತಿ ನೀಡಿದರು.

ಅವರು ಮಾತನಾಡಿ, ಕಳೆದ ಏಳು ವರ್ಷಗಳಿಂದ ನಡೆಸುತ್ತಿರುವ ರಸಪ್ರಶ್ನೆಗಳು ವಿದ್ಯಾರ್ಥಿಗಳಲ್ಲಿಪಠ್ಯಾಭ್ಯಾಸದ ಆಸಕ್ತಿಯನ್ನು ಹೆಚ್ಚಿಸುವುದರ ಜೊತೆಗೆ ವಾರ್ಷಿಕ ಪರೀಕ್ಷೆಗಳ ಫಲಿತಾಂಶ ಸುಧಾರಣೆಗೆ ಸಹಕಾರಿಯಾಗಿವೆ ಎಂದು ಹೇಳಿದರು. ನವಯುಗ ಎಜ್ಯುಕೇಶನ್ ಟ್ರಸ್ಟ್ (ರಿ.) ಅಧ್ಯಕ್ಷೆ ತಿಮ್ಮವ್ವ,ಕಾರ್ಯದರ್ಶಿ ಹೇಮಾವತಿ ಹಾಗೂ ಸದಸ್ಯೆ ವಿಜಯಲಕ್ಷ್ಮಿ ಅವರ ಮಾರ್ಗದರ್ಶನದಲ್ಲಿ ಕಾರ್ಯಕ್ರಮ ನಡೆಯಲಿದೆ.


ಕಾರ್ಯಕ್ರಮದಲ್ಲಿ ಒಂದು ಶಾಲೆಯಿಂದ ಮೂವರಿಗೆ ಅವಕಾಶವಿದ್ದು, ಜಿಲ್ಲೆಯ ಎಲ್ಲ ಪ್ರೌಢಶಾಲೆಗಳ ವಿದ್ಯಾರ್ಥಿಗಳು ಭಾಗವಹಿಸಬಹುದಾಗಿದೆ. ಹಿಂದಿನ ಸ್ಪರ್ಧೆಗಳಿಗೆ ಜಿಲ್ಲಾದ್ಯಂತ ಉತ್ತಮ ಪ್ರತಿಕ್ರಿಯೆ ದೊರೆತಿದ್ದು, ಲಿಟಲ್ ಜೆಮ್ಸ್ ಹೈ ಸ್ಕೂಲ್, ಲಯನ್ಸ್ ಕ್ಲಬ್ ಹೈ ಸ್ಕೂಲ್, ಸರಕಾರಿ ಹೈಸ್ಕೂಲ್ ಮತಮಾರಿ, ಇಡುವನೂರು, ಮೋರಸ್ ಹೈ ಸ್ಕೂಲ್ ಎರಗೇರಾ, ನೇತಾಜಿ ಹೈ ಸ್ಕೂಲ್ ಮಾನ್ಸಲಾಪುರ ಹಾಗೂ ಕರ್ನಾಟಕ ಪಬ್ಲಿಕ್ ಹೈ ಸ್ಕೂಲ್ ಯಾಪಳದಿನ್ನಿ ಶಾಲೆಗಳು ವಿಜೇತರಾಗಿವೆ.

ಈ ಬಾರಿ ಕಾರ್ಯಕ್ರಮವನ್ನು ತಿಮ್ಮವ ವಲ್ಲಭ ಉದ್ಘಾಟಿಸಲಿದ್ದಾರೆ. ವ್ಯವಸ್ಥಾಪಕ ನಿರ್ದೇಶಕ ವಿಷ್ವೇ ಶ್ವರನ್ ಅಧ್ಯಕ್ಷತೆ ವಹಿಸಲಿದ್ದು, ಹೇಮಾವತಿ, ಸತೀಶ್ ಕುಮಾರ್, ವಿಜಯಲಕ್ಷ್ಮೀ ಎನ್., ಸಿದ್ದಾರ್ಥ ವಲ್ಲಭ, ನರಸಿಂಹಲು ಎನ್., ಶೇಖ್ ಅತಾರ್, ರಿಜ್ವಾನಾ ಪರ್ವಿನ್, ನಾಹೀದ್ ಪಾಷಾ, ಮಾರೆಪ್ಪ ಸೇರಿದಂತೆ ಗಣ್ಯರು ಅತಿಥಿಗಳಾಗಿದ್ದಾರೆ.

ನವಯುಗ ಪದವಿ ಪೂರ್ವ ಕಾಲೇಜು, ನವಯುಗ ಪದವಿ ಮಹಾವಿದ್ಯಾಲಯ, ನವಯುಗ ಸ್ನಾತಕೋತ್ತರ ವಿಭಾಗ, ನವಯುಗ ಗ್ರಾಮೀಣ ಪಿಯು ಕಾಲೇಜು, ನವಯುಗ ಗಟ್ಟೂರು ಪದವಿ ಕಾಲೇಜು ಹಾಗೂ ನವಯುಗ ಮಹಿಳಾ ಪದವಿ ಕಾಲೇಜು ಆತಿಥ್ಯ ವಹಿಸಿದೆ.

ಸುದ್ದಿಗೋಷ್ಠಿಯಲ್ಲಿ ಹೇಮಾವತಿ, ನರಸಿಂಹಲು ಎನ್., ಶೇಖ್ ಅತಾರ್ ಮತ್ತಿತರರು ಹಾಜರಿದ್ದರು. ಸಂಸ್ಥೆಯ ವತಿಯಿಂದ "ಎಲ್ಲಾ ಸಿದ್ಧತೆಗಳು ಪೂರ್ಣಗೊಂಡಿದ್ದು, ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು" ಎಂದು ಕೋರಲಾಯಿತು.

# ಹಜರತ್ ಹುಸೇನ್ ಆಲಂ ಉರುಸು



ಮಲ್ಲಮ್ಮ ನುಡಿ ವಾರ್ತೆ ರಾಯಚೂರು:

ತಾಲೂಕಿನ ಗಂಜಹಳ್ಳಿ ಗ್ರಾಮದ ಹಿಂದೂ ಮುಸ್ಲಿಂ ಸಂಕೇತವಾಗಿರುವ ಹಜರತ್ ಹುಸೇನ್ ಆಲಂಬಾಬ ಅವರ ಉರುಸು ಡಿ.4 ರಂದು ಅತ್ಯಂತ ಅದ್ದೂರಿಯಾಗಿ ನಡೆಯಲಿದೆ.ಪ್ರತಿವರ್ಷದಂತೆ ಈ ವರ್ಷವೂ ಭಾರೀ ಸಂಭ್ರಮದಿಂದ ನಡೆಯಲಿದ್ದು,ಇದೇ ಡಿ.3ರಂದು ಬುಧವಾರ ಗಂಧ, 4ರಂದು ಉರುಸ್, ರಂದು 5ಜಿಹಾರತ್ ಕಾರ್ಯಕ್ರಮ ಜರುಗಲಿದೆ. ದರ್ಗಾದ ಧಾರ್ಮಿಕ ಆಚರಣೆಯ ಕಾರ್ಯಕ್ರಮಗಳು ಮತ್ತು ಎಲ್ಲಾ ಭಕ್ತರ ಸೇವೆಯಿಂದ ಹಿಂದೂ ಮುಸ್ಲಿಂ ಭಾವೈಕ್ಯತೆ ಸಾರುವುದು ಮಾದರಿಯಾಗಿದೆ. ಗಂಧದ ದಿನದಂದು ಅಕ್ರಂಸಾಬ್ ಇವರ ಮನೆಯಿಂದ ಪ್ರಾರಂಭವಾದ ಮೆರವಣಿಗೆ ಗ್ರಾಮದ ಪ್ರಮುಖ ರಸ್ತೆಗಳಲ್ಲಿ ಸಂಚರಿಸಿ ಹುಸೇನ್ ಆಲಂಬಾಬ ದರಗಾ ತಲುಪಿತು. ಭಕ್ತರುಸಮ್ಮುಖದಲ್ಲಿ ಮೆರವಣಿಗೆ ಅತ್ಯಂತ ವಿಜಂಭಣೆಯಿಂದ ಜರುಗಲಿದೆ.

ಈ ಕಾರ್ಯಕ್ರಮದಲ್ಲಿ ಸಮಸ್ತ ಭಕ್ತರು ಪಾಲ್ಗೊಂಡು ಹಜರತ್ ಹುಸೇನಿ ಆಲಂಬಾಬ ಅವರ ದರ್ಶನ ಪಡೆದು ಕೊಳ್ಳಬೇಕೆಂದು ಯಂಕಪ್ಪ ತಾತ ಮತ್ತು ಊರಿನ ಹಿರಿಯರು ಮತ್ತು ಕಿರಿಯರು ಭಕ್ತರಿಗೆ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಿಂದ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ ರಾಯಚೂರು:

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಿಂದ ಅರ್ಹ ಸಾಧಕ ಕ್ರೀಡಾಪಟುಗಳು ಹಾಗೂ ಇತರರಿಂದ ವಿವಿಧ ಪ್ರಶಸ್ತಿ ಪ್ರೋತ್ಸಾಹಧನ ನೀಡುವ ಯೋಜನೆಗಳು ಚಾಲ್ತಿಯಲ್ಲಿದ್ದು ವಿವಿಧ ಕಾರ್ಯಕ್ರಮಗಳಡಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

2024ನೇ ಸಾಲಿನ ಏಕಲವ್ಯ ಪ್ರಶಸ್ತಿ, ಜೀವಮಾನ ಸಾಧನೆ ಪ್ರಶಸ್ತಿ, ಕರ್ನಾಟಕ ಕ್ರೀಡಾರತ್ನ ಪ್ರಶಸ್ತಿ, ಕರ್ನಾಟಕ ಕ್ರೀಡಾ ಪೋಷಕ ಪ್ರಶಸ್ತಿ, 2025-26ನೇ ಸಾಲಿನ ಗುರಿ – ಒಲಂಪಿಕ್ ಪದಕ, 2023 ಮತ್ತು 2024ನೇ ಸಾಲಿನ ನಗದು ಪುರಸ್ಕಾರ, 2025-26ನೇ ಸಾಲಿನ ಶೈಕ್ಷಣಿಕ ಶುಲ್ಕ ಮರುಪಾವತಿ ಹಾಗೂ ಕ್ರೀಡಾ ವಿದ್ಯಾರ್ಥಿ ವೇತನ ಕಾರ್ಯಕ್ರಮಗಳಿಗೆ ಅರ್ಹ ಇರುವ ಕ್ರೀಡಾಪಟುಗಳು ಇಲಾಖೆಯ ವೆಬ್‌ಸೈಟ್ https://sevasindhu.karnataka.gov.in ರ ಮೂಲಕ ಡಿಸೆಂಬರ್ 03ರೊಳಗೆ ಆನ್‌ಲೈನ್ ಮೂಲಕ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ. ಹೆಚ್ಚಿನ ವಿವರಗಳಿಗಾಗಿ ಸಹಾಯಕ ನಿರ್ದೇಶಕರ ಕಚೇರಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಜಿಲ್ಲಾ ಕ್ರೀಡಾಂಗಣ ರಾಯಚೂರು ಇವರನ್ನು ಕಚೇರಿ ಸಮಯದಲ್ಲಿ ಸಂಪರ್ಕಿಸಬಹುದಾಗಿದೆ ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನಗರ ಸೇವೆಗಳಲ್ಲಿ ಪಾರದರ್ಶಕತೆ ಗುಣಮಟ್ಟಕ್ಕೆ ಕಟ್ಟು ನಿಟ್ಟಿನ ಸೂಚನೆ



ಮಲ್ಲಮ್ಮ ನುಡಿ ವಾರ್ತೆ

ರಾಯಚೂರು: ರಾಯಚೂರು ಮಹಾನಗರ ಪಾಲಿಕೆ ಆಯುಕ್ತರು ಇಂದು ನಗರ ವ್ಯಾಪ್ತಿಯ ವಿವಿಧ ವಿಭಾಗಗಳ ಸೇವಾ ಗುಣಮಟ್ಟ ಪರಿಶೀಲಿಸುವ ಉದ್ದೇಶದಿಂದ ಇಂದು

ಅನಿರೀಕ್ಷಿತ

ಭೇಟಿ ನಡೆಸಿದರು. ಜನನಮರಣ ನೋಂದಣಿ ವಿಭಾಗ, ಕಂದಾಯ ಅದಾಲತ್‌ಗಳು, ಹಾಗೂ ಎಂಜಿನಿಯರಿಂಗ್ ವಿಭಾಗದ ಕಾಮಗಾರಿಗಳ ಕಾರ್ಯಾಚರಣೆ ಮತ್ತು ಸಾರ್ವಜನಿಕ ಸೇವೆಗಳ ಸ್ಥಿತಿಯನ್ನು ಅವರು ಸ್ಥಳದಲ್ಲೇ ಪರಿಶೀಲಿಸಿದರು.

ಜನನಮರಣ ನೋಂದಣಿ ವಿಭಾಗದಲ್ಲಿ ದಾಖಲೆ ನಿರ್ವಹಣೆ, ಸೇವಾ ವೇಗ, ಮತ್ತು ಪ್ರಕ್ರಿಯೆಗಳ ಪಾರದರ್ಶಕತೆ ಕುರಿತು ಅವಲೋಕನ ನಡೆಸಿದ ಆಯುಕ್ತರು, ನಾಗರಿಕರ ಅರ್ಜಿಗಳನ್ನು ವಿಳಂಬವಿಲ್ಲದೆ ನಿರ್ವಹಿಸಲು ಸಿಬ್ಬಂದಿಗೆ ಸ್ಪಷ್ಟ ಸೂಚನೆ ನೀಡಿದರು.

ಕಂದಾಯ ಅದಾಲತ್‌ಗಳ ಪರಿಶೀಲನೆಯ ವೇಳೆ, ಆಸ್ತಿ ದಾಖಲೆಗಳ ಪರಿಶೀಲನೆ, ತೆರಿಗೆ ನಿಶ್ಚಿತತೆ ಮತ್ತು ಪರಿಷ್ಕರಣೆ, ಸಾರ್ವಜನಿಕ ಅಹವಾಲುಗಳ ನಿವಾರಣೆ ಕುರಿತು ಸಂಬಂಧಿತ ಅಧಿಕಾರಿಗಳೊಂದಿಗೆ ಚರ್ಚೆ ನಡೆಯಿತು. ನಗರದ ಎಲ್ಲಾ ವಾರ್ಡ್‌ಗಳಲ್ಲಿ ಕಂದಾಯ ಅದಾಲತ್‌ಗಳನ್ನು ನಿರಂತರವಾಗಿ ಆಯೋಜಿಸುವ ಮೂಲಕ, ಅರ್ಹ ನಾಗರಿಕರಿಗೆ ಖಾತಾ ಹಂಚಿಕೆ ಮತ್ತು ತಿದ್ದುಪಡಿ ಪ್ರಕ್ರಿಯೆಗಳನ್ನು ವೇಗವಾಗಿ ಪೂರ್ಣಗೊಳಿಸುವುದು ಮಹಾನಗರ ಪಾಲಿಕೆಯ ಮುಖ್ಯ ಗುರಿಯಾಗಿದೆ ಎಂದು ಆಯುಕ್ತರು ತಿಳಿಸಿದರು.

ನಗರದ ವಿವಿಧ ಪ್ರದೇಶಗಳಲ್ಲಿ ನಡೆಯುತ್ತಿರುವ ಎಂಜಿನಿಯರಿಂಗ್ ವಿಭಾಗದ ರಸ್ತೆ, ಡ್ರೇನೇಜ್, ಒಳಚರಂಡಿ ಹಾಗೂ ನಗರ ಸೌಕರ್ಯ ಸುಧಾರಣಾ ಕಾಮಗಾರಿಗಳ ಗುಣಮಟ್ಟ ಮತ್ತು ಪ್ರಗತಿಯನ್ನು ಆಯುಕ್ತರು ಸ್ಥಳೀಯವಾಗಿ ಪರಿಶೀಲಿಸಿದರು. ಯಾವುದೇ ನಿರ್ಲಕ್ಷ್ಯ ಅಥವಾ ಅಶ್ರದ್ಧೆಯು ಕಂಡುಬಂದರೆ ಸಂಬಂಧಿತ ಅಧಿಕಾರಿಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವುದಾಗಿ ಎಚ್ಚರಿಸಿದರು.

ಸಮಗ್ರವಾಗಿ, ನಾಗರಿಕರಿಗೆ ಸಮಯಬದ್ಧ, ಪಾರದರ್ಶಕ ಮತ್ತು ಗುಣಮಟ್ಟದ ಸೇವೆ ನೀಡುವುದು ಸಿಬ್ಬಂದಿಯ ಪ್ರಮುಖ ಜವಾಬ್ದಾರಿ ಎಂದು ಆಯುಕ್ತರು ಪುನರುಚ್ಚರಿಸಿದರು. ನಗರಾಭಿವೃದ್ಧಿ ಮತ್ತು ಸಾರ್ವಜನಿಕ ಸೇವೆಗಳ ಸುಧಾರಣೆಗಾಗಿ ಮಹಾನಗರ ಪಾಲಿಕೆ ಬದ್ಧವಾಗಿರುವುದಾಗಿ ಅವರು ಹೇಳಿದರು.

# ಅಯ್ಯಪ್ಪ ಸ್ವಾಮಿ ದೇವಸ್ಥಾನದಲ್ಲಿ ಮಸ್ಕಿ ಅಭಿನಂದನ್ ಅನಾಥ ಮಕ್ಕಳಿಂದ 18 ಮೆಟ್ಟಿಲು ಪಡಿ ಪೂಜೆ



ಮಲ್ಲಮ್ಮ ನುಡಿ ವಾರ್ತೆ ಲಿಂಗಸಗೂರು:

ಪಟ್ಟಣದ ಪುರಸಭೆ ವ್ಯಾಪ್ತಿಯಲ್ಲಿ ಬರುವ 17 ನೇ ವಾರ್ಡಿನ ಲಕ್ಷ್ಮೀದೇವಿ ದೇವಸ್ಥಾನದ ಹತ್ತಿರ ಬರುವ ಅಯ್ಯಪ್ಪ ಸ್ವಾಮಿ ದೇವಸ್ಥಾನದಲ್ಲಿ ಸಂಜೆ ಅಭಿನಂದನ್ ಸ್ಫೂರ್ತಿ ಧಾಮ ಅನಾಥ ವಿಕಲಚೇತನ ಮತ್ತು ಬಡಮಕ್ಕಳ ಆಶ್ರಮ ವಸತಿ ಶಾಲೆ ಮಕ್ಕಳು 18 ಮೆಟ್ಟಿಲು ಪಡಿ ಪೂಜೆಯನ್ನು ಮಕ್ಕಳು ನೆರವೇರಿಸಿದರು.ಪಡಿ ಪೂಜೆಯನ್ನು ಅಭಿನಂದನ್ ಆಶ್ರಮದ ಮಕ್ಕಳಿಂದ ನೆರವೇರಿಸಲು ಲಿಂಗಸುಗೂರು ಅಯ್ಯಪ್ಪ ಸ್ವಾಮಿ ದೇವಸ್ಥಾನ ಚಾರಿಟೇಬಲ್ ಟ್ರಸ್ಟ ವತಿಯಿಂದ ಅಭಿನಂದನ್ ಸ್ಫೂರ್ತಿ ಧಾಮ ಅನಾಥ ವಿಕಲಚೇತನ ಮತ್ತು ಬಡ ಮಕ್ಕಳ ಶಾಲೆ ದೇವಸ್ಥಾನ ವತಿಯಿಂದ ಆಹ್ವಾನಿಸಲಾಗಿತ್ತು. ಅದರಂತೆ ಆಶ್ರಮದ ಮಕ್ಕಳು 18 ಮೆಟ್ಟಿಲು ಪಡಿ ಪೂಜೆ ನೆರವೇರಿಸಿದರು.ಪಡಿ ಪೂಜೆಯಲ್ಲಿ ಅಭಿನಂದನ್ ಸ್ಫೂರ್ತಿ ಧಾಮ ಅನಾಥ ವಿಕಲಚೇತನ ಮತ್ತು ಬಡ ಮಕ್ಕಳ ಆಶ್ರಮ ಸಂಸ್ಥೆಯ ಅಧ್ಯಕ್ಷರು ರಾಮಣ್ಣ ಹಂಪರಗುಂದಿ ಹಾಗೂ ಶ್ರುತಿ ರಾಮಣ್ಣ ಹಂಪರಗುಂದಿ ಅವರನ್ನು ದೇವಸ್ಥಾನ ವತಿಯಿಂದ ಸನ್ಮಾನಿಸಲಾಯಿತು.ಪಡಿ ಪೂಜೆಯಲ್ಲಿ ಅಯ್ಯಪ್ಪ ಸ್ವಾಮಿ ದೇವಸ್ಥಾನದ ಗುರುಸ್ವಾಮಿಗಳು ಸಿದ್ರಾಮು ಗುರುಸ್ವಾಮಿ ನಗರಗುಂಡ,ಪತ್ರಕರ್ತ ರಾಜೇಶ ಮಾಣಿಕ್, ಲಿಂಗಸುಗೂರು ಅಯ್ಯಪ್ಪ ಸ್ವಾಮಿ ದೇವಸ್ಥಾನದ ಮಾಲೆಧಾರಿಗಳು,ಹಾಗೂ ಹೊನ್ನಳ್ಳಿ ಅಯ್ಯಪ್ಪ ಸ್ವಾಮಿ ದೇವಸ್ಥಾನ ಮಾಲೆಧಾರಿಗಳು,ಮತ್ತು ಅಯ್ಯಪ್ಪ ಸ್ವಾಮಿ ಭಕ್ತರು ಇದ್ದರು.

# ಮಕ್ಕಳ ಹಕ್ಕುಗಳ ವಿಶೇಷ ಗ್ರಾಮಸಭೆ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಹಲಗೇರಿ ಗ್ರಾಮದ ಕನಕನಗರದಲ್ಲಿರುವ ಸರಕಾರಿ ಕಿರಿಯ ಪ್ರಾಥಮಿಕ ಶಾಲೆಯಲ್ಲಿ ಶುಕ್ರವಾರದಂದು ಗ್ರಾಮ ಪಂಚಾಯತಿ ಸದಸ್ಯರಾದ ಜಗದೀಶ ಓಜನಹಳ್ಳಿ ಇವರ ಅಧ್ಯಕ್ಷತೆಯಲ್ಲಿ ಮಕ್ಕಳ ಹಕ್ಕುಗಳ ವಿಶೇಷ ಗ್ರಾಮಸಭೆ ಜರುಗಿತು.

ಹಲಗೇರಿ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಸಂಗಮೇಶ ತೇರಿನ ಮಾತನಾಡಿ, ಪ್ರತೀ ವರ್ಷದಂತೆ ಈ ವರ್ಷವೂ ಕೂಡಾ ಮಕ್ಕಳ ಹಕ್ಕುಗಳ ವಿಶೇಷ ಗ್ರಾಮಸಭೆಗಳನ್ನು ಆಯೋಜನೆ ಮಾಡಲಾಗಿದ್ದು, ಮಕ್ಕಳ ಗ್ರಾಮಸಭೆಯಲ್ಲಿ ಮಕ್ಕಳ ಹಕ್ಕುಗಳ ತಿಳುವಳಿಕೆ ಹಾಗೂ ಮಕ್ಕಳ ಕುಂದುಕೊರತೆಗಳು ಮತ್ತು ಅವುಗಳ ಪರಿಹಾರದ ಬಗ್ಗೆ ಚರ್ಚಿಸಿ ನಿಯಮಾನುಸಾರ ಸೂಕ್ತ ಕ್ರಮಗಳನ್ನು ಕೈಗೊಳ್ಳಲಾಗುವುದು ಎಂದು ಹೇಳಿದರು.

ಜಿಲ್ಲಾ ಮಕ್ಕಳ ಸಹಾಯವಾಣಿ ಆಪ್ತ ಸಮಾಲೋಚಕಿ ಲತಾ ಮಾತನಾಡಿ, ಮಕ್ಕಳ ಹಕ್ಕುಗಳ ಬಗ್ಗೆ ಮಕ್ಕಳಿಗೆ ವಿವರಿಸಿದರು ಹಾಗೂ ಮಕ್ಕಳ ಸಹಾಯವಾಣಿ ಸಂಖ್ಯೆಯಾದ 1098 ಇದರ ಉಪಯೋಗದ ಕುರಿತು ಮಕ್ಕಳಿಗೆ ತಿಳುವಳಿಕೆ ನೀಡಿದರು.

ಗ್ರಾ.ಪಂ ಕಾರ್ಯದರ್ಶಿ ದೊಡ್ಡನಗೌಡ ಪೊಲೀಸ್ ಪಾಟೀಲ ಸ್ವಾಗತಿಸಿದರು. ಸಭೆಯಲ್ಲಿ ಮಕ್ಕಳಿಂದ ವಿವಿಧ ಬೇಡಿಕೆಗಳು ಸಲ್ಲಿಕೆಯಾದವು.

ಗ್ರಾಮಸಭೆಯಲ್ಲಿ ಗ್ರಾಮ ಪಂಚಾಯತ ಸದಸ್ಯರಾದ ಮಲ್ಲಿಕಾರ್ಜುನ ಮಡಿವಾಳರ, ಕಳಕನಗೌಡ ಹಳೆಮನಿ, ಆರ್.ಜಿ. ತಿಮ್ಮನಗೌಡ, ಎಸ್.ಡಿ.ಎಮ್.ಸಿ ಅಧ್ಯಕ್ಷರಾದ ದ್ಯಾಮಣ್ಣ ದಮ್ಮೂರು, ಉಪಾಧ್ಯಕ್ಷರು, ಸದಸ್ಯರು ಹಾಗೂ ಸಮೂಹ ಸಂಪನ್ಮೂಲ ವ್ಯಕ್ತಿಗಳಾದ ಶರಣಯ್ಯ ಹಿರೇಮಠ, ಬಸನಗೌಡ ಪಾಟೀಲ, ಉಮೇಶ ಸಸಿ, ಗ್ರಾಮ ಪಂಚಾಯತ ಕಾರ್ಯದರ್ಶಿ ದೊಡ್ಡನಗೌಡ ಪೊಲೀಸ್ ಪಾಟೀಲ್, ಶಾಲೆಗಳ ಮುಖ್ಯೋಪಾಧ್ಯಾಯರು, ಪೊಲೀಸ್ ಇಲಾಖೆ ಸಿಬ್ಬಂದಿ, ಎಲ್ಲಾ ಶಾಲೆಗಳ ಮಕ್ಕಳು ಹಾಗೂ ಅಂಗನವಾಡಿ ಮತ್ತು ಆಶಾ ಕಾರ್ಯಕರ್ತೆಯರು, ಗ್ರಾಮ ಪಂಚಾಯತಿ ಮಟ್ಟದ ಸಂಜೀವಿನಿ ಮಹಿಳಾ ಒಕ್ಕೂಟದ ಹಾಗೂ ವಿವಿಧ ಸಂಘ ಸಂಸ್ಥೆಗಳ ಸದಸ್ಯರು, ಪದಾಧಿಕಾರಿಗಳು, ಗ್ರಾಮ ಪಂಚಾಯತಿ ಸಿಬ್ಬಂದಿಗಳು ಹಾಜರಿದ್ದರು.

# ಬೆಳೆಹಾನಿಯಾದ ರೈತರಿಗೆ ಪರಿಹಾರ ಪಾವತಿಗೆ ಕ್ರಮ

ಮಲ್ಲಮ್ಮ ನುಡಿ ವಾರ್ತೆ ರಾಯಚೂರು:

ರಾಯಚೂರು ಜಿಲ್ಲೆಯ ಬೆಳೆ ಹಾನಿಯಾದ ಒಟ್ಟು 76,942 ರೈತ ಫಲಾನುಭವಿಗಳಿಗೆ ನೇರವಾಗಿ ಡಿಬಿಟಿ ಮುಖಾಂತರ ರೂ.34,36,13,754 ಗಳು ಜೊತೆಗೆ ಹೆಚ್ಚುವರಿಯಾಗಿ ರೂ. 33,01.97,441 ಗಳನ್ನು ರೈತರ ಬ್ಯಾಂಕ್ ಖಾತೆಗೆ ನೇರವಾಗಿ ಡಿಬಿಟಿ ಮುಖಾಂತರ ಪಾವತಿಸುವ ಬಗ್ಗೆ ಜಿಲ್ಲಾಡಳಿತವು ಕ್ರಮ ವಹಿಸಿರುತ್ತದೆ ಎಂದು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರು ಆಗಿರುವ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರು ತಿಳಿಸಿದ್ದಾರೆ.2025-26ನೇ ಸಾಲಿನಲ್ಲಿ ಮುಂಗಾರು ಹಂಗಾಮಿನಲ್ಲಿ ಪ್ರಕೃತಿ ವಿಕೋಪಗಳಿಂದ ಉಂಟಾದ ಬೆಳೆ ಹಾನಿ ಪ್ರಕರಣದ ಬ್ಯಾಚ-1ನೇಯ ಪರಿಹಾರವನ್ನು ಎನ್‌ಡಿಆರ್‌ಎಫ್ ಮತ್ತು ಎಸ್‌ಡಿಆರ್‌ಎಫ್ ಮಾರ್ಗಸೂಚಿಯಂತೆ ರೈತರಿಗೆ ಪಾವತಿಸುವ ಬಗ್ಗೆ ರಾಜ್ಯ ಸರ್ಕಾರ ನಿರ್ದೇಶಿಸಿದಂತ ಜಿಲ್ಲೆಯ ಬೆಳೆ ಹಾನಿಯಾದ ಒಟ್ಟು 76,942 ರೈತ ಫಲಾನುಭವಿಗಳಿಗೆ ನೇರವಾಗಿ ಡಿಬಿಟಿ ಮುಖಾಂತರ ರೂ. 34,36,13,754 ಪಾವತಿಸುವ ಬಗ್ಗೆ ಜಿಲ್ಲಾಡಳಿತವು ಕ್ರಮ ವಹಿಸಿರುತ್ತದೆ. ಮುಂದುವರೆದು, ದಿನಾಂಕ 25-11-2025ರ ಸರ್ಕಾರದ ಆದೇಶದಂತೆ ರಾಜ್ಯ ಸರ್ಕಾರದಿಂದ ಘೋಷಿಸಿರುವ ಹೆಚ್ಚುವರಿ ಪರಿಹಾರವನ್ನು ರೈತರಿಗೆ ಪಾವತಿಸುವ ಬಗ್ಗೆ ದಿನಾಂಕ 27-11-2025 ರಂದು ಸನ್ಮಾನ್ಯ ಮುಖ್ಯಮಂತ್ರಿಗಳು ವಿಡಿಯೋ ಸಂವಾದದ ಮುಖಾಂತರ ಚಾಲನೆ ನೀಡಿದ್ದು, ಅದರಂತೆ ಜಿಲ್ಲೆಯ ಒಟ್ಟು 76,941 ರೈತ ಫಲಾನುಭವಿಗಳಿಗೆ ರೂ. 33,01.97,441 ಗಳನ್ನು ಸಹ ರೈತರ ಬ್ಯಾಂಕ್ ಖಾತೆಗೆ ನೇರವಾಗಿ ಡಿಬಿಟಿ ಮುಖಾಂತರ ಪಾವತಿಸುವ ಬಗ್ಗೆ ಜಿಲ್ಲಾಡಳಿತವು ಕ್ರಮ ವಹಿಸಿದೆ. ಹೆಚ್ಚುವರಿ ಇನ್ಪುಟ್ ಸಬ್ಸಿಡಿ ದರಗಳು ಮತ್ತು ವಿತರಣೆ: ಬೆಳೆ ಹಾನಿಗೊಳಗಾದ ರೈತರಿಗೆ ನೆರವು ನೀಡುವ ಉದ್ದೇಶದಿಂದ, ರಾಜ್ಯ ಸರ್ಕಾರವು ಇನ್ಪುಟ್ ಸಬ್ಸಿಡಿ ದರಗಳನ್ನು ಗರಿಷ್ಠ 2 ಹೆಕ್ಟರ್ ಸೀಮಿತಗೊಳಿಸಿ ಈ ಮುಂದಿನಂತೆ ಹೆಚ್ಚಿಸಿದೆ. ಮಳೆಯಾಶ್ರಿತ ಬೆಳೆಗಳು: ಹೆಕ್ಟೇರ್ 1ಕ್ಕೆ ರೂ. 8,500 ರಿಂದ ರೂ. 17,000 ಹಾಗೂ ನೀರಾವರಿ ಬೆಳೆಗಳು: ಹೆಕ್ಟೇರ್ 1 ಕ್ಕೆ ರೂ. 17,000 ರಿಂದ ರೂ. 25,500 ಮತ್ತು ಬಹುವಾರ್ಷಿಕ ಬೆಳೆಗಳು: ಹೆಕ್ಟೇರ್ 1 ಕ್ಕೆ ರೂ.22,500 ರಿಂದ ರೂ. 31,000 ಎಂದು ಹೆಚ್ಚುವರಿ ಇನ್ಪುಟ್ ಸಬ್ಸಿಡಿ ದರಗಳು ಮತ್ತು ವಿತರಣೆಗೆ ಕ್ರಮವಹಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.

# ಪ್ರತಿಷ್ಠಿತ ಫೆಡರಲ್ ಶಿಕ್ಷಣ ಸಂಸ್ಥೆ ಕಲಿ ಕನ್ನಡ ಹೊಸಪುಸ್ತಕ ಬಿಡುಗಡೆ




ಮಲ್ಲಮ್ಮ ನುಡಿ ವಾರ್ತೆ

ರಾಯಚೂರು: ನಗರದ ಯರಮರಸನಲ್ಲಿರುವ ಫೆಡರಲ್ ಶಿಕ್ಷಣ ಸಮೂಹಗಳ ವತಿಯಿಂದ ಇಂದು ಶಾಲಾ ಆವರಣದಲ್ಲಿ ಪುಸ್ತಕ ಸಂಯೋಜಕರಾದ ಸೈಯ್ಯದ್ ಗೌಸ್ ಮೊಹಿಯುದ್ದೀನ್ ಪೀರಜಾದೆ ರವರು ಕಲಿ ಕನ್ನಡ ಹೊಸ ಮಾದರಿಯ ಅಂಕಲಿಪಿಯನ್ನು ಬಿಡುಗಡೆ ಮಾಡಿದರು. ಈ ಕಾರ್ಯಕ್ರಮದಲ್ಲಿ ಖ್ಯಾತ ವ್ಯಂಗ ಚಿತ್ರಗಾರರಾದ ಈರಣ್ಣ ಬೆಂಗಾಲಿ ಅವರು ಮತ್ತು ಸಂಸ್ಥೆಯ ಅಧ್ಯಕ್ಷರಾದ ಶ್ರೀ ಮೋಹ್ಮದ್ ಅಬ್ದುಲ್ ಹೈ ಫೀರೋಜ್ ರವರು, ಕಾರ್ಯನಿರ್ವಾಹಕ ನಿರ್ದೇಶಕಿ ಕು. ಶ್ರೀಲೇಖಾ ರವರು ಉಪಸ್ಥಿತರಿದ್ದರು.ನಂತರ ಸೈಯ್ಯದ್ ಗೌಸ್ ಮೊಹಿಯುದ್ದೀನ್ ಪೀರಜಾದೆ ಮತ್ತು ಖ್ಯಾತ ವ್ಯಂಗ ಚಿತ್ರಗಾರರಾದ ಈರಣ್ಣ ಬೆಂಗಾಲಿ ಯವರವರಿಗೆ ಸಂಸ್ಥೆಯ ಅಧ್ಯಕ್ಷರಾದ ಮೋಹ್ಮದ್ ಅಬ್ದುಲ್ ಹೈ ಫೀರೋಜ್ ರವರು, ಸನ್ಮಾನಿಸಿದರು. ಸೈಯ್ಯದ್ ಗೌಸ್ ಮೊಹಿಯುದ್ದೀನ್ ಪೀರಜಾದೆ ತಮ್ಮ ಪುಸ್ತಕ ಮತ್ತು ವಿದ್ಯಾರ್ಥಿಗಳ ಬಗ್ಗೆ ತಮ್ಮ ಅನಿಸಿಕೆಗಳನ್ನು ತಿಳಿಸಿದರು. ಈ ಸಂದರ್ಭದಲ್ಲಿ ಶಾಲಾ ಮುಖ್ಯಗುರುಗಳು ಹಾಗೂ ಶಾಲೆಯ ಸಹ ಶಿಕ್ಷಕರು-ಭೋದಕೇತ ಸಿಬ್ಬಂದಿ ವರ್ಗದವರು ಮತ್ತು ಕಛೇರಿಯ ಮುಖ್ಯ ಅಧಿಕ್ಷರಾದ ಗಧಾರ ವೆಂಕಟೇಶ ಸಾಗರ ಉಪಸ್ಥಿತರಿದ್ದರು. ಶ್ರೀಮತಿ ಪವಿತ್ರಾ ಸ.ಶಿ ನಿರೂಪಣೆಯನ್ನು ಮತ್ತು ವಂದನಾರ್ಪಣೆಯನ್ನು ಕಿರಣ್ ದೈ.ಶಿ. ಇವರು ಸಲ್ಲಿಸಿದರು.

# ಸಿಎಂ ಸಿದ್ದರಾಮಯ್ಯ ಇಳಿಸಿದರೆ ರಾಜ್ಯದಲ್ಲಿ ಕಾಂಗ್ರೇಸ್ ನೆಲಕಚ್ಚುವುದು ಗ್ಯಾರಂಟಿ: ಬಸವಂತಪ್ಪ



ಮಲ್ಲಮ್ಮ ನುಡಿ ವಾರ್ತೆ

ರಾಯಚೂರು: ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಸಿ.ಎಂ ಸ್ಥಾನದಿಂದ ಇಳಿಸಿದರೆ ಬಿಹಾರ ಪರಿಸ್ಥಿತಿ ರಾಜ್ಯದಲ್ಲಿ ಕಾಂಗ್ರೆಸ್ ನೆಲಕಚ್ಚುವುದು ಗ್ಯಾರಂಟಿ ಎಂದು ಜಿಲ್ಲಾ ಕುರುಬರ ಸಂಘ ಜಿಲ್ಲಾಧ್ಯಕ್ಷ ಕೆ.ಬಸವಂತಪ್ಪ ಕಾಂಗ್ರೆಸ್ ಹೈಕಮಾಂಡಗೆ ಎಚ್ಚರಿಕೆ ನೀಡಿದರು.

ಅವರಿಂದು ನಗರದ ಸುದ್ದಿಗಾರರೊಂದಿಗೆ ಮಾತನಾಡುತ್ತಾ, ಸಿದ್ದರಾಮಯ್ಯ ಅವರು, ಈ ಹಿಂದೆ ಒಂದೇ ಒಂದು ಕಪ್ಪುಚುಕ್ಕೆ ಇಲ್ಲದಂತೆ, ಭ್ರಷ್ಟಾಚಾರ ರಹಿತ ಆಡಳಿತ ನಡೆಸಿದ್ದಾರೆ. ಕರ್ನಾಟಕದ ಮಹಾಜನತೆ ಐದು ವರ್ಷ ಜನಾದೇಶ ಕೊಟ್ಟಿದೆ.ಸುಗಮ ಆಡಳಿತ ನಡೆಸಲು ಕಾಂಗ್ರೆಸ್ ಹೈಕಮಾಂಡ್ ಅವಕಾಶ ಸಿದ್ದರಾಮಯ್ಯ ಮಾಡಿಕೊಡಬೇಕು ಎಂದು ಆಗ್ರಹಿಸಿದರು. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಐದು ವರ್ಷಗಳ ಕಾಲ ಸಿಎಂ ಆಗಲಿ ಮುಂದುವರಿಯಲಿ ಎಂದು ಆಗ್ರಹಿಸಿದರು.

ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬರಲು ಸಿದ್ದರಾಮಯ್ಯನವರ ಕೊಡುಗೆ ಇದೆ. ರಾಜ್ಯದ ಕುರುಬ ಸಮಾಜದ ಜನಾಂಗ ಜೊತೆಗಿದ್ದಾರೆ. ಮುಖ್ಯಮಂತ್ರಿ, ಜನಕಲ್ಯಾಣ, ಗ್ಯಾರಂಟಿ ಯೋಜನೆಗಳನ್ನು ರೂಪಿಸಿ ಸರ್ಕಾರದ ಯೋಜನೆಗಳನ್ನು ಬಡವರ ಮನೆ ಬಾಗಿಲುಗಳಿಗೆ ತಲುಪಿಸಿ ಕಾಂಗ್ರೆಸ್ ವರ್ಚಸ್ಸನ್ನು ಹೆಚ್ಚಿಸಿದ್ದಾರೆ. ಅಷ್ಟೇ ಅಲ್ಲ ಸಿದ್ದರಾಮಯ್ಯನವರು ತಮ್ಮ ರಾಜಕೀಯ ಜೀವನದಲ್ಲಿ ಯಾವುದೇ ಕಪ್ಪು ಚುಕ್ಕೆ ಇಲ್ಲದೇ ಪ್ರಾಮಾಣಿಕ ರಾಜಕಾರಣಿ.

ಪಾರದರ್ಶಕ ಆಡಳಿತ ನೀಡುವಲ್ಲಿ ತಮ್ಮದೇ ಛಾಪು ಮೂಡಿಸಿದ್ದಾರೆ. ಕರ್ನಾಟಕ ರಾಜ್ಯದಲ್ಲಿ 15 ಬಜೆಟ್‌ಗಳನ್ನು ಮಂಡಿಸಿದ ಕೀರ್ತಿಗೆ ಪಾತ್ರರಾಗಿದ್ದಾರೆ.

ರಾಜ್ಯವನ್ನು ಪ್ರಗತಿ ಕಡೆಗೆ ಕೊಂಡೊಯ್ಯುತ್ತಿದ್ದಾರೆ. ತುಳಿತಕ್ಕೆ ಒಳಗಾದ ಶೋಷಿತರ ಜನರ ಧ್ವನಿಯಾಗಿ ಕೆಲಸ ಮಾಡುತ್ತಿದ್ದಾರೆ. ಇಂತಹ ಸಂದರ್ಭದಲ್ಲಿ ಯಾರದೋ ಒಂದು ಸಮಾಜದ ಒತ್ತಾಯಕ್ಕೆ ಮಣಿದು ಸಿದ್ದರಾಮಯ್ಯನವರನ್ನು ಮುಖ್ಯಮಂತ್ರಿ ಸ್ಥಾನದಿಂದ ಏನಾದರೂ ಕೆಳಗೆ ಇಳಿಸಿದರೆ ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷ ನೆಲಕಚ್ಚಿ ಕಾಂಗ್ರೆಸ್ ಪಕ್ಷ ತುಂಭಲಾರದ ನಷ್ಟವನ್ನು ಅನುಭವಿಸಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

ದೇಶದ ಅನೇಕ ರಾಜ್ಯಗಳಲ್ಲಿ ತನ್ನ ಅಧಿಕಾರವನ್ನು ಕಳೆದುಕೊಂಡಿರುವುದನ್ನು ಮರೆಯುವಂತಿಲ್ಲ. ಮೊನ್ನೆ ತಾನೇ ಬಿಹಾರ ವಿಧಾನಸಭೆ ಚುನಾವಣೆಯಲ್ಲಿ ಕೇವಲ 6 ಸೀಟುಗಳನ್ನು ಪಡೆದಿದೆ. ಇಂತಹ ಪರಸ್ಥಿತಿ ಕರ್ನಾಟಕಕ್ಕೆ ಬರಬಾರದು ಎಂದರೆ ಕಾಂಗ್ರೆಸ್ ಪಕ್ಷಕ್ಕೆ ಹೈಕಮಾಂಡ್ ಸಿದ್ದರಾಮಯ್ಯನವರನ್ನು ಮುಖ್ಯಮಂತ್ರಿಯಾಗಿ ಮುಂದುವರಿಸಬೇಕೆಂದು ಒತ್ತಾಯಿಸಿದರು. . ಅಹಿಂದ ಜನರ ಮತ್ತು ಕುರುಬ ಸಮಾಜದ ಜನಾಂಗದ ಶಾಸಕರ ಅಭಿಪ್ರಾಯಕ್ಕೆ ವ್ಯತಿರಿಕ್ತವಾಗಿ ಕಾಂಗ್ರೆಸ್ ಹೈಕಮಾಂಡ್ ನಿರ್ಧಾರ ತೆ-ಗೆದುಕೊಂಡರೆ ಮುಂದಿನ ದಿನಗಳಲ್ಲಿ ರಾಜ್ಯಾದ್ಯಂತ ಹೋರಾಟ ಮಾಡಬೇಕಾಗುತ್ತದೆ. ಮತ್ತು ಮುಂದಿನ ಚುನಾವಣೆಯಲ್ಲಿ ಪಕ್ಷಕ್ಕೆ ತಕ್ಕ ಪಾಠ ಕಲಿಸಬೇಕಾಗುತ್ತದೆ ಎಂದು ಎಚ್ಚಕೆ ನೀಡಿದರು.ಈ ಸಂದರ್ಭದಲ್ಲಿ ಕಾರ್ಯಾಧ್ಯಕ್ಷ ಬಿ. ಬಸವರಾಜ,ಕೆ.ಹನುಮಂತಪ್ಪ ವಕೀಲರು,ನಾಗರಾಜ ಮಡ್ಡಿಪೇಟೆ, ಹನುಮಂತ ಜಾಲಿಬೆಂಚಿ,ಶೇಖರ ವಾರದ್,ರಾಮನಗೌಡ ವಕೀಲ್,ನಾಗೇಂದ್ರಪ್ಪ ಮತಮಾರಿ ಸೇರಿದಂತೆ ಅನೇಕರು ಉಪಸ್ಥರಿದ್ದರು.

## ವಿಜಯನಗರ ಶ್ರೀ ಕೃಷ್ಣದೇವರಾಯ ವಿವಿಯಲ್ಲಿ ಎರಡು ದಿನಗಳ ಉಪನ್ಯಾಸ ಸರಣಿ

# ವಿದ್ಯಾರ್ಥಿಗಳು ಜ್ಞಾನ ವೃದ್ಧಿಸಿಕೊಳ್ಳಿ: ಪ್ರೊ.ಜಿ.ಪಿ ದಿನೇಶ್




ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:

ಶೈಕ್ಷಣಿಕ ಹಾಗೂ ಸಂಶೋಧನಾ ಸಂಸ್ಥೆಗಳಲ್ಲಿ ವಿದ್ಯಾರ್ಥಿಗಳು ಉಪನ್ಯಾಸಗಳಲ್ಲಿ ಭಾಗವಹಿಸುವುದರಿಂದ ಜ್ಞಾನ ವೃದ್ಧಿಯಾಗುತ್ತದೆ ಎಂದು ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯದ ಪ್ರಭಾರ ಕುಲಸಚಿವರಾದ ಪ್ರೊ.ಜಿ.ಪಿ ದಿನೇಶ್ ಅವರು ಹೇಳಿದರು.

ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯದ ರಸಾಯನಶಾಸ್ತ್ರ ವಿಭಾಗದಲ್ಲಿ 'ರಾಸಾಯನಿಕ ವಿಜ್ಞಾನದ ಇತ್ತೀಚಿನ ಪ್ರವೃತ್ತಿಗಳ ಕುರಿತು ಎರಡು ದಿನಗಳ ಹಳೆಯ ವಿದ್ಯಾರ್ಥಿಗಳ ಉಪನ್ಯಾಸ ಸರಣಿಗಳು' ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ವಿದ್ಯಾರ್ಥಿಗಳು ಉಪನ್ಯಾಸ ಸರಣಿಗಳಿಂದ ಸಮಗ್ರ ವಾತಾವರಣವನ್ನು ಒದಗಿಸಿಕೊಳ್ಳಬಹುದು. ವಿದ್ಯಾರ್ಥಿಗಳ ಸಕ್ರಿಯ ಭಾಗವಹಿಸುವಿಕೆಯಿಂದ ಪ್ರಸ್ತುತ ವಿದ್ಯಾರ್ಥಿ ಹಾಗೂ ಸಂಸ್ಥೆಯ ಅಭಿವೃದ್ಧಿಗೆ ಶ್ರಮಿಸಿದಂತಾಗುತ್ತದೆ. ಸಮಾಜಕ್ಕೆ ಶೈಕ್ಷಣಿಕ ಸೇವೆಯನ್ನು ಒದಗಿಸುವ ಮೂಲಕ ಜವಾಬ್ದಾರಿಯುತ ಸ್ಥಾನ ಪಡೆಯಬಹುದು ಎಂದು ಮಾತನಾಡಿದರು.

ಮೌಲ್ಯಮಾಪನ ಕುಲಸಚಿವರಾದ ಪ್ರೊ.ಎನ್.ಎಮ್ ಸಾಲಿ ಮಾತನಾಡಿ, ಹಳೆಯ ವಿದ್ಯಾರ್ಥಿಗಳ ಸಂಘವು ವಿದ್ಯಾರ್ಥಿ ಮತ್ತು ಶಿಕ್ಷಣ ಸಂಸ್ಥೆಯ ನಡುವೆ ಬಲವಾದ ಬಾಂಧವ್ಯ ಸ್ಥಾಪಿಸಲು ಸಾಧ್ಯವಾಗುತ್ತದೆ. ವಿದ್ಯಾರ್ಥಿಗಳಿಗೆ ವಿಚಾರ ವಿನಿಮಯಕ್ಕಾಗಿ ಸೂಕ್ತವಾದ ವೇದಿಕೆ ಒದಗಿಸಿದಂತಾಗುತ್ತದೆ. ಶೈಕ್ಷಣಿಕ ಪ್ರಗತಿಯ ಜೊತೆಗೆ ದೇಶವನ್ನು ರೂಪಿಸಲು ಸಹಕಾರಿಯಾಗುತ್ತದೆ ಎಂದರು.

ಕಾರ್ಯಕ್ರಮದಲ್ಲಿ ಶುದ್ಧ ವಿಜ್ಞಾನ ವಿಭಾಗದ ಡೀನ್ ಪ್ರೊ. ಖಿಡ್ಕೆ ಉದಯ ಕುಮಾರ್, ಕಾರ್ಯಕ್ರಮ ಸಂಚಾಲಕರಾದ ಪ್ರೊ.ಕೆ.ಎಸ್ ಲೋಕೇಶ್, ಸಹ ಸಂಚಾಲಕ ಡಾ.ಸಾದು ಸೂರ್ಯಕಾಂತ ಎಸ್., ಪ್ರೊ.ಅರುಣ್‌ಕುಮಾರ ಲಗಶೆಟ್ಟಿ ಉಪಸ್ಥಿತರಿದ್ದರು.

ಎರಡು ದಿನಗಳ ಹಳೆಯ ವಿದ್ಯಾರ್ಥಿಗಳ ಉಪನ್ಯಾಸ ಸರಣಿಯಲ್ಲಿ ವಿಭಾಗದ ಸುಮಾರು 100 ಕ್ಕೂ ಹೆಚ್ಚು ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ಡಿಜಿಟಲ್ ಹಿಂಸಾಚಾರ ಕುರಿತು ಜಾಗೃತಿ




ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ, : ಫ್ಯಾಮಿಲಿ ಪ್ಲಾನಿಂಗ್ ಅಸೋಸಿಯೇಶನ್ ಆಫ್ ಇಂಡಿಯಾ (ಈಕಂಖ) ಬಳ್ಳಾರಿ ಶಾಖೆಯು ಸರ್ಕಾರದ ಪಿಯು ಕಾಲೇಜು (ಹುಡುಗಿಯರ), ಬಳ್ಳಾರಿಯಲ್ಲಿ ಡಿಜಿಟಲ್ ಹಿಂಸಾಚಾರ ಕುರಿತು ಜಾಗೃತಿ ಕಾರ್ಯಕ್ರಮವನ್ನು ಆಯೋಜಿಸಲಾಯಿತು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಕಾರ್ಯಕ್ರಮದ ಸಂಪನ್ಮೂಲ ವ್ಯಕ್ತಿಯಾಗಿ ಎಸ್. ವಿಜಯಲಕ್ಷ್ಮಿ, ಶಾಖಾ ವ್ಯವಸ್ಥಾಪಕರು, ಈಕಂಖ ಬಳ್ಳಾರಿ, ಅವರು ಡಿಜಿಟಲ್ ಹಿಂಸಾಚಾರದ ವಿವಿಧ ರೂಪಗಳು, ಸೈಬರ್ ಅಪರಾಧಗಳ ಪ್ರಕಾರಗಳು, ಫೇಕ್ ಪ್ರೊಫೈಲ್‌ಗಳು, ಸೈಬರ್ ಬುಲಿಯಿಂಗ್, ಪಾಸ್‌ವರ್ಡ್ ಸುರಕ್ಷತೆ, ವೈಯಕ್ತಿಕ ಮಾಹಿತಿಯ ರಕ್ಷಣೆ ಮತ್ತು ಸೈಬರ್ ಅಪರಾಧಗಳನ್ನು ತಪ್ಪಿಸುವ ಮುನ್ನೆಚ್ಚರಿಕೆ ಕ್ರಮಗಳ ಬಗ್ಗೆ ವಿದ್ಯಾರ್ಥಿನಿಯರಿಗೆ ವಿವರವಾದ ಮಾಹಿತಿ ನೀಡಿದರು.

ವಿದ್ಯಾರ್ಥಿನಿಯರು ಪ್ರಶ್ನೋತ್ತರದಲ್ಲಿ ಸಕ್ರಿಯವಾಗಿ ಪಾಲ್ಗೊಂಡು ತಮ್ಮ ಅನುಮಾನಗಳಿಗೆ ಸ್ಪಷ್ಟನೆ ಪಡೆದರು.

ಕಾರ್ಯಕ್ರಮದಲ್ಲಿ ಭಾಗವಹಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ ಸುಲೇಖಾ ಪ್ರಾಂಶುಪಾಲರು ಕಾರ್ಯಕ್ರಮವನ್ನು ಕುರಿತು ಮಾತನಾಡಿ.

"ಇಂದಿನ ಡಿಜಿಟಲ್ ಯುಗದಲ್ಲಿ ಯುವತಿಯರು ತಂತ್ರಜ್ಞಾನವನ್ನು ಸುರಕ್ಷಿತವಾಗಿ ಬಳಸುವುದು ಅತ್ಯಂತ ಅಗತ್ಯ. ಇಂತಹ ಜಾಗೃತಿ ಕಾರ್ಯಕ್ರಮಗಳು ವಿದ್ಯಾರ್ಥಿನಿಯರಿಗೆ ಸರಿಯಾದ ಅರಿವು ನೀಡುತ್ತವೆ" ಎಂದು ಹೇಳಿದರು.

ಈಕಂಖ ಬಳ್ಳಾರಿ ಶಾಖೆ, ಯುವತಿಯರ ಸುರಕ್ಷತೆ, ಜಾಗೃತಿ ಮತ್ತು ಡಿಜಿಟಲ್ ಸಾಮರ್ಥ್ಯ ವೃದ್ಧಿಗೆ ಬದ್ಧವಾಗಿದೆ ಎಂದು ಸಂಘಟಕರು ತಿಳಿಸಿದರು.

# ಡಿ.03 ರಂದು ವಿಶ್ವ ವಿಕಲಚೇತನರ ದಿನಾಚರಣೆ ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:

'ಸಮಗ್ರ ಮತ್ತು ಸುಸ್ಥಿರ ಭವಿಷ್ಯಕ್ಕಾಗಿ ವಿಕಲಚೇತನ ವ್ಯಕ್ತಿಗಳಲ್ಲಿ ನಾಯಕತ್ವ ಉತ್ತೇಜನ' ಎಂಬ ಘೋಷವಾಕ್ಯದಡಿ ಡಿ.03 ರಂದು ಬೆಳಿಗ್ಗೆ 11 ಗಂಟೆಗೆ ನಗರದ ಜೋಳದರಾಶಿ ದೊಡ್ಡನಗೌಡ ರಂಗಮಂದಿರದಲ್ಲಿ ವಿಶ್ವ ವಿಕಲಚೇತನರ ದಿನಾಚರಣೆ ಕಾರ್ಯಕ್ರಮ ಏರ್ಪಡಿಸಲಾಗಿದೆ.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ವಿಕಲಚೇತನರ ಪುನರ್ವಸತಿ ಕೇಂದ್ರ, ಚಿಕಲಚೇತನರ ಶ್ರೇಯೋಭಿವೃದ್ಧಿಗಾಗಿ ಶ್ರಮಿಸುತ್ತಿರುವ ಸ್ವಯಂ ಸೇವಾ ಸಂಸ್ಥೆಗಳ ಸಂಯುಕ್ತಾಶ್ರಯದಲ್ಲಿ ಕಾರ್ಯಕ್ರಮ ಆಯೋಜಿಸಲಾಗಿದೆ.

ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಹಾಗೂ ಬಳ್ಳಾರಿ ಜಿಲ್ಲಾ ಉಸ್ತುವಾರಿ ಸಚಿವ ಬಿ.ಜೆಡ್ ಜಮೀರ್ ಅಹ್ಮದ್ ಖಾನ್ ಅವರು ಕಾರ್ಯಕ್ರಮ ಉದ್ಘಾಟಿಸುವರು. ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿ ಅವರು ಅಧ್ಯಕ್ಷತೆ ವಹಿಸುವರು.

ಸಂಸದರಾದ ಈ.ತುಕಾರಾಮ್, ಕೆ.ರಾಜಶೇಖರ ಬಸವರಾಜ ಹಿಟ್ನಾಳ್, ಡಾ.ಸೈಯದ್ ನಾಸೀರ್ ಹುಸೇನ್, ಶಾಸಕರಾದ ಬಿ.ನಾಗೇಂದ್ರ, ಜೆ.ಎನ್.ಗಣೇಶ್, ಬಿ.ಎಂ.ನಾಗರಾಜ, ಈ.ಅನ್ನಪೂರ್ಣ, ವಿಧಾನಪರಿಷತ್ ಶಾಸಕರಾದ ಡಾ.ಚಂದ್ರಶೇಖರ ಬಿ.ಪಾಟೀಲ, ಶಶೀಲ್ ಜಿ.ನಮೋಶಿ, ವೈ.ಎಂ.ಸತೀಶ್, ಡಾ.ಬಾಬು ಜಗಜೀವನರಾಮ್ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮದ ಅಧ್ಯಕ್ಷ ಮುಂಡರಗಿ ನಾಗರಾಜ, ಬಳ್ಳಾರಿ ಮಹಾನಗರ ಪಾಲಿಕೆ ಮೇಯರ್ ಪಿ.ಗಾದೆಪ್ಪ, ಬಳ್ಳಾರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಜೆ.ಎಸ್.ಆಂಜನೇಯುಲು, ಕರ್ನಾಟಕ ರಾಜ್ಯ ಖನಿಜ ನಿಗಮ ನಿಯಮಿತದ ಉಪಾಧ್ಯಕ್ಷ ಹೆಚ್.ಲಕ್ಷ್ಮಣ್, ಬಳ್ಳಾರಿ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆ.ಇ.ಚಿದಾನಂದಪ್ಪ ಸೇರಿದಂತೆ ಇತರರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್.ಹೊಸಮನೆ, ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ., ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಶೋಭಾರಾಣಿ ವಿ.ಜೆ., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೇರ್, ಅಪರ ಜಿಲ್ಲಾಧಿಕಾರಿ ಮಹಮ್ಮದ್ ಎನ್.ಝುಬೇರ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ರಾಮಕೃಷ್ಣ ನಾಯಕ್ ಸೇರಿದಂತೆ ಇತರರು ಉಪಸ್ಥಿತರಿರುವರು.

ಕಾರ್ಯಕ್ರಮದಲ್ಲಿ ಸಾಧನೆಗೈದ ವಿಕಲಚೇತನರಿಗೆ ಸನ್ಮಾನ ಮತ್ತು ಕ್ರೀಡೆ ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳಲ್ಲಿ ವಿಜೇತರಾದ ವಿಕಲಚೇತನರಿಗೆ ಬಹುಮಾನ ವಿತರಣೆ ಮಾಡಲಾಗುವುದು ಎಂದು ಜಿಲ್ಲಾ ಅಂಗವಿಕಲರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಕಲ್ಯಾಣಾಧಿಕಾರಿ ಗೋವಿಂದಪ್ಪ ಹೆಚ್.ಎಂ ಅವರು ತಿಳಿಸಿದ್ದಾರೆ.

# ಜೆಪಿಪಿಎಂ ನಾಯಕರ ಬಂಧನ ವಿರೋಧಿಸಿ ಪ್ರತಿಭಟನೆ

ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:

ಒರಿಸ್ಸಾ ರಾಜ್ಯದಲ್ಲಿ ಭೂ ಕಬಳಿಕೆ ವಿರುದ್ಧ ಹೋರಾಟ ನಡೆಸುತ್ತಿರುವ ಜೆಪಿಪಿ-ಎಂ ನಾಯಕರರನ್ನು ಬಂಧಿಸಿರುವ ಬಿಜೆಪಿ ಸರ್ಕಾರದ ವಿರುದ್ಧ ಇಂದು ನಗರದಲ್ಲಿನ ಸಂಘದ ಕಚೇರಿ ಮುಂದೆ ಎಐಕೆಕೆಎಂ-ಎಸ್ ರೈತ ಸಂಘಟನೆಯ ಕಾರ್ಯಕರ್ತರು 7 ಪ್ರತಿಭಟನೆ ನಡೆಸಿದರು.

ಈ ಸಂದರ್ಭದಲ್ಲಿ ಸಂಘದ ಜಿಲ್ಲಾ ಕಾರ್ಯದರ್ಶಿ ಗುರಳ್ಳಿ ರಾಜ ಮಾತನಾಡುತ್ತಾ, 'ಜಿಂದಾಲ್ ಪೋಸ್ಕೊ ವಿರೋಧಿ ಮಂಚ್' ಜೆಪಿಪಿಎಂ ನ ಕಾರ್ಯದರ್ಶಿ ಕಾಮ್ರೇಡ್ ಬೆನುಧರ್ ಸರ್ದಾರ್ ಮತ್ತು ಇತರ ನಾಲ್ವರು ನಾಯಕರನ್ನು ತಕ್ಷಣವೇ ಬೇಷರತ್ತಾಗಿ ಬಿಡುಗಡೆ ಮಾಡುವಂತೆ ಒತ್ತಾಯಿಸಿ ಎಂಎಸ್ ರೈತ ಸಂಘಟನೆ ವತಿಯಿಂದ ಇಂದು ದೇಶವ್ಯಾಪಿ ಪ್ರತಿಭಟನೆ ನಡೆಸಲಾಗುತ್ತಿದೆ. ಜಿಂದಾಲ್ ಕಂಪನಿಗಾಗಿ ಒಪ್ಪಂದ ಮಾಡಿಕೊಂಡು ಬಡಜನರ ಮತ್ತು ಆದಿವಾಸಿಗಳು ಹಲವು ವರ್ಷಗಳಿಂದ ವಾಸಿಸುತ್ತಿರುವ ಜಮೀನನ್ನು ಬಿಜೆಪಿ ನೇತೃತ್ವದ ಒರಿಸ್ಸಾ ಸರ್ಕಾರವು ಕಬಳಿಸಲು ಮುಂದಾಗಿದೆ. ಹೀಗೆ ಬಡಜನರನ್ನು ಒಕ್ಕಲೆಬ್ಬಿಸುವ ಸರ್ಕಾರದ ಪ್ರಯತ್ನದ ವಿರುದ್ಧ ಒರಿಸ್ಸಾದ ಕಿಂ-ರೋಂಜಾರ್‌ನಲ್ಲಿ ಇತ್ತೀಚೆಗೆ ಸುಮಾರು 10 ಸಾವಿರಕ್ಕೂ ಹೆಚ್ಚು ಸ್ಥಳೀಯ ಜನ AIKKMS ಆದಿವಾಸಿ ಮತ್ತು ಬಡಜನರು ಬೀದಿಗಿಳಿದು ಪ್ರಚಂಡ ಹೋರಾಟವನ್ನು ನಡೆಸಿದ್ದರು. ಹೋರಾಟವು ಈ ತೀವ್ರಗೊಳ್ಳುತ್ತಿದ್ದಂತೆ ಹೋರಾಟವನ್ನು ಹತ್ತಿಕ್ಕಲು ನವೆಂಬರ್ 26ರಂದು ರಾತ್ರಿ ಸುಮಾರು 1.00 ಗಂಟೆಗೆ ದೊಡ್ಡ ಪೊಲೀಸ್ ಪಡೆ ಪಟಾನಾ ಬ್ಲಾಕ್‌ನ ಜಮುನಾಪೋಸಿ ಗ್ರಾಮಕ್ಕೆ ಪ್ರವೇಶಿಸಿ 'ಜಿಂದಾಲ್ ಪೋಸ್ಕೊ ವಿರೋಧಿ ಮಂಚ್' ಕಾಮ್ರೇಡ್ ಬೆನುಧರ್ ಸರ್ದಾರ್ ಮತ್ತು ಚಳುವಳಿಯ ಇತರ ನಾಲ್ವರು ನಾಯಕರನ್ನು ಬಂಧಿಸಿದ್ದಾರೆ. ಜೆಪಿಪಿಎಂನ ಕಾರ್ಯದರ್ಶಿ ಅಖಿಲ ಭಾರತ ರೈತ ಕೃಷಿಕಾರ್ಮಿಕರ ಸಂಘಟನೆ ಬಳ್ಳಾರಿ ಜಿಲ್ಲಾ ಸಮಿತಿ ನಂತರ, ತಕ್ಷಣವೇ ಗ್ರಾಮದ ಜನರು ಎದ್ದು ಪೊಲೀಸ್ ಕಾರನ್ನು ಘೇರಾವ್ ಮಾಡಿದರು. ಇದರ ಪರಿಣಾಮವಾಗಿ ಪೊಲೀಸ್ ಪಡೆ ಜನರ ಮೇಲೆ ಲಾಠಿ ಚಾರ್ಜ್ ಮಾಡಿ ಅಲ್ಲಿಂದ ಓಡಿಹೋಯಿತು. ಸರ್ಕಾರದ ಇಂತಹ ಹೇಯ ಕೃತ್ಯವನ್ನು ಎಐಕೆಕೆಎಂಎಸ್ ರಾಜ್ಯ ಸಮಿತಿಯು ತೀವ್ರವಾಗಿ ಖಂಡಿಸುತ್ತದೆ ಎಂದು ಎಐಕೆಕೆ-ಎಂಎಸ್ ಜಿಲ್ಲಾಧ್ಯಕ್ಷ ಗೋವಿಂದ್ ತಿಳಿಸಿದರು.

# ಹೈಕಮಾಂಡ್ ಸಿದ್ದರಾಮಯ್ಯರವರನ್ನೆ ಸಿಎಂ ಆಗಿ ಮುಂದುವರಿಸಬೇಕು

ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ,:

ಅಹಿಂದ ಸಮುದಾಯದ ಶಕ್ತಿಶಾಲಿ ನಾಯಕ ಹಾಗೂ ಜನಪರ ಕಾರ್ಯಗಳಿಂದ ಹೆಸರಾಗಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನೇ ಕಾಂಗ್ರೆಸ್ ಹೈಕಮಾಂಡ್ ಮುಖ್ಯಮಂತ್ರಿ ಪದವಿಯಲ್ಲಿ ಮುಂದುವರಿಸಬೇಕು ಎಂದು ಕ್ರಾಂತಿ ವೀರ ಸಂಗೊಳ್ಳಿ ರಾಯಣ್ಣ ಕನ್ನಡ ಹಿತ ರಕ್ಷಣ ವೇದಿಕೆ ಆಗ್ರಹಿಸಿದೆ. ನಗರದ ಪತ್ರಿಕಾ ಭವನದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಸಂಘದ ಜಿಲ್ಲಾಧ್ಯಕ್ಷ ಬಟ್ಟಿ ಎರಿಸ್ವಾಮಿ, "ರಾಜ್ಯದಲ್ಲಿ ಸಾಮಾಜಿಕ ನ್ಯಾಯವನ್ನು ಬಲಪಡಿಸಲು, ಬಡವರಿಗೆ ತಲುಪುವ ಭರವಸೆಯ ಯೋಜನೆಗಳನ್ನು ಜಾರಿಗೆ ತಂದು ಸಿದ್ದರಾಮಯ್ಯವರು ದೊಡ್ಡ ಮಟ್ಟದಲ್ಲಿ ಸಾಧನೆ ಮಾಡಿದ್ದಾರೆ. ಹೀಗಾಗಿ ಅವರನ್ನು ಮುಂದುವರೆಸುವುದು ರಾಜ್ಯ ಕಾಂಗ್ರೆಸ್‌ಗೆ ಅಗತ್ಯ" ಎಂದು ಕಾಂಗ್ರೆಸ್ ಹೈಕಮಾಂಡ್‌ಗೆ ಒತ್ತಾಯಿಸಿದರು.

ರಾಜಕೀಯದ ಕೆಳ ಮಟ್ಟದಿಂದ ಅತಿ ಉನ್ನತ ಮಟ್ಟಕ್ಕೆ ಏರಿದ ಅಹಿಂದ ನಾಯಕ ಸಿದ್ದರಾಮಯ್ಯನವರು 16 ಬಾರಿ ಬಜೆಟ್ ಮಂಡಿಸಿ ಇತಿಹಾಸ ನಿರ್ಮಿಸಿದ್ದಾರೆ ಎಂದು ಸ್ಮರಿಸಿದ ಅವರು, "ರಾಜ್ಯದ ಸರ್ವ ವರ್ಗಗಳ ಅಭಿವೃದ್ಧಿಗೆ ಶ್ರಮಿಸಿ, ಸರ್ವರ ಅಭಿಮಾನ ಸಾಧಿಸಿರುವ ಸಿದ್ದರಾಮಯ್ಯನವರ ನಾಯಕತ್ವ ರಾಜ್ಯದ ರಾಜಕೀಯ ಸ್ಥಿರತೆಗೆ ಪ್ರಮುಖ ಅತ್ಯಗತ್ಯವಾಗಿದೆ. ಸಿದ್ದರಾಮಯ್ಯನವರು ಬಸವರಾಜ್ ಬೊಮ್ಮಾಯಿ ಅವರಂತ ಆಪರ್ ಚೀಟಿ ಇಂದ ಬಂದ ನಾಯಕನಲ್ಲ ಈ ಸಂದರ್ಭದಲ್ಲಿ ಅಹಿಂದ ಸಂಘಟನೆ ಹಾಗೂ ಕುರುಬರ ಸಂಘದ ವಿರುಪಾರ್ಚಪ್ಪ ಕೆ .ಬಿ ,ಸೂರ್ಯದೇವ ಗೊನೆಹಾಳ್ ಕೃಷ್ಣ ,ಶಂಕರ ಬಂಡೆ ನಾಗರಾಜು, ಬೆಳ್ಳಿ ಕಟ್ಟಪ್ಪ, ದುರ್ಗೇಶ್ ,ಉಮೇಶ್ ,ಬೀರಪ್ಪ, ನಾಗರಾಜ್ ,ಪ್ರಭಾಕರ್ ಮುಂತಾದ ಸೇರಿದವರು ಪಾಲ್ಗೊಂಡರು.

# ಎಕೆಸಿಸಿಐ 98ನೇ ವಾರ್ಷಿಕ ಸಭೆಯಲ್ಲಿ ಜಿಲ್ಲೆಯ ಮೂಲಭೂತ ಸೌಲಭ್ಯಗಳಿಗಾಗಿ ಮನವಿ




ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ,:

ನವದೆಹಲಿಯಲ್ಲಿ ಫೇಡರೇಷನ್ ಆಫ್ ಇಂಡಿಯನ್ ಚೇಂಬನ 98ನೇ ವಾರ್ಷಿಕ ಸರ್ವ ಸದಸ್ಯರ ಸಭೆಯಲ್ಲಿ ಪಾಲ್ಗೊಂಡಿದ್ದ ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯು ಜಿಲ್ಲೆಯ ಮೂಲಭೂತ ಸೌಲಭ್ಯಗಳ ಈಡೇರಿಕೆಗೆ ಕೋರಿ ಮನವಿ ಸಲ್ಲಿಸಿದೆ.

ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಅಧ್ಯಕ್ಷರಾದ ಅವ್ವಾರು ಮಂಜುನಾಥ್ ಮತ್ತು ಗೌರವ ಕಾರ್ಯದರ್ಶಿಗಳಾದ ಕೆ.ಸಿ. ಸುರೇಶಬಾಬು ಅವರ ನೇತೃತ್ವದಲ್ಲಿ ಎರೆಡು ದಿನಗಳ ಕಾಲ ನಡೆದ ಸಭೆಯಲ್ಲಿ ಪಾಲ್ಗೊಂಡಿದ್ದ ಪ್ರತಿನಿಧಿಗಳು, ಬಳ್ಳಾರಿ ನಗರದ ಮೂಲಭೂತ ಸೌಲಭ್ಯಗಳಾದ ತುಂಗಭದ್ರ ಜಲಾಶಯದ ಕ್ರಗೇಗಳ ಅಳವಡಿಕೆ, ವಿಮಾನ ನಿಲ್ದಾಣ, ರೈಲ್ವೆ ಅಭಿವೃದ್ಧಿ, ರೈಲ್ವೆಯ ಹೊಸ ಮಾರ್ಗಗಳ ಪ್ರಾರಂಭ, ರಾಷ್ಟ್ರೀಯ ಹೆದ್ದಾರಿಗಳ ಅಭಿವೃದ್ಧಿ, ಹೊಸ ಕೈಗಾರಿಕೆಗಳ ಪ್ರಾರಂಭ, ವ್ಯಾಪಾರ ಮತ್ತು ವಾಣಿಜ್ಯೋದ್ಯಮಿಗಳ – ಬಂಡವಾಳ ಹೂಡಿಕೆದಾರರ ಸ್ನೇಹಿ ನೀತಿಗಳು ಮತ್ತು ಕಾನೂನುಗಳ ಜಾರಿ ಹಾಗು ತೆರಿಗೆ ಸರಳೀಕರಣ ಸೇರಿ ವಿವಿಧ ಮೂಲಭೂತ ಸೌಲಭ್ಯಗಳ ಈಡೇರಿಕೆಗೆ ಮನವಿ ಸಲ್ಲಿಸಿದ್ದಾರೆ.

ಅಲ್ಲದೇ, ಕೇಂದ್ರ ಸರ್ಕಾರ ಹಾಗೂ ಸಂಬಂಧಿಸಿದ ಇಲಾಖಾವಾರ ಸಚಿವರು ಮತ್ತು ಅಧಿಕಾರಿಗಳ ಮೇಲೆ ಒತ್ತಡ ಹೇರಿ ಜಿಲ್ಲೆಯ ಸರ್ವಾಂಗೀಣ ಅಭಿವೃದ್ಧಿಗಾಗಿ ಫೇಡರೇಷನ್ ಆಫ್ ಇಂಡಿಯನ್ ಚೇಂಬರ್ಸ್ ಬೆಂಬಲ ನೀಡಬೇಕು ಎಂದು ಮನವಿ ಮಾಡಿದ್ದಾರೆ.

ಫೆಡರೇಷನ್ ಆಫ್ ಇಂಡಿಯನ್ ಚೇಂಬನ ಅಧ್ಯಕ್ಷರಾದ ಹರ್ಷವರ್ಧನ್ ಅಗವಾಲ್, ಪ್ರಸ್ತಾವಿತ ಅಧ್ಯಕ್ಷರಾದ ಅನಂತ ಗೋಯಂಕ್, ಎಕೆಸಿಸಿಐ ಬೆಂಗಳೂರಿನ ಅಧ್ಯಕ್ಷರಾದ ಶ್ರೀಮತಿ ಉಮಾರೆಡ್ಡಿ, ಕರ್ನಾಟಕ ಚೇಂಬರ್ ಆಫ್ ಕಾಮನ ಅಧ್ಯಕ್ಷರಾದ ಜಿ.ಕೆ. ಆದಪ್ಪಗೌಡರ್ ಹಾಗೂ ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ನಿಕಟಪೂರ್ವ ಅಧ್ಯಕ್ಷರಾದ ಯಶವಂತರಾಜ್ ನಾಗಿರೆಡ್ಡಿ, ಹಿರಿಯ ಉಪಾಧ್ಯಕ್ಷರಾದ ಎಸ್.ದೊಡ್ಡನಗೌಡ, ಜಂಟಿ ಕಾರ್ಯದರ್ಶಿಗಳಾದ, ವಿ.ರಾಮಚಂದ್ರ, ಖಜಾಂಚಿಗಳಾದ ನಾಗಳ್ಳಿ ರಮೇಶ್, ಕಾರ್ಯಕಾರಿ ಸಮಿತಿ ಸದಸ್ಯರಾದ ಸಿಎ ಕೆ. ರಾಜಶೇಖರ ಅವರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

# ಡಿಪ್ಲೋಮಾ ಮ್ಯಾನೇಜ್‌ಮೆಂಟ್ ಸಂಸ್ಥೆಯಲ್ಲಿ ತರಬೇತಿ: ಪ್ರವೇಶಕ್ಕಾಗಿ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:

ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳದಿಂದ ಕಾಯನಿರ್ವಹಿಸುವ ಕಲಬುರಗಿಯ ಕರ್ನಾಟಕ ಇನ್‌ಸ್ಟಿಟ್ಯೂಟ್ ಕೋ-ಆಪರೇಟಿವ್ ಮ್ಯಾನೇಜ್‌ಮೆಂಟ್ ಸಂಸ್ಥೆಯಲ್ಲಿ ತರಬೇತಿ ಪ್ರವೇಶಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ.

ಈ ಸಂಸ್ಥೆಯ ಮೂಲಕ ಸಹಕಾರ ಸಂಘ ಸಂಸ್ಥೆ, ಸಹಕಾರ ಇಲಾಖೆ, ಸಹಕಾರ ಲೆಕ್ಕಪರಿಶೋಧನಾ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ಹಾಗೂ ಖಾಸಗಿ ಅಭ್ಯರ್ಥಿಗಳಿಗೆ 6 ತಿಂಗಳು/180 ದಿನಗಳ ಅವಧಿಯ 'ಡಿಪ್ಲೋಮಾ ಇನ್ ಕೋ-ಆಪರೇಟಿವ್ ಮ್ಯಾನೇಜ್‌ಮೆಂಟ್' ತರಬೇತಿ ನೀಡಲಾಗುತ್ತಿದ್ದು, 2026ರ ಜನವರಿಯಿಂದ ಪ್ರಾರಂಭವಾಗಲಿವೆ. ತರಬೇತಿ ಪಡೆಯಲಿಚ್ಚಿಸುವ ಅರ್ಹ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದಾಗಿದೆ.

ತರಬೇತಿ ಪಡೆಯಲಿಚ್ಚಿಸುವ ಅಭ್ಯರ್ಥಿಗಳು ಸಹಕಾರ ಸಂಘ, ಸಹಕಾರ ಇಲಾಖೆ, ಸಹಕಾರ ಲೆಕ್ಕಪರಿಶೋಧನಾ ಇಲಾಖೆಯಲ್ಲಿ ವೇತನ ಪಡೆಯುವ ನೌಕರರಾಗಿರಬೇಕು. ಖಾಸಗಿ ಅಭ್ಯರ್ಥಿಗಳಿಗೆ ನಿಯಮಿತವಾಗಿ ಅವಕಾಶ ಕಲ್ಪಿಸಲಾಗಿದೆ. ವಯೋಮಿತಿ 16 ವರ್ಷ ದಾಟಿದವರಾಗಿರಬೇಕು. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ಶೇ.18 ರಷ್ಟು ಸ್ಥಾನಗಳನ್ನು ತರಬೇತಿಗಾಗಿ ಮೀಸಲಿರಿಸಲಾಗಿದೆ. ಕನಿಷ್ಠ ವಿದ್ಯಾರ್ಹತೆ ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು. ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಅನುತ್ತೀರ್ಣರಾಗಿ, ಸಹಕಾರಿ ಸಂಘಗಳಲ್ಲಿ ಒಂದು ವರ್ಷಕ್ಕಿಂತ ಮೇಲ್ಪಟ್ಟು ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಯೂ ಸಹ ತರಬೇತಿ ಪಡೆಯಲು ಅರ್ಹರಾಗಿರುತ್ತಾರೆ. ಈ ತರಬೇತಿಯಲ್ಲಿ ಅಭ್ಯರ್ಥಿಗಳಿಗೆ ಮಾಹೆಯಾನ ರೂ.500 ಶಿಷ್ಯವೇತನ ನೀಡಲಾಗುವುದು.

ನಿರುದ್ಯೋಗಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ "6 ತಿಂಗಳು/180 ದಿನಗಳ ವಿಶೇಷ "ಡಿಪ್ಲೋಮಾ ಇನ್ ಕೋ-ಆಪರೇಟಿವ್ ಮ್ಯಾನೇಜ್‌ಮೆಂಟ್" ತರಬೇತಿಯನ್ನು ಸಹ ನೀಡಲಾಗುವುದು. ಈ ವರ್ಗಕ್ಕೆ ಸೇರಿದ ಅಭ್ಯರ್ಥಿಗಳ ಪಟ್ಟಿಯನ್ನು ಆಯಾ ಜಿಲ್ಲಾ ಸಹಕಾರ ಸಂಘಗಳ ಉಪ ನಿಬಂಧಕರವರ ಮೂಲಕ ಅಥವಾ ವ್ಯವಸ್ಥಾಪಕ ನಿರ್ದೇಶಕರು, ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್‌ಗಳ ಮೂಲಕ ಅರ್ಜಿ ಸಲ್ಲಿಸಬಹುದು. ಅಭ್ಯರ್ಥಿಗಳು ಕನಿಷ್ಠ ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು. ವಯೋಮಿತಿ 16 ವರ್ಷಗಳಾಗಿರಬೇಕು. ಗರಿಷ್ಠ 30 ವರ್ಷಗಳು ಮೀರಿರಬಾರದು. ಈ ಅಭ್ಯರ್ಥಿಗಳಿಗೆ ಮಾಹೆಯಾನ ರೂ.600 ಶಿಷ್ಯವೇತನ ನೀಡಲಾಗುವುದು.

ಡಿ.ಸಿ.ಎಂ ತರಬೇತಿಯ ಅರ್ಜಿ ನಮೂನೆ ಮತ್ತು ವಿವರಣಾ ಪುಸ್ತಕವನ್ನು ಕಲಬುರಗಿ ತರಬೇತಿ ಸಂಸ್ಥೆಯಿಂದ ಹಾಗೂ ತರಬೇತಿ ಸಂಸ್ಥೆಯ ಕಾರ್ಯವ್ಯಾಪ್ತಿಯಲ್ಲಿ ಬರುವ ಜಿಲ್ಲಾ ಸಹಕಾರ ಯೂನಿಯನ್‌ಗಳಲ್ಲಿ (ಬೀದರ, ಕಲಬುರಗಿ, ಯಾದಗಿರಿ, ರಾಯಚೂರು, ಕೊಪ್ಪಳ ಮತ್ತು ಹೊಸಪೇಟೆ) ಪಡೆಯಬಹುದು.

ಅರ್ಜಿ ಪಡೆಯುವ ಮತ್ತು ಕಳುಹಿಸುವ ವಿಳಾಸ: ಪ್ರಾಂಶುಪಾಲರು ಕರ್ನಾಟಕ ಇನ್‌ಸ್ಟಿಟ್ಯೂಟ್ ಆಫ್ ಕೋ-ಆಪರೇಟಿವ್ ಮ್ಯಾನೇಜ್‌ಮೆಂಟ್,

ಆದರ್ಶನಗರ, ಪ್ರಗತಿ ಕಾಲೋನಿ, ಸೇಡಂ ರಸ್ತೆ, ಕಲಬುರಗಿ-585105. ಹೆಚ್ಚಿನ ಮಾಹಿತಿಗಾಗಿ ದೂ.08472-245340, ಮೊ.9916726886, ಮೊ.9742307153, ಮೊ.9113916753 ಗೆ ಸಂಪರ್ಕಿಸಬಹುದು ಎಂದು ಕಲಬುರಗಿ ತರಬೇತಿ ಸಂಸ್ಥೆಯ ಪ್ರಾಂಶುಪಾಲರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕನ್ನಡ ಮತ್ತು ಸಂಸ್ಕೃತಿ ಇಲಾಖೆ : ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ:ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ 2025-26ನೇ ಸಾಲಿನ ಸಾಮಾನ್ಯ, ಪರಿಶಿಷ್ಠ ಜಾತಿ, ಪರಿಶಿಷ್ಠ ಪಂಗಡ ಉಪಯೋಜನೆಯಡಿ ನೋಂದಾಯಿತ ಸಂಘ-ಸಂಸ್ಥೆಗಳಿಗೆ ಧನಸಹಾಯ, ಕಲಾವಿದರಿಗೆ ವಾದ್ಯ ಪರಿಕರ ಮತ್ತು ವೇಷ ಭೂಷಣಗಳ ಖರೀದಿಗೆ ಹಾಗೂ ಚಿತ್ರಕಲೆ/ಶಿಲ್ಪ ಕಲಾಕೃತಿಗಳ ಪ್ರದರ್ಶನಕ್ಕೆ ಸಹಾಯಧನ ನೀಡಲು ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಿ.ನಾಗರಾಜ ಅವರು ತಿಳಿಸಿದ್ದಾರೆ.

ರಾಜ್ಯ ಹಾಗೂ ಹೊರ ರಾಜ್ಯಗಳಲ್ಲಿ ಕ್ರಿಯಾತ್ಮಕ ಸಾಂಸ್ಕೃತಿಕ ಚಟುವಟಿಕೆಗಳ ಮೂಲಕ ನಾಡಿನ ಭಾಷಾ ಸಂವರ್ಧನೆ, ಕಲೆ, ಸಾಹಿತ್ಯ, ಸಂಗೀತ, ಜಾನಪದ, ನೃತ್ಯ ಕಲಾ ಪ್ರಕಾರಗಳನ್ನು ಉಳಿಸಿ ಬೆಳೆಸುವ ಸಲುವಾಗಿ ಕಾರ್ಯ ನಿರ್ವಹಿಸುತ್ತಿರುವ ನೋಂದಾಯಿತ ಸಂಘ-ಸಂಸ್ಥೆಗಳು, ಕಲಾವಿದರು ಆನ್‌ಲೈನ್ ವೆಬ್‌ಸೈಟ್ Sevasindhu.karnataka.gov.in ಪೋರ್ಟಲ್ ಮೂಲಕ ಅರ್ಜಿ ಸಲ್ಲಿಸಬಹುದು. ಅರ್ಜಿ ಸಲ್ಲಿಸಲು ಡಿ.30 ಕೊನೆಯ ದಿನವಾಗಿದೆ. ಸರ್ಕಾರದ ಆದೇಶ ಸಂಖ್ಯೆ ಕಸಂವಾ 280 ಕಸದ 2024 (ಭಾ-1) ಅ.31 ರ ದಿನಾಂಕದ ಮಾರ್ಗಸೂಚಿಯನ್ನು ಸೇವಾಸಿಂಧು ಪೋರ್ಟಲ್ ಹಾಗೂ ಇಲಾಖೆಯ ವೆಬ್‌ಸೈಟ್ www.kannadasiri.karnataka.gov.in ನಲ್ಲಿ ನೋಡಬಹುದು.

ನಿಗದಿತ ದಿನಾಂಕದ ನಂತರ ಸಲ್ಲಿಸುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ ಹಾಗೂ ಅರ್ಜಿಗಳನ್ನು ನೇರವಾಗಿ ಇಲಾಖೆಯಲ್ಲಿ ಸ್ವೀಕರಿಸುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ ಡಾ.ರಾಜ್ ಕುಮಾರ್ ರಸ್ತೆಯ ಸಾಂಸ್ಕೃತಿಕ ಸಮುಚ್ಚಯ ಆವರಣದ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿ ಅಥವಾ ದೂ.08932-275182, 08024-410547, 08022-213530, 08022-241325, ಮೊ.8792662814, 8792662816, 9986837037, 9900337738, 9448436877, 9480197511, 9916600027 ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜಿಲ್ಲಾ ಕಲಾ ಪ್ರತಿಭೋತ್ಸವದ ವಿವಿಧ ಸ್ಪರ್ಧೆಗಳ ವಿಜೇತರ ಪಟ್ಟಿ ಪ್ರಕಟ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ:ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ನಗರದ ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರ ಹಾಗೂ ಸಾಂಸ್ಕೃತಿಕ ಸಮುಚ್ಚಯದಲ್ಲಿ ಆಯೋಜಿಸಿದ್ದ ಜಿಲ್ಲಾ ಮಟ್ಟದ ಕಲಾ ಪ್ರತಿಭೋತ್ಸವದ ಬಾಲ ಪ್ರತಿಭೆ, ಕಿಶೋರ ಪ್ರತಿಭೆ, ಯುವ ಪ್ರತಿಭೆ (ಏಕ ವ್ಯಕ್ತಿ) ಮತ್ತು ನಾಟಕ-ಸಮೂಹ ಕಲಾ ಪ್ರಕಾರದಲ್ಲಿ ನಡೆದ ಸ್ಪರ್ಧೆಗಳಲ್ಲಿ ಪ್ರಥಮ, ದ್ವಿತೀಯ ಹಾಗೂ ತೃತೀಯ ಸ್ಥಾನ ಪಡೆದ ವಿಜೇತರ ಪಟ್ಟಿಯನ್ನು ಪ್ರಕಟಿಸಲಾಗಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಿ.ನಾಗರಾಜ ಅವರು ತಿಳಿಸಿದ್ದಾರೆ.

ವಿಜೇತರ ಪಟ್ಟಿ: ಬಾಲಪ್ರತಿಭೆ ವಿಭಾಗ:

ಶಾಸ್ತ್ರೀಯ ನೃತ್ಯ ಸ್ಪರ್ಧೆಯಲ್ಲಿ ಪ್ರಥಮ ಬಳ್ಳಾರಿಯ ದೀಕ್ಷಾ ಯಂ-ಡಿಗೇರಿ, ದ್ವಿತೀಯ ಗುಣಸಿಂಧು ಕೆ, ತೃತೀಯ ಹಾರಿಕ ಜಕ್ಕಾ.

ಸುಗಮ ಸಂಗೀತ ಸ್ಪರ್ಧೆಯಲ್ಲಿ ಪ್ರಥಮ ಬಳ್ಳಾರಿಯ ಎಂ.ಕೆ.ಸಿಂಚನ, ದ್ವಿತೀಯ ಸಮನ್ವಿತ.ಸಿ.ಎಂ., ತೃತೀಯ ಜಯಂತ್.ವೈ.

ಜಾನಪದಗೀತೆ ಸ್ಪರ್ಧೆಯಲ್ಲಿ ಪ್ರಥಮ ಸಂಡೂರಿನ ಸುಪ್ರಿಯಾ, ದ್ವಿತೀಯ ಕುರುಗೋಡಿನ ಎಚ್.ವಿ.ಗಾಯಿತ್ರಿ, ತೃತೀಯ ಸಂಡೂರು ತಾಲ್ಲೂಕಿನ ತಾರನಗರದ ಎ.ಕೆ.ಕುಶಾಲ್ ಕುಮಾರ್.

ಚಿತ್ರಕಲಾ (ಸ್ವಕಲ್ಪಿತ) ಸ್ಪರ್ಧೆಯಲ್ಲಿ ಪ್ರಥಮ ಸಂಡೂರಿನ ಪ್ರತ್ಯೂಶಾ ಎಂ.ಎಂ., ದ್ವಿತೀಯ ಬಳ್ಳಾರಿಯ ಅನ್ ಮರಿಯ ಕೆ.ಟಿ., ತೃತೀಯ ಕುರುಗೋಡಿನ ಶ್ರೀರಕ್ಷಾ.

ಹಿಂದೂಸ್ತಾನಿ/ಕರ್ನಾಟಕ ಶಾಸ್ತ್ರೀಯ ವಾದ್ಯ ಸ್ಪರ್ಧೆಯಲ್ಲಿ ಪ್ರಥಮ ಬಳ್ಳಾರಿಯ ಕವೀಂದ್ರ ಜೆ., ದ್ವಿತೀಯ ವೈಭವಮೂರ್ತಿ ವಿ., ತೃತೀಯ ಸಂಡೂರಿನ ಅಧಿತಿ ಆರ್.ವಿ.

ಹಿಂದೂಸ್ತಾನಿ/ ಕರ್ನಾಟಕ ಶಾಸ್ತ್ರೀಯ ಸಂಗೀತ ಸ್ಪರ್ಧೆಯಲ್ಲಿ ಪ್ರಥಮ ಬಳ್ಳಾರಿಯ ಜಯಲಕ್ಷ್ಮೀ ಎಂ.ಎಸ್., ದ್ವಿತೀಯ ಕಂಪ್ಲಿಯ ಕೆ.ಎಂ.ಶ್ರೀರಕ್ಷಾ, ತೃತೀಯ ಬಳ್ಳಾರಿಯ ಮನ್ವಿತ ಎ ಕರಾಂತ್.

ಕಿಶೋರ ಪ್ರತಿಭೆ ವಿಭಾಗ:

ಶಾಸ್ತ್ರೀಯ ನೃತ್ಯ ಸ್ಪರ್ಧೆಯಲ್ಲಿ ಪ್ರಥಮ ಸಂಗನಕಲ್ಲಿನ ಹೆಚ್.ಎಂ.ಶುಭಾನ್ವಿತ, ದ್ವಿತೀಯ ಬಳ್ಳಾರಿಯ ದಾಸ ಪ್ರವಲ್ಲಿಕ, ತೃತೀಯ ದೇವಿರಮ್ಮ ಆರ್.

ಸುಗಮ ಸಂಗೀತ ಸ್ಪರ್ಧೆಯಲ್ಲಿ ಪ್ರಥಮ ಕುರುಗೋಡಿನ ಕೆ.ಪ್ರೇಮ, ದ್ವಿತೀಯ ಕುರುಗೋಡು ತಾಲ್ಲೂಕಿನ ವದ್ದಟ್ಟಿಯ ಗೀತಾ, ತೃತೀಯ ಬಳ್ಳಾರಿಯ ಮೇಘನ ಕೆ.ಎಸ್.

ಜಾನಪದ ಗೀತೆ ಸ್ಪರ್ಧೆಯಲ್ಲಿ ಪ್ರಥಮ ಕಂಪ್ಲಿ ತಾಲ್ಲೂಕಿನ ಮೆಟ್ರಿಯ ಮುದ್ದಮ್ಮ, ದ್ವಿತೀಯ ಕುರುಗೋಡಿನ ಹೆಚ್.ಶ್ವೇತಾ, ತೃತೀಯ ಕಾಕರ್ಲತೋಟದ ಸಹನಾ.

ಚಿತ್ರಕಲಾ (ಸ್ವಕಲ್ಪಿತ) ಸ್ಪರ್ಧೆಯಲ್ಲಿ ಪ್ರಥಮ ಬಳ್ಳಾರಿಯ ಕಂಡಿ ಸ್ವಸ್ತಿಕಾ ರೆಡ್ಡಿ, ದ್ವಿತೀಯ ಸಾಯಿ ಭಾನು ಪ್ರಕಾಶ್.ಕೆ., ತೃತೀಯ ಕುರುಗೋಡಿನ ಸೃಷ್ಟಿ ಎಸ್ ಮೇಟಿ.

ಹಿಂದೂಸ್ತಾನಿ/ಕರ್ನಾಟಕ ಶಾಸ್ತ್ರೀಯ ವಾದ್ಯ ಸ್ಪರ್ಧೆಯಲ್ಲಿ ಪ್ರಥಮ ಬಳ್ಳಾರಿಯ ಕೊಳಗಲ್ ಮೇಧಾ ರಾಮ್, ದ್ವಿತೀಯ ಕುರುಗೋಡು ತಾಲ್ಲೂಕಿನ ದಮ್ಮೂರು ಕಗ್ಗಲ್‌ನ ಕೆ.ವೀರ ಪಂಚಾಕ್ಷರಿ, ತೃತೀಯ ಬಳ್ಳಾರಿಯ ಸುದರ್ಶನ್ ಟಿ.

ಹಿಂದೂಸ್ತಾನಿ/ಕರ್ನಾಟಕ ಶಾಸ್ತ್ರೀಯ ಸಂಗೀತ ಸ್ಪರ್ಧೆಯಲ್ಲಿ ಪ್ರಥಮ ಬಳ್ಳಾರಿಯ ಎನ್.ಆಯುಶ್, ದ್ವಿತೀಯ ಮೇಘನ ವಿ.,

ಯುವ ಪ್ರತಿಭೆ ವಿಭಾಗ:

ಶಾಸ್ತ್ರೀಯ ನೃತ್ಯ ಸ್ಪರ್ಧೆಯಲ್ಲಿ ಪ್ರಥಮ ಬಳ್ಳಾರಿಯ ಪಿ.ಭವ್ಯ, ದ್ವಿತೀಯ ಸುಪ್ರಿಯ, ತೃತೀಯ ಕಂಪ್ಲಿಯ ಎಸ್.ಸಂಗೀತ ಸನಾಪುರ.

ಸುಗಮ ಸಂಗೀತ ಸ್ಪರ್ಧೆಯಲ್ಲಿ ಪ್ರಥಮ ಬಳ್ಳಾರಿಯ ಪುಟ್ಟರಾಜ ಹಿರೇಮಠ, ದ್ವಿತೀಯ ಸಂಡೂರು ತಾಲ್ಲೂಕಿನ ಬನ್ನಿಹಟ್ಟಿಯ ಶರಣಬಸವ ಹೆಚ್., ತೃತೀಯ ಸಂಡೂರಿನ ಮರಿಯಪ್ಪ ಡಿ.

ಚಿತ್ರಕಲಾ (ಸ್ವಕಲ್ಪಿತ) ಸ್ಪರ್ಧೆಯಲ್ಲಿ ಪ್ರಥಮ ಬಳ್ಳಾರಿಯ ಮಂಗಲಿ ನರೇಂದ್ರ, ದ್ವಿತೀಯ ರಚನಾ, ತೃತೀಯ ಭಾರ್ಗವಿ.

ಹಿಂದೂಸ್ತಾನಿ/ಕರ್ನಾಟಕ ಶಾಸ್ತ್ರೀಯ ವಾದ್ಯ ಸ್ಪರ್ಧೆಯಲ್ಲಿ ಪ್ರಥಮ ಬಳ್ಳಾರಿ ಯೋಗೇಶ್ ಬಣಗಾರ.

ಹಿಂದೂಸ್ತಾನಿ/ಕರ್ನಾಟಕ ಶಾಸ್ತ್ರೀಯ ಸಂಗೀತ ಸ್ಪರ್ಧೆಯಲ್ಲಿ ಪ್ರಥಮ ಬಳ್ಳಾರಿಯ ತಸ್ಮಯ ಅನ್ನಪೂರ್ಣ, ದ್ವಿತೀಯ ಸಂಡೂರಿನ ಸೊಕ್ಕೆ ಸಿದ್ದೇಶ, ತೃತೀಯ ಬಳ್ಳಾರಿಯ ವರ್ಷ ಜೆ.ಸಿ.

ನನ್ನ ಮೆಚ್ಚಿನ ಸಾಹಿತಿ (ಆಶು ಭಾಷಣ) ಸ್ಪರ್ಧೆಯಲ್ಲಿ ಪ್ರಥಮ ಸಂಡೂರಿನ ಗಂಗಾಬಿಕ, ದ್ವಿತೀಯ ಬಳ್ಳಾರಿಯ ಹೆಚ್.ಎನ್.ಚೈತ್ರ, ತೃತೀಯ ಸಂಡೂರಿನ ಕೃಷ್ಣವೇಣಿ.

ಸಮೂಹ ಸ್ಪರ್ಧೆ ವಿಭಾಗ:

ನಾಟಕ ಸ್ಪರ್ಧೆಯಲ್ಲಿ ಪ್ರಥಮ ಬಳ್ಳಾರಿಯ ಸ.ಸ.ಅ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಶ್ರೀಧರ ಎಂ.ಆರ್., ದ್ವಿತೀಯ ಸಿರುಗುಪ್ಪ ತಾಲ್ಲೂಕಿನ ಸಿರಿಗೇರಿಯ ಧಾತ್ರಿ ರಂಗ ಸಂಸ್ಥೆಯ ಜಿ.ಎಂ.ವಿಜಯಕುಮಾರ್, ವಿಜಯನಗರ ಶ್ರೀಕೃಷ್ಣದೇವರಾಯ ವಿವಿಯ ಅನಿಲ್ ಹೆಚ್ ತೃತೀಯ ಸ್ಥಾನ ಪಡೆದಿದ್ದಾರೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜಿಲ್ಲಾ ಮಟ್ಟದ ಟಾಸ್ಕ್ ಪೋರ್ಸ್ ಸಭೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ: ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಡಿ ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮ, ಕೆ.ಪಿ.ಎಂ.ಇ ಕಾಯ್ದೆ, ಜಿಲ್ಲಾ ಅಂಧತ್ವ ನಿವಾರಣಾ ಕಾರ್ಯಕ್ರಮಗಳ ಕುರಿತು ವಿವಿಧ ಇಲಾಖೆಗಳ ನೇತೃತ್ವದಲ್ಲಿ ಜಿಲ್ಲಾ ಮಟ್ಟದ ಟಾಸ್ಕ್ ಪೋರ್ಸ್ ಸಭೆಯನ್ನು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಡಿ.02 ರಂದು ಬೆಳಿಗ್ಗೆ 10.30 ಗಂಟೆಗೆ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಆಯೋಜಿಸಲಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ ಬಾಬು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಆಕ್ಷೇಪಣೇಗಳಿಗೆ ಆಹ್ವಾನ

ಬಳ್ಳಾರಿ,ನ:ಮಹಾನಗರ ಪಾಲಿಕೆ ವ್ಯಾಪ್ತಿಯ ವಾರ್ಡ್ ನಂ.37 ರ ಎಸ್‌ಪಿ ವೃತ್ತಕ್ಕೆ ಶ್ರೀ ಮಹರ್ಷಿ ವಾಲ್ಮೀಕಿ ವೃತ್ತ ಎಂದು ನಾಮಕರಣ ಮಾಡಲು ಹಾಗೂ ವೃತ್ತದಲ್ಲಿ ಶ್ರೀ ಮಹರ್ಷಿ ವಾಲ್ಮೀಕಿ ಪುತ್ಥಳಿ ಸ್ಥಾಪನೆ ಮಾಡಲು ಉದ್ದೇಶಿಸಲಾಗಿದ್ದು, ಸಾರ್ವಜನಿಕರಿಂದ ಸಲಹೆ, ಆಕ್ಷೇಪಣೆಗಳಿದ್ದಲ್ಲಿ ಪ್ರಕಟಣೆಗೊಂಡ 30 ದಿನಗಳೊಳಗಾಗಿ ಲಿಖಿತವಾಗಿ ಮಹಾನಗರ ಪಾಲಿಕೆ ಕಚೇರಿಗೆ ಸಲ್ಲಿಸಬಹುದು.

ನಿಗದಿತ ಅವಧಿಯೊಳಗೆ ಯಾವುದೇ ಆಕ್ಷೇಪಣೆಗಳು ಸಲ್ಲಿಕೆಯಾಗದೇ ಇದ್ದಲ್ಲಿ ಸರ್ಕಾರದ ಸುತ್ತೋಲೆಯ ಪ್ರಕಾರ ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದು ಮಹಾನಗರ ಪಾಲಿಕೆಯ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿದ್ಯಾರ್ಥಿಗಳಿಗೆ ಬೇಕು ವೈಜ್ಞಾನಿಕ ಮನೋಭಾವ

• ಮಲ್ಲಮ್ಮ ನುಡಿ ವಾರ್ತೆ

**ಹುಣಸೂರು:** ವಿದ್ಯಾರ್ಥಿಗಳ ಸೃಜನಶೀಲ ಪ್ರದರ್ಶನಗಳನ್ನು ಶ್ಲಾಘಿಸಿದರು. ವಿದ್ಯಾರ್ಥಿಗಳು ವಿಭಿನ್ನ ವಿಷಯಗಳ ಆಧಾರದ ಮೇಲೆ ತಯಾರಿಸಿದ ಮಾದರಿಗಳು, ಪೋಸ್ಟರ್‌ಗಳು ಮತ್ತು ಇನ್ಫೋಗ್ರಾಫಿಕ್‌ಗಳನ್ನು ಉತ್ಸಾಹಭರಿತರಾಗಿ ಪ್ರದರ್ಶಿಸಿದರು ಸಂತೋಷ ವ್ಯಕ್ತಪಡಿಸಿದ್ದಾರೆ ಎಂದು ಶಿಕ್ಷಣಾಧಿಕಾರಿ ಎಸ್ಪಿ ಪಿ ಮಹದೇವಸ್ವಾಮಿ ತಿಳಿಸಿದರು.

ನಗರ ಶಬ್ಬೀರ್ ನಗರ ಹಬೀಬ್ ನಗರಸುಫ್ಫಾ ಪಬ್ಲಿಕ್ ಸ್ಕೂಲ್ ದ್ವೈವಾರ್ಷಿಕ ಶಾಲಾ ಪ್ರದರ್ಶನ 'ರಿಫ್ಲೆಕ್ಷನ್ ಅನ್ನು ಶಾಲಾ ಆವರಣದಲ್ಲಿ ಅದ್ದೂರಿಯಾಗಿ ಆಯೋಜಿಸಿತು. ದಿನವಿಡೀ ನಡೆದ ಕಾರ್ಯಕ್ರಮದ ಉದ್ದೇಶಿಸಿ ಮಾತನಾಡಿ ಪೋಷಕರು ಮತ್ತು ಸಂದರ್ಶಕರು ಮಕ್ಕಳ ಸೃಜನಶೀಲತೆ, ಪ್ರತಿಭೆ ಮತ್ತು ಹೊಸತನವನ್ನು



ನೋಡುವುದಕ್ಕಾಗಿ ಪ್ರದರ್ಶನಕ್ಕೆ ಹರಿದುಬಂದರು ಎಂದು ತಿಳಿಸಿದರು. ವಿದ್ಯಾರ್ಥಿಗಳು ಕಲಿಕಾ ಸಮಯದಲ್ಲಿ ಪ್ರತಿ ವಿಷಯವನ್ನು ವೈಜ್ಞಾನಿಕ ತಳಮಟ್ಟದಿಂದ ರೂಡಿಸಿಕೊಳ್ಳಬೇಕು ಹಲವು ಸಮಸ್ಯೆಗಳನ್ನು ನಮ್ಮ ಕಣ್ಣ ಮುಂದೆ ಇದ್ದರೂ ವೈಜ್ಞಾನಿಕ ಬೆಲೆ ತಿಳಿದೇ ನಾವು ಸಮಯ ವ್ಯರ್ಥ ಮಾಡುತ್ತೇವೆ ಆದ್ದರಿಂದ ಕೆಲವು ವಿಚಾರಗಳನ್ನು ನಾವು ಕುಲಂಕುಷಕವಾಗಿ ಅಧ್ಯಯನ ಮಾಡಿ ತಿಳಿದುಕೊಳ್ಳಬೇಕು ಎಂದರು


ನಂತರ ಕಾರ್ಯಕ್ರಮದಲ್ಲಿ ಶಿಕ್ಷಣಾಧಿಕಾರಿ ಎಸ್ ಪಿ ಮಹದೇವಸ್ವಾಮಿ ರವರಿಗೆ ನೊಬೆಲ್ ಎಜುಕೇಶನ್ ಟ್ರಸ್ಟ್ ವತಿಯಿಂದ ಸನ್ಮಾನಿಸಿ ಗೌರವಿಸಲಾಯಿತು.

ನೋಬಲ್ ಎಜುಕೇಶನ್ಟ್ರಸ್ಟ್ ಅಧ್ಯಕ್ಷರು ಅಲ್ತಾಫ್ ಅಹಮದ್ ಮಾತನಾಡಿ, ಪೋಷಕರಿಗೆ ವಿದ್ಯಾರ್ಥಿಗಳಲ್ಲಿರುವ ಪ್ರತಿಭೆಯನ್ನು ಸದಾ ಬೆಳೆಸಿಕೊಳ್ಳುವಂತೆ ಅವರ ಪ್ರಯತ್ನಗಳಿಗೆ ಬೆಂಬಲಿಯಾಗಿರುವಂತೆ ಮನವಿ ಮಾಡಿದರು. ಸಂಸ್ಥೆಯ ಮುಖ್ಯಸ್ಥರಾದ ಹಾಗೂ ಸದಸ್ಯರಾದ ಮುಖ್ಯ ಅತಿಥಿ ಹಫೀಝುಲ್ಲಾ ಮಾತನಾಡಿ ವಿದ್ಯಾರ್ಥಿಗಳ ಶ್ರಮಕ್ಕೆ ಅಭಿನಂದನೆ ಸಲ್ಲಿಸಿ, ಮಕ್ಕಳ ಅರ್ಥಪೂರ್ಣ ಪ್ರದರ್ಶನಗಳನ್ನು ಮೆಚ್ಚಿದರು. ಜೊತೆಗೆ, ಪ್ರತಿಯೊಬ್ಬ ವಿದ್ಯಾರ್ಥಿಯಲ್ಲಿರುವ ಪ್ರತಿಭೆಯನ್ನು ಗುರುತಿಸಿ, ಅದನ್ನು ಪ್ರದರ್ಶನದಲ್ಲಿ ಪ್ರತಿಫಲಿಸಲು ಸಾಧ್ಯವಾಗಿಸಿದ ಶಾಲಾ ಶಿಕ್ಷಕ–ಶಿಕ್ಷಕಿಯರ ಸೇವೆಯನ್ನು ಕೂಡ ಶ್ಲಾಘಿಸಿದರು.

ಕಾರ್ಯಕ್ರಮದಲ್ಲಿ ನಡೆದ ಬಹುಮಾನ ವಿತರಣೆ ಸಮಾರಂಭದಲ್ಲಿ ವಿದ್ಯಾರ್ಥಿಗಳಿಗೆ ಗೌರವ ಸನ್ಮಾನ ಮಾಡಲಾಯಿತು. ಸಂಸ್ಥೆಯ ಮುಖ್ಯಸ್ಥರು ಬಸೀರ್ ಅಹಮದ್, ಸಯೀದ್, ಅಕ್ರಮ್ ಉದ್ದೀನ್ ಖಾನ್, ಅಜೀಝುಲ್ಲಾ, ಝೈನುಲ್ ಆಬಿದೀನ್, ಶುಐಬ್ ಅಹಮದ್, ಆಕಿಬ್ ಅಸ್‌ಫರ್, ಶಹೀರ್, ಶಬ್ಬೀರ್ ಅಹಮದ್ ಶಿಕ್ಷಕರು ಮತ್ತಿತರರು ಹಾಜರಿದ್ದರು.

## ಸರ್ಕಾರಿ ಕೆಲಸದಲ್ಲಿ ಮಾದರಿ ಸೇವೆಯೇ ಇತರರಿಗೆ ಪ್ರೇರಣೆ: ಉಮೇಶ್ ಜಾಧವ್

### ಜನಸ್ನೇಹಿ ಇಂಜಿನಿಯರ್ ಕೃಷ್ಣ ಅಗ್ನಿಹೋತ್ರಿಗೆ ಬೀಳ್ಕೊಡುಗೆ




• ಮಲ್ಲಮ್ಮ ನುಡಿ ಕಲಬುರಗಿ

ಸರಕಾರಿ ವೃತ್ತಿಯಲ್ಲಿ ಸೂಕ್ಷ್ಮ ಸವಾಲುಗಳನ್ನು ಎದುರಿಸಿ ನಿಯಮದ ಚೌಕಟ್ಟಿನಲ್ಲಿ ಮಾದರಿಯಾಗಿ ಕೆಲಸ ಮಾಡಿ ನಿವೃತ್ತಿ ಹೊಂದಿದರೆ ಅದು ಇತರ ನೌಕರರಿಗೆ ಪ್ರೇರಣೆಯಾಗಲಿದೆ ಎಂದು ಮಾಜಿ ಲೋಕಸಭಾ ಸದಸ್ಯರಾದ ಡಾ. ಉಮೇಶ್ ಜಾಧವ್ ಹೇಳಿದರು.

ಬೆಂಗಳೂರಿನಲ್ಲಿ ಲೋಕೋಪಯೋಗಿ ಇಲಾಖೆಯಲ್ಲಿ ಸಂಪರ್ಕ ಮತ್ತು ಕಟ್ಟಡಗಳ ದಕ್ಷಿಣ ವಲಯದ ಇಂಜಿನಿಯರಿಂಗ್ ವಿಭಾಗದಲ್ಲಿ ಮುಖ್ಯ ಇಂಜಿನಿಯರಾಗಿ ಸೇವೆ ಸಲ್ಲಿಸಿದ ಮೂಲತಃ ಚಿಂಚೋಳಿಯ ಕೃಷ್ಣ ಅಗ್ನಿಹೋತ್ರಿ ಇಲಾಖೆಯಲ್ಲಿ 40 ವರ್ಷಗಳ ಸೇವೆಯ ನಂತರ ನವೆಂಬರ್ 30ರಂದು ಸೇವೆಯಿಂದ ನಿವೃತ್ತಿಯಾಗುತ್ತಿರುವ ಸಂದರ್ಭದಲ್ಲಿ ಬೆಂಗಳೂರಿನ ಇಂಜಿನಿಯರ್ ಸಭಾಂಗಣದಲ್ಲಿ ನವೆಂಬರ್ 28ರಂದು ಶುಕ್ರವಾರ ನಡೆದ ಬೀಳ್ಕೊಡುವ ಸಮಾರಂಭದಲ್ಲಿ ಮಾತನಾಡಿ ಅಗ್ನಿಹೋತ್ರಿಯವರು ಅಂತಹ ವಿಶೇಷ ವ್ಯಕ್ತಿತ್ವ ಹೊಂದಿದ ಜನಸ್ನೇಹಿ ಇಂಜಿನಿಯರ್ ಆಗಿದ್ದರು. ಬದ್ಧತೆಯೊಂದಿಗೆ ಕಾನೂನಿನಡಿಯಲ್ಲಿ ಸೂಕ್ಷ್ಮ ಪ್ರದೇಶಗಳಲ್ಲಿ ಕೆಲಸ ಮಾಡಿ ಮಾದರಿಯಾಗಿ, ಯಾವುದೇ ಪಕ್ಷಪಾತವಿಲ್ಲದೆ ಹಾಗೂ ಕಪ್ಪು ಚುಕ್ಕೆ ಹೊಂದದೆ ನಿವೃತ್ತಿಯಾಗುತ್ತಿರುವ ಸರಳ ವ್ಯಕ್ತಿತ್ವದವರು. ಚಿಂಚೋಳಿಯಂತಹ ಪ್ರದೇಶಗಳಲ್ಲಿ ಭೂಕಂಪದ ವೇಳೆ ಮನೆ ನಿರ್ಮಾಣ ,ನೀರಾವರಿ ಯೋಜನೆಗಳಲ್ಲಿ ಕೆಲಸ ಮಾಡಿ ಜನ ಮೆಚ್ಚುಗೆ ಪಡೆದವರು. ಇಂತಹ ಅಭಿವೃದ್ಧಿ ಚಿಂತಕರು ನಿವೃತ್ತಿಯ ನಂತರ ಕೂಡ ತಮ್ಮನ್ನು ಸಮಾಜ ಸೇವೆಗೆ ಅವರು ತೊಡಗಿಸಿಕೊಳ್ಳಬೇಕು ಎಂದು ಡಾ.ಜಾಧವ್ ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಮುಖ್ಯ ಇಂಜಿನಿಯರ್ ಸಿ. ಮಂಜಪ್ಪ, ಜಂಟಿ ಕಾರ್ಯದರ್ಶಿ ನಾಗರಾಜ್, ನಿವೃತ್ತ ಕಾರ್ಯದರ್ಶಿಗಳಾದ ಸದಾಶಿವ ರೆಡ್ಡಿ, ನಿವೃತ್ತ ಮುಖ್ಯ ಇಂಜಿನಿಯರ್ ಶ್ರೀನಿವಾಸ್, ಶ್ರೀಮತಿ ಜ್ಯೋತಿ ಕೃಷ್ಣ ಅಗ್ನಿಹೋತ್ರಿ, ಪೂಜಾ ಕುಲಕರ್ಣಿ ,ರಾಘವೇಂದ್ರ ಅಗ್ನಿಹೋತ್ರಿ, ರಾಘವೇಂದ್ರ ಕುಲಕರ್ಣಿ, ಹೀರಾಬಾಯಿ ಕುಲಕರ್ಣಿ, ಶಾಸಕರಾಪ್ತ ಕಾರ್ಯದರ್ಶಿ ರಾಮಕೃಷ್ಣ, ವೆಂಕಟೇಶ್ ಹಾಗೂ ಸಿಬ್ಬಂದಿಗಳು ಆತ್ಮೀಯರಿರು ಉಪಸ್ಥಿತರಿದ್ದರು.

## ಶಿಕ್ಷಣದ ಜೊತೆಗೆ ಒಳ್ಳೆಯ ಸಂಸ್ಕಾರ ನೀಡಿ: ದೀಪಕ ರಾಜಗೋಪಾಲ

• ಮಲ್ಲಮ್ಮ ನುಡಿ ಚಿಟಗುಪ್ಪ

ಮಕ್ಕಳಿಗೆ ಶಿಕ್ಷಣದ ಜೊತೆಗೆ ಒಳ್ಳೆಯ ಹವ್ಯಾಸ, ಸಂಸ್ಕಾರ, ಸಂಸ್ಕೃತಿ ರೂಢಿಸುವುದು ಅತ್ಯವಶ್ಯಕ. ಉತ್ತಮ ಅಂಕಗಳಿಸುವ ಮೂಲಕ ಜೀವನದಲ್ಲಿ ಅತ್ಯುನ್ನತ ಸ್ಥಾನವನ್ನು ಅಲಂಕರಿಸಬೇಕೆಂದು' ವಿಶ್ವ ಹಿಂದೂ ಪರಿಷತ್ ಕರ್ನಾಟಕ ದಕ್ಷಿಣ ಪ್ರಾಂತ ಅಧ್ಯಕ್ಷರು, ಕೇಂದ್ರೀಯ ಕೋಶಾಧ್ಯಕ್ಷ ದೀಪಕ ರಾಜಗೋಪಾಲ ತಿಳಿಸಿದರು. ಪಟ್ಟಣದಲ್ಲಿ ಶುಕ್ರವಾರ ವಿಶ್ವ ಹಿಂದು ಪರಿಷತ್ ಸಂಚಾಲಿತ ಬನಶಂಕರಿ ವಿದ್ಯಾ ಮಂದಿರ ಹಾಗು ಜ್ಞಾನ ಜ್ಯೋತಿ ಪ್ರೌಢ ಶಾಲೆಯ ನೂತನ ಶಾಲಾ ಕಟ್ಟಡ ಹಾಗೂ ಆಟಲಜೀ ಸಾಂಸ್ಕೃತಿ ಭವನ ಉದ್ಘಾಟಿಸಿ ಮಾತನಾಡಿದ ಅವರು, ಶಾಲೆಯಲ್ಲಿ ಶಿಕ್ಷಕರು ಜ್ಞಾನ ನೀಡುತ್ತಾರೆ. ಮನೆಯಲ್ಲಿ ಪಾಲಕರು ಸಂಸ್ಕಾರ ನೀಡಿ, ಒಳ್ಳೆಯ ಆಹಾರ ನೀಡುವ ಮೂಲಕ ಅನಾರೋಗ್ಯಕರ ಆಹಾರಗಳಿಂದ ದೂರವಿಡಿ' ಎಂದು ಸಲಹೆ ನೀಡಿದರು. ಈ ಸಂದರ್ಭದಲ್ಲಿ ಕೇಂದ್ರ ಮಾಜಿ ಸಚಿವ ಭಗವಂತ ಖೂಬಾ, ತಡೋಳಾ ಶ್ರೀ ರಾಜೇಶ್ವರ ಶಿವಾಚಾರ್ಯರು, ವಿಹಿಪ ಉತ್ತರ ಕರ್ನಾಟಕ ಪ್ರಾಂತ ಅಧ್ಯಕ್ಷ ಲಿಂಗರಾಜಪ್ಪ ಅಪ್ಪಾ ಮಾತನಾಡಿದರು. ಹುಡಗಿ ವಿರಕ್ತ ಮಠದ ಶ್ರೀ ಚನ್ನಮಲ್ಲ ಶಿವಾಚಾರ್ಯ, ಮಾಜಿ ಶಾಸಕ ಸುಭಾಷ ಕಲ್ಲೂರ, ಸಂಸ್ಥೆಯ ಅಧ್ಯಕ್ಷೆ ಅನೀತಾ ಗುತ್ತೇದಾರ ಮುಖ್ಯ ಅತಿಥಿಗಳಾಗಿ ವಿಶ್ವ ಹಿಂದೂ ಪರಿಷತ್ ಹುಬ್ಬಳ್ಳಿ ಅಧ್ಯಕ್ಷ ಗೋವರ್ಧನರಾವ, ಕಾರ್ಯದರ್ಶಿ ಶಿವಕುಮಾರ ಬೋಳಶೆಟ್ಟಿ, ಬಿಜೆಪಿ ಮಾಜಿ ಜಿಲ್ಲಾಧ್ಯಕ್ಷ ಶಿವಾನಂದ ಮಂಠಾಳಕರ್, ಬಿಜೆಪಿ ಯುವ ಮುಖಂಡ ಸಂತೋಷ ಪಾಟೀಲ, ಸುರೇಶ, ಮನೋಹರರಾವ ಕುಲಕರ್ಣಿ, ಸೂರ್ಯಕಾಂತ ಮಠಪತಿ, ಆಕಾಶ ಗುತ್ತೆದಾರ್, ಅರವಿಂದ ಗಾದಾ, ಮೋಹನರಾವ ಘಂಟೋಜಿ, ವೀರಪಣ್ಣ ಬಬಡಿ ಸೇರಿದಂತೆ ಶಾಲೆಯ ಮುಖ್ಯ ಗುರುಗಳು ಶಿಕ್ಷಕರು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.



## ಅಕ್ಕ ಕೆಫೆಗೆ ಇಂದು ಚಾಲನೆ

• ಮಲ್ಲಮ್ಮ ನುಡಿ ಬೀದರ

ಸಂಜೀವಿನಿ–ಕರ್ನಾಟಕ ರಾಜ್ಯ ಗ್ರಾಮೀಣ ಜೀವನೋಪಾಯ ಸಂವರ್ಧನ ಸಂಸ್ಥೆ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ, ಜಿಲ್ಲಾ ಪಂಚಾಯತ, ತಾಲ್ಲೂಕ ಪಂಚಾಯತ ಬೀದರ ಸಂಯುಕ್ತಾಶ್ರಯದಲ್ಲಿ ದಿನಾಂಕ: 01–12–2025 ರಂದು ಮಧ್ಯಾಹ್ನ 2 ಗಂಟೆಗೆ ಬೀದರ ಜಿಲ್ಲಾ ಪಂಚಾಯತದಲ್ಲಿ ಅಕ್ಕ ಕೆಫೆ ಉದ್ಘಾಟನೆ ಕಾರ್ಯಕ್ರಮ ನಡೆಯಲಿದೆ.

ಕಾರ್ಯಕ್ರಮದ ಉದ್ಘಾಟನೆಯನ್ನು ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಬಿ.ಖಂಡ್ರೆ ಅವರು ಮಾಡಲಿದ್ದಾರೆ.

ಕಾರ್ಯಕ್ರಮದಲ್ಲಿ ಘನ ಉಪಸ್ಥಿತಿಯನ್ನು ಗ್ರಾಮೀಣಾಭಿವರದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಹಾಗೂ ಐಟಿ ಮತ್ತು ಬಿಟಿ ಮತ್ತು ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಪ್ರಿಯಾಂಕ್ ಖರ್ಗೆ ಹಾಗೂ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರಾದ ಶರಣಪ್ರಕಾಶ ಪಾಟೀಲ್ ಅವರುಗಳು ವಹಿಸಲಿದ್ದಾರೆ.

ಅಧ್ಯಕ್ಷತೆಯನ್ನು ಪೌರಾಡಳಿತ ಹಾಗೂ ಹಜ್ ಸಚಿವ ರಹೀಮ್ ಖಾನ್ ಅವರು ವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಬೀದರ ಲೋಕಸಭಾ ಸದಸ್ಯ ಸಾಗರ ಈಶ್ವರ ಖಂಡ್ರೆ, ಔರಾದ (ಬಿ) ಶಾಸಕ ಪ್ರಭು ಬಿ.ಚವ್ಹಾಣ್, ಬಸವಕಲ್ಯಾಣ ಶಾಸಕ ಶರಣು ಸಲಗರ, ಬೀದರ ದಕ್ಷಿಣ ಶಾಸಕ ಡಾ.ಶೈಲೇಂದ್ರ ಕೆ.ಬೆಲ್ದಾಳೆ, ಹುಮನಾಬಾದ ಶಾಸಕ, ಡಾ. ಸಿದ್ದು ಪಾಟೀಲ ಹಾಗೂ ವಿಧಾನ ಪರಿಷತ್ ಸದಸ್ಯರುಗಳಾದ ಡಾ.ಚಂದ್ರಶೇಖರ ಬಿ.ಪಾಟೀಲ, ಶಶೀಲ ಜಿ.ನಮೋಶಿ, ಭೀಮರಾವ ಬಿ.ಪಾಟೀಲ, ಡಾ.ಎಂ.ಜಿ.ಮೂಳೆ, ಕರ್ನಾಟಕ ಮೀನುಗಾರಿಕೆ ಅಭಿವೃದ್ಧಿ ನಿಗಮದ ಅಧ್ಯಕ್ಷ ಮಾಲಾ ನಾರಾಯಣರಾವ, ಅಚ್ಚುಕಟ್ಟು




ಪ್ರದೇಶಾಭಿವೃದ್ಧಿ ಪ್ರಾಧಿಕಾರ, ಕೃಷ್ಣಾ ಮೇಲ್ದಂಡೆ ಯೋಜನೆ (ಕಾಡಾ) ಭೀಮರಾಯನ ಗುಡಿ ಕಲಬುರಗಿಯ ಅಧ್ಯಕ್ಷರಾದ ಬಾಬು ಹೊನ್ನನಾಯ್ಕ, ಬೀದರ ನಗರಸಭೆ ಅಧ್ಯಕ್ಷ ಮಹಮ್ಮದ ಗೌಸ, ಬೀದರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಬಸವರಾಜ ಜಾಬಶೆಟ್ಟಿ ಅವರುಗಳು ಭಾಗವಹಿಸಲಿದ್ದಾರೆ..

ವಿಶೇಷ ಆಹ್ವಾನಿತರಾಗಿ ಸರ್ಕಾರದ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ (ಪಂಚಾಯತ್ ರಾಜ್), ಸಮಾಜ ಕಲ್ಯಾಣ ಇಲಾಖೆ ಹಾಗೂ ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು ಹಾಗೂ ಆಡಳಿತಾಧಿಕಾರಿಗಳು, ಜಿಲ್ಲಾ ಪಂಚಾಯತ ಬೀದರನ ರಂದೀಪ್ ಡಿ., ಸರ್ಕಾರದ ಕಾರ್ಯದರ್ಶಿಗಳು, ಕೌಶಲ್ಯಾಭಿವರದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯ ಮನೋಜಕುಮಾರ ಮೀನಾ, ಅಭಿಮಾನ ನಿರ್ದೇಶಕರು, ರಾಷ್ಟ್ರೀಯ ಜೀವನೋಪಾಯ ಅಭಿಯಾನ ಬೆಂಗಳೂರಿನ ಸ್ನೇಹಲ್ ಆರ್. ಅವರುಗಳು ಭಾಗವಹಿಸಲಿದ್ದಾರೆ.

## ಐಟಿಸಿ ಸಂಗೀತ ಸಮ್ಮೇಳನ ಉದ್ಘಾಟನಾ ಸಮಾರಂಭ






• ಮಲ್ಲಮ್ಮ ನುಡಿ ಬೀದರ

ಸಂಗೀತ ಕಲಾ ಮಂಡಲ ಬೀದರ ಹಾಗೂ ಐಟಿಸಿ ಸಂಗೀತ ರಿಸರ್ಚ ಅಕಾಡೆಮಿ ಕೊಲ್ಕತ್ತಾ ಇವರ ಸಂಯುಕ್ತಾಶ್ರಯದಲ್ಲಿ ಡಾ. ಚನ್ನಬಸವ ಪಟ್ಟದೇವರು ರಂಗಮಂದಿರ, ಬೀದರನಲ್ಲಿ ಜರುಗಿದ ಖಖಿಅ ಸಂಗೀತ ಸಮ್ಮೇಳನವನ್ನು ಪೂಜ್ಯ ಡಾ. ರಾಜಶೇಖರ ಶಿವಾಚಾರ್ಯರು ಜ್ಯೋತಿ ಬೆಳಗಿಸಿ ಉದ್ಘಾಟಿಸಿ ಮಾತನಾಡುತ್ತ ಬೀದರ ವಿಶ್ವ ವಿದ್ಯಾಲಯದಲ್ಲಿ ಸಂಗೀತ ವಿಭಾಗವನ್ನು ಪ್ರಾರಂಭಿಸಲು ಮನವಿ ಪತ್ರವನ್ನು ಸಲ್ಲಿಸುವ ಮೂಲಕ ಒತ್ತಡ ತರಬೇಕೆಂದು ನುಡಿದರು. ಪೂಜ್ಯ ಶ್ರೀ ಜ್ಯೋತಿರ್ಮಯಾನಂದ ಸ್ವಾಮೀಜಿಯವರು ಅಧ್ಯಕ್ಷತೆ ವಹಿಸಿದರು. ಮುಖ್ಯ ಆತಿಥಿಗಳಾಗಿ ಶಿವಶರಣಪ್ಪಾ ವಾಲಿ, ಸದಾನಂದ ಜೋಶಿ, ಪಂ. ರಾಮುಲು ಗಾದಗೆಯವರು ಭಾಗವಹಿಸಿದರು. ಪಂ.ರಾಜೇಂದ್ರಸಿಂಗ ಪವಾರ ಸ್ವಾಗತಿಸಿದರು. ಪ್ರೊ.ಎಸ್.ವಿ.ಕಲ್ಮಠ ಪ್ರಾಸ್ತಾವಿಕ ಮಾತನಾಡಿದರು. ಶ್ರೀ ಎಸ್. ಆರ್ ಸಂಗಮಕರ್ ವಂದಿಸಿದರು.

ಡಿ. ಎಸ್ ಜೋಶಿ ನಿರೂಪಿಸಿದರು. ಶ್ರೀ ಶರಣಪ್ಪ ಕಮಠಾಣೆ ಶ್ರೀಮತಿ ವಿದ್ಯಾ ಲದ್ದೆ ಕಲಾವಿದರನ್ನು ಪರಿಚಯಿಸಿದರು.

ನಂತರ ಜರುಗಿದ ಸಂಗೀತ ಕಾರ್ಯಕ್ರಮ–1ರಲ್ಲಿ ಕು. ಶ್ರೇಯಾ ಚಟರ್ಜಿ ಅವರ ಗಾಯನಕ್ಕೆ ಶ್ರೀ ಅಶೋಕ ಮುಖರ್ಜಿಯವರು ತಬಲಾ ಸಾಥ ಹಾಗೂ ಶ್ರೀ ಕೃಷ್ಣ ಮುಖೇಡಕರ್ ಹಾರ್ಮೋನಿಯಂ ಸಾಥ ನೀಡಿದರು. ನಂತರ ಜರುಗಿದ ಸಂಗೀತ ಕಾರ್ಯಕ್ರಮ–2ರಲ್ಲಿ ಅಬೀರ ಹುಸೇನ್ ಅವರು ಸರೋದ ವಾದನ ಮಾಡಿದರು. ಶ್ರೀ ವೆಂಕಟೇಶ ಡಿ.ಸಿ. ಅವರು ತಬಲಾ ಸಾಥ ನೀಡಿದರು.

## ಡಿಪ್ಲೋಮಾ ಇನ್ ಕೋ–ಆಪರೇಟಿವ್ ಮ್ಯಾನೇಜ್‌ಮೆಂಟ್‌ನಲ್ಲಿ ತರಬೇತಿ: ಪ್ರವೇಶಕ್ಕಾಗಿ ಅರ್ಜಿ ಆಹ್ವಾನ

• ಮಲ್ಲಮ್ಮ ನುಡಿ ಬಳ್ಳಾರಿ

ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳದಿಂದ ಕಾಯನಿರ್ವಹಿಸುವ ಕಲಬುರಗಿಯ ಕರ್ನಾಟಕ ಇನ್‌ಸ್ಟಿಟ್ಯೂಟ್ ಕೋ–ಆಪರೇಟಿವ್ ಮ್ಯಾನೇಜ್‌ಮೆಂಟ್ ಸಂಸ್ಥೆಯಲ್ಲಿ ತರಬೇತಿ ಪ್ರವೇಶಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ.

ಈ ಸಂಸ್ಥೆಯ ಮೂಲಕ ಸಹಕಾರ ಸಂಘ ಸಂಸ್ಥೆ, ಸಹಕಾರ ಇಲಾಖೆ, ಸಹಕಾರ ಲೆಕ್ಕಪರಿಶೋಧನಾ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ಹಾಗೂ ಖಾಸಗಿ ಅಭ್ಯರ್ಥಿಗಳಿಗೆ 6 ತಿಂಗಳು/180 ದಿನಗಳ ಅವಧಿಯ 'ಡಿಪ್ಲೋಮಾ ಇನ್ ಕೋ–ಆಪರೇಟಿವ್ ಮ್ಯಾನೇಜ್‌ಮೆಂಟ್' ತರಬೇತಿ ನೀಡಲಾಗುತ್ತಿದ್ದು, 2026ರ ಜನವರಿಯಿಂದ ಪ್ರಾರಂಭವಾಗಲಿವೆ. ತರಬೇತಿ ಪಡೆಯಲಿಚ್ಛಿಸುವ ಅರ್ಹ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದಾಗಿದೆ.

ತರಬೇತಿ ಪಡೆಯಲಿಚ್ಛಿಸುವ ಅಭ್ಯರ್ಥಿಗಳು ಸಹಕಾರ ಸಂಘ, ಸಹಕಾರ ಇಲಾಖೆ, ಸಹಕಾರ ಲೆಕ್ಕಪರಿಶೋಧನಾ ಇಲಾಖೆಯಲ್ಲಿ ವೇತನ ಪಡೆಯುವ ನೌಕರರಾಗಿರಬೇಕು. ಖಾಸಗಿ ಅಭ್ಯರ್ಥಿಗಳಿಗೆ ನಿಯಮಿತವಾಗಿ ಅವಕಾಶ ಕಲ್ಪಿಸಲಾಗಿದೆ.

ವಯೋಮಿತಿ 16 ವರ್ಷ ದಾಟಿದವರಾಗಿರಬೇಕು. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ಶೇ.18 ರಷ್ಟು ಸ್ಥಾನಗಳನ್ನು ತರಬೇತಿಗಾಗಿ ಮೀಸಲಿರಿಸಲಾಗಿದೆ.

ಕನಿಷ್ಟ ವಿದ್ಯಾರ್ಹತೆ ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು. ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಅನುತ್ತೀರ್ಣರಾಗಿ, ಸಹಕಾರಿ ಸಂಘಗಳಲ್ಲಿ ಒಂದು ವರ್ಷಕ್ಕಿಂತ ಮೇಲ್ಪಟ್ಟು ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಯೂ ಸಹ ತರಬೇತಿ ಪಡೆಯಲು ಅರ್ಹರಾಗಿರುತ್ತಾರೆ. ಈ ತರಬೇತಿಯಲ್ಲಿ ಅಭ್ಯರ್ಥಿಗಳಿಗೆ ಮಾಹೆಯಾನ ರೂ.500 ಶಿಷ್ಯವೇತನ ನೀಡಲಾಗುವುದು.

ನಿರುದ್ಯೋಗಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ "6 ತಿಂಗಳು/180 ದಿನಗಳ ವಿಶೇಷ "ಡಿಪ್ಲೋಮಾ ಇನ್ ಕೋ–ಆಪರೇಟಿವ್ ಮ್ಯಾನೇಜ್‌ಮೆಂಟ್" ತರಬೇತಿಯನ್ನು ಸಹ ನೀಡಲಾಗುವುದು. ಈ ವರ್ಗಕ್ಕೆ ಸೇರಿದ ಅಭ್ಯರ್ಥಿಗಳ ಪಟ್ಟಿಯನ್ನು ಆಯಾ ಜಿಲ್ಲಾ ಸಹಕಾರ ಸಂಘಗಳ ಉಪ ನಿಬಂಧಕರವರ ಮೂಲಕ ಅಥವಾ ವ್ಯವಸ್ಥಾಪಕ ನಿರ್ದೇಶಕರು, ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್‌ಗಳ ಮೂಲಕ ಅರ್ಜಿ ಸಲ್ಲಿಸಬಹುದು.

ಅಭ್ಯರ್ಥಿಗಳು ಕನಿಷ್ಠ ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು. ವಯೋಮಿತಿ 16 ವರ್ಷಗಳಾಗಿರಬೇಕು. ಗರಿಷ್ಠ 30 ವರ್ಷಗಳು ಮೀರಿರಬಾರದು. ಈ ಅಭ್ಯರ್ಥಿಗಳಿಗೆ ಮಾಹೆಯಾನ ರೂ.600 ಶಿಷ್ಯವೇತನ ನೀಡಲಾಗುವುದು.

ಡಿ.ಸಿ.ಎಂ ತರಬೇತಿಯ ಅರ್ಜಿ ನಮೂನೆ ಮತ್ತು ವಿವರಣಾ ಪುಸ್ತಕವನ್ನು ಕಲಬುರಗಿ ತರಬೇತಿ ಸಂಸ್ಥೆಯಿಂದ ಹಾಗೂ ತರಬೇತಿ ಸಂಸ್ಥೆಯ ಕಾರ್ಯವ್ಯಾಪ್ತಿಯಲ್ಲಿ ಬರುವ ಜಿಲ್ಲಾ ಸಹಕಾರ ಯೂನಿಯನ್‌ಗಳಲ್ಲಿ (ಬೀದರ, ಕಲಬುರಗಿ, ಯಾದಗಿರಿ, ರಾಯಚೂರು, ಕೊಪ್ಪಳ ಮತ್ತು ಹೊಸಪೇಟೆ) ಪಡೆಯಬಹುದು.

**ಅರ್ಜಿ ಪಡೆಯುವ ಮತ್ತು ಕಳುಹಿಸುವ ವಿಳಾಸ**

**ಪ್ರಾಂಶುಪಾಲರು,**

**ಕರ್ನಾಟಕ ಇನ್‌ಸ್ಟಿಟ್ಯೂಟ್ ಆಫ್ ಕೋ–ಆಪರೇಟಿವ್ ಮ್ಯಾನೇಜ್‌ಮೆಂಟ್, ಆದರ್ಶನಗರ, ಪ್ರಗತಿ ಕಾಲೋನಿ, ಸೇಡಂ ರಸ್ತೆ, ಕಲಬುರಗಿ–585105. ಹೆಚ್ಚಿನ ಮಾಹಿತಿಗಾಗಿ ದೂ.08472–245340, ಮೊ.9916726886, ಮೊ.9742307153, ಮೊ.9113916753 ಗೆ ಸಂಪರ್ಕಿಸಬಹುದು ಎಂದು ಕಲಬುರಗಿ ತರಬೇತಿ ಸಂಸ್ಥೆಯ ಪ್ರಾಂಶುಪಾಲರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.**

## ಪಾಲಿಟೆಕ್ನಿಕ್ ಕಾಲೇಜಿನಲ್ಲಿ ನೂತನ ಕಟ್ಟಡಗಳ ಲೋಕಾರ್ಪಣೆ

• ಮಲ್ಲಮ್ಮ ನುಡಿ ಔರಾದ

ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜಿನಲ್ಲಿ ಹೊಸದಾಗಿ ನಿರ್ಮಿಸಲಾದ ಸೆಮಿನಾರ್ ಹಾಲ್, ಗ್ರಂಥಾಲಯ ಹಾಗೂ ಕ್ಯಾಂಟೀನ್ ಕಟ್ಟಡಗಳಿಗೆ ಮಾಜಿ ಸಚಿವರು ಹಾಗೂ ಶಾಸಕರಾದ ಪ್ರಭು ಬಿ.ಚವ್ಹಾಣ ಅವರು ನ.29ರಂದು ಲೋಕಾರ್ಪಣೆ ಮಾಡಿದರು.

ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜಿನಲ್ಲಿ ಓದುತ್ತಿರುವ ವಿದ್ಯಾರ್ಥಿಗಳಿಗೆ ಬೋಧನಾ ಚಟುವಟಿಕೆಗಳು ನಡೆಸಲು, ಸಾಮಾಜಿಕ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ನಡೆಸಲು ಅನುಕೂಲವಾಗುವಂತೆ ಸೆಮಿನಾರ್ ಹಾಲ್ ನಿರ್ಮಿಸಿ ಕೊಡಬೇಕೆಂಬ ಬೇಡಿಕೆಯಿತ್ತು. ಹಾಗೆಯೇ ಒಳ್ಳೆಯ ಗ್ರಂಥಾಲಯ, ಕ್ಯಾಂಟೀನ್ ಹಾಗೂ ಮತ್ತಿತರೆ ಕಾಮಗಾರಿಗಳಿಗೆ ಕೆಕೆಆರ್ಡಿಬಿ ಯೋಜನೆಯಡಿ 3.29 ಕೋಟಿ ಅಂದಾಜು ಮೊತ್ತದಲ್ಲಿ ಹೊಸ ಕಟ್ಟಡ ನಿರ್ಮಿಸಲಾಗಿದೆ. ಇವುಗಳನ್ನು ಸದ್ಬಳಕೆ ಮಾಡಿಕೊಳ್ಳಬೇಕೆಂದು ತಿಳಿಸಿದರು.

ಶಿಕ್ಷಣ ಅಭಿವೃದ್ಧಿ ನನ್ನ ಪರಮ ಸಂಕಲ್ಪವಾಗಿದ್ದು ಈ ದಿಶಿಯಲ್ಲಿ ಎಲ್ಲ ರೀತಿಯ ಸಹಕಾರ ನೀಡುತ್ತೇನೆ.





ಕಾಲೇಜಿಗೆ ಇನ್ನೂ ಏನೇನು ಬೇಕು ಎಂಬುದನ್ನು ಪಟ್ಟಿ ಮಾಡಿಕೊಡಿ ಹಂತ ಹಂತವಾಗಿ ಅವಶ್ಯಕತೆಗೆ ಅನುಗುಣವಾಗಿ ಎಲ್ಲವನ್ನು ಒದಗಿಸುವ ವ್ಯವಸ್ಥೆ ಮಾಡುತ್ತೇನೆ. ವಿದ್ಯಾರ್ಥಿಗಳು ಸರಿಯಾಗಿ ಅಭ್ಯಾಸ ಮಾಡಬೇಕು ಕಾಲೇಜು ಮತ್ತು ಔರಾದ(ಬಿ) ಕ್ಷೇತ್ರದ ಹೆಸರನ್ನು ಎತ್ತರಕ್ಕೆ ಕೊಂಡೊಯ್ಯಬೇಕು ಎಂದು ತಿಳಿಸಿದರು.

ಕಾಲೇಜಿನಲ್ಲಿ ಬೋಧಕರ ಕೊರತೆಯಿರುವ ಬಗ್ಗೆ ಗಮನಕ್ಕಿದೆ. ಅತಿಥಿ ಶಿಕ್ಷಕರೇ ತರಗತಿಗಳನ್ನು ನಡೆಸುತ್ತಿದ್ದಾರೆ. ಸರ್ಕಾರದ ಹಂತದಲ್ಲಿ ನಿರಂತರ ಪತ್ರವ್ಯವಹಾರ ನಡೆಸುತ್ತಿದ್ದೇನೆ. ಬೋಧಕರನ್ನು ತರಲು ಅಗತ್ಯ ಕ್ರಮ ವಹಿಸುತ್ತೇನೆ. ಕಾಲೇಜಿನ ಎದುರು ಕೆಲವು ಬಸ್ಸುಗಳು ನಿಲ್ಲುತ್ತಿಲ್ಲವೆಂಬ ದೂರುಗಳಿವೆ. ಸಂಬಂಧಪಟ್ಟವರನ್ನು ಮಾತನಾಡಿಸಿ ಬಸ್ ತಂಗುವ ವ್ಯವಸ್ಥೆ ಮಾಡಲಾಗುವುದೆಂದು ಹೇಳಿದರು.

**ಉದ್ಯಾನ ನಿರ್ಮಾಣಕ್ಕೆ ಕ್ರಮ ವಹಿಸಿ:** ಇದೇ ವೇಳೆ ಶಾಸಕರು ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜು ಆವರಣದಲ್ಲಿ ಸಂಚರಿಸಿ ಸ್ವಚ್ಛತೆ ಹಾಗೂ ಮತ್ತಿತರೆ ವ್ಯವಸ್ಥೆಗಳನ್ನು ಪರಿಶೀಲಿಸಿದರು. ಕಾಲೇಜು ಆವರಣವನ್ನು ಶುಚಿಯಾಗಿ ಇಟ್ಟುಕೊಳ್ಳಬೇಕು. ಪಠ್ಯ ಚಟುವಟಿಕೆಗಳು ಅಚ್ಚುಕಟ್ಟಾಗಿ ನಡೆಯಬೇಕು ಎಂದು ಪ್ರಾಂಶುಪಾಲರಿಗೆ ತಿಳಿಸಿದರು.

ಕಾಲೇಜು ಆವರಣದಲ್ಲಿ ಉತ್ತಮ ಸ್ಥಳವಕಾಶವಿದೆ. ಸಂಪೂರ್ಣ ಆವರಣವನ್ನು ಸಮತಟ್ಟುಗೊಳಿಸಿ ಸುಂದರ ಉದ್ಯಾನ ನಿರ್ಮಿಸಲು ಪ್ರಸ್ತಾವನೆ ಸಲ್ಲಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಈ ಸಂದರ್ಭದಲ್ಲಿ ಕಾಲೇಜು ಪ್ರಾಂಶುಪಾಲರಾದ ವಿಜಯಶೆಟ್ಟಿ, ಮುಖಂಡರಾದ ಮಾರುತಿ ಚವ್ಹಾಣ, ಸಚಿನ್ ರಾಠೋಡ, ಬಾಬು ರಾಠೋಡ ಸೇರಿದಂತೆ ಇತರರು ಉಪಸ್ಥಿತರಿದ್ದರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.